21 August 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 257 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

**ಭಾವನಾಂತರಂಗ**

ಸತ್ಯವನ್ನು ನೆನಪಿನಲ್ಲಿಟ್ಟು ಕೊಳ್ಳುವುದು ಬೇಕಿಲ್ಲ ,ಆದರೆ ಸುಳ್ಳನ್ನು ಸರಿಯಾಗಿ ಹೇಳಲು ಪದೆ ಪದೇ ನೆನಪಿಸಿ ಕೊಳ್ಳಬೇಕಾಗುತ್ತದೆ!

-ಸ್ನೇಹಾ ಆನಂದ್



2019ರ 50:50 ನಿವೇಶವನ್ನು ರದ್ದುಪಡಿಸಲು ಸಾರಾ ಮಹೇಶ್ ಆಗ್ರಹ — ಪುಟ ಸಂ. 2



ಪಾದಚಾರಿ ಮಾರ್ಗ ತೆರವಿಗೆ ಆದೇಶಿದ್ದು ಯಾರು: ಲಕ್ಷ್ಮಣ್ ಪ್ರಶ್ನೆ — ಪುಟ ಸಂ. 4



ಸಚಿವ ನಾಗೇಂದ್ರ ರಾಜೀನಾಮೆ ನೀಡುವವರೆಗೂ ಹೋರಾಟ — ಪುಟ ಸಂ. 4

# ದಕ್ಷಿಣ ರಾಜ್ಯಗಳಿಗೂ ನ್ಯಾಯ ಕೊಡಿ

## ದೇಶದ ಆರ್ಥಿಕತೆ ಮುನ್ನಡೆಸುತ್ತಿರುವ ನಮಗೆ ನ್ಯಾಯಯುತ ಪಾಲು ನೀಡಿ

## ನಾವೂ ದೇಶದ ಅಭಿವೃದ್ಧಿ ಪಾಲುದಾರರು: ಅಮಿತ್ ಶಾಗೆ ಡಿಕೆಶಿ ಆಗ್ರಹ

**ಮಹಾಬಲಿಪುರಂ:** ನಾವು ಸಹ ಭಾರತದ ಅಭಿವೃದ್ಧಿಯ ಪಾಲುದಾರರು. ನಮಗೆ ನಮ್ಮ ನಿಧಿ, ನಮ್ಮ ಧ್ವನಿಯಲ್ಲಿ ನ್ಯಾಯ ಬೇಕು. ನಮಗೆ ನ್ಯಾಯಯುತವಾಗಿ ಅನುದಾನ ನೀಡಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.

ತಮಿಳುನಾಡಿನ ಮಹಾಬಲಿಪುರಂನಲ್ಲಿ ಗುರುವಾರ ಆಯೋಜಿಸಿದ್ದ 31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಡಿ.ಕೆ.ಶಿವಕುಮಾರ್ ಮಾತನಾಡಿದರು. ಕರ್ನಾಟಕ ಸೇರಿದಂತೆ ದಕ್ಷಿಣ ಭಾರತ ಬಲಿಷ್ಠವಾದಾಗ, ಭಾರತ ಮತ್ತಷ್ಟು ಬಲಿಷ್ಠವಾ ಗುತ್ತದೆ. ದಕ್ಷಿಣ ಭಾರತಕ್ಕೆ ಸಲ್ಲಬೇಕಾದ ನ್ಯಾಯ ಯುತ ಪಾಲನ್ನು ನೀಡಿ ಎಂದು ಹಕ್ಕು ಮಂಡಿಸಿದರು.

ಮುಂದಿನ ಚರ್ಚೆ ಸಂದರ್ಭದಲ್ಲಿ ಈ ಪ್ರತಿಯೊಂದು ವಿಷಯದ ಕುರಿತಾದ ನಿರ್ದಿಷ್ಟ ಸಮಸ್ಯೆಗಳು, ಸಂಬಂಧಿತ ಅಂಕಿ-ಅಂಶಗಳು ಹಾಗೂ ಕರ್ನಾಟಕ ಪ್ರಸ್ತಾಪಿಸುವ ಪರಿಹಾರ ಕ್ರಮಗಳನ್ನು ಈ ಮಂಡಳಿಯ ಮುಂದೆ ಮಂಡಿಸುತ್ತೇನೆ ಎಂದು ಹೇಳಿದರು. ಕರ್ನಾಟಕ ನಿಮ್ಮಲ್ಲಿ ದೂರು ನೀಡಲು ಬಂದಿಲ್ಲ. ದೇಶದ ಆರ್ಥಿಕತೆ ಮುನ್ನಡೆಸುತ್ತಿ ರುವ ರಾಜ್ಯಗಳಿಗೆ ಸಲ್ಲಬೇಕಾದ ಗೌರವ, ನ್ಯಾಯಯುತ ಅಂಶಗಳನ್ನು ಕೇಳಲು ಬಂದಿ ದ್ದೇವೆ. ನಮ್ಮೊಂದಿಗೆ ಹೆಜ್ಜೆ ಹಾಕಿ. ನಾವು ಭಾರತದ ಭವಿಷ್ಯ ಬೆಳಗುವ ಅವಕಾಶಗಳನ್ನು ಮುಂದುವರೆಸಿಕೊಂಡು ಹೋಗುತ್ತೇವೆ ಎಂದು ಹೇಳಿದರು.



16 ಶತಮಾನಗಳಿಗೂ ಹೆಚ್ಚಿನ ಇತಿಹಾಸ ಹೊಂದಿರುವ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಕನ್ನಡಿಗನಾಗಿ ಮಾತನಾಡುತ್ತಿದ್ದೇನೆ. ನಾನು ಕರ್ನಾಟಕದ ಪರವಾಗಿ ಮಾತ್ರವಲ್ಲ, ಇಡೀ ದಕ್ಷಿಣ ಭಾರತದ ಪರ ಮಾತನಾಡುತ್ತಿದ್ದೇನೆ. ಭಾರತದ ಅಭಿವೃದ್ಧಿ ಪಯಣವು ದಕ್ಷಿಣ ಭಾರತದ ಮೂಲಕ ಸಾಗುತ್ತದೆ. ಭಾರತದ ಅಭಿವೃದ್ಧಿಯ ತೇರು ದಕ್ಷಿಣ ಭಾರತ ಮೂಲಕವೇ ಸಾಗುತ್ತಿದೆ, ಸಾಗುತ್ತದೆ ಎಂದು ತಿಳಿಸಿದರು.

15ನೇ ಹಣಕಾಸು ಆಯೋಗದ ಅವಧಿಯಲ್ಲಿ ವಿಭಜಿಸಬಹುದಾದ ತೆರಿಗೆ ಭಾಗದಲ್ಲಿ ಕರ್ನಾಟಕದ ಪಾಲು ಶೇ.4.7ರಿಂದ ಶೇ.3.6ಕ್ಕೆ ಇಳಿಕೆಯಾಯಿತು. ಸುಮಾರು ಶೇ.23ರಷ್ಟು ಕಡಿತವಾಗಿದೆ. ಆರು ವರ್ಷಗಳ ಅವಧಿಯಲ್ಲಿ ರಾಜ್ಯಕ್ಕೆ ಅಂದಾಜು 65,000 ಕೋಟಿಯಷ್ಟು ನಷ್ಟ ಉಂಟಾಗಿದೆ. 15ನೇ ಹಣಕಾಸು ಆಯೋಗ ಕರ್ನಾಟಕಕ್ಕೆ 5,495 ಕೋಟಿ ವಿಶೇಷ ಅನುದಾನ ಮತ್ತು 6,000 ಕೋಟಿ ನಿರ್ದಿಷ್ಟ ಅನುದಾನವನ್ನು ಶಿಫಾರಸು ಪುಟ 2ಕ್ಕೆ

### ದೇಶದ ಶೇ.20 ಜನಸಂಖ್ಯೆ: ಜಿಡಿಪಿಗೆ ಶೇ.33 ಕೊಡುಗೆ

ದಕ್ಷಿಣದ ಐದು ರಾಜ್ಯಗಳು ಭಾರತದ ಒಟ್ಟು ಜನಸಂಖ್ಯೆಯ ಸುಮಾರು ಶೇ.20 ರಷ್ಟನ್ನು ಹೊಂದಿದ್ದರೂ, ದೇಶದ ಒಟ್ಟು ಜಿಡಿಪಿಗೆ ಸುಮಾರು ಶೇ.33ರಷ್ಟು ಕೊಡುಗೆ ನೀಡುತ್ತಿವೆ. ಅಂದರೆ, ಭಾರತದ ಆರ್ಥಿಕತೆಯಲ್ಲಿ ಉತ್ಪತ್ತಿಯಾಗುವ ಪ್ರತಿ ಮೂರು ರೂಪಾಯಿಗಳಲ್ಲಿ ಒಂದು ರೂಪಾಯಿ ದಕ್ಷಿಣ ಭಾರತದಿಂದ ಬರುತ್ತದೆ. ಭಾರತದ ಆರ್ಥಿಕತೆಯ ಈ ಪ್ರಮುಖ ಎಂಜಿನ್‌ನಲ್ಲಿ ಕರ್ನಾಟಕವು ಅತ್ಯಂತ ಬಲಿಷ್ಠ ಚಾಲಕ ಶಕ್ತಿಗಳಲ್ಲಿ ಒಂದಾಗಿದೆ ಎಂದು ಪುನರುಚ್ಚರಿಸಿದರು.ಕರ್ನಾಟಕ ಸಾಫ್ಟ್‌ವೇರ್ ರಫ್ತಿನಲ್ಲಿ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ. ಕರ್ನಾಟಕದ ಕೊಡುಗೆ ಶೇ.42ರಷ್ಟಿದೆ. ಸುಮಾರು 1,100 ಗ್ಲೋಬಲ್ ಕೇಪಬಲಿಟಿ ಸೆಂಟರ್‌ಗಳನ್ನು ಪುಟ 2ಕ್ಕೆ

### ಪ್ರಜ್ವಲ್‌ಗೆ ಮೊಬೈಲ್ ಕೊಟ್ಟಿದ್ದವನ ಬಂಧನ

**ಬೆಂಗಳೂರು:** ಮನೆಗೆಲಸದ ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಜೆಡಿಎಸ್ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಅಕ್ರಮವಾಗಿ ಮೊಬೈಲ್ ಪೂರೈಸಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ.



ಬಾಣಸವಾಡಿ ನಿವಾಸಿ ನವೀನ್ ಬಂಧಿತ ಆರೋಪಿ.

ಅಪರಾಧ ಪ್ರಕರಣದಲ್ಲಿ ಹಿಂದೆ ಜೈಲು ಸೇರಿದ್ದ ನವೀನ್‌ಗೆ ಪ್ರತಾಪ್ ರಾಯ್ ಪರಿಚಯವಾಗಿತ್ತು. ಜೈಲಿನಿಂದ ಹೊರಬಂದ ಬಳಿಕ ನವೀನ್, ಪ್ರತಾಪ್ ರಾಯ್‌ಗೆ ಅಕ್ರಮವಾಗಿ ಮೊಬೈಲ್ ಫೋನ್ ತಲುಪಿಸಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಸಿಸಿಬಿ ಪೊಲೀಸ್ ತಂಡ ಪರಪ್ಪನ ಅಗ್ರಹಾರ ಜೈಲಿನ ಮೇಲೆ ಹಠಾತ್ ದಾಳಿ ನಡೆಸಿದ ವೇಳೆ ಪ್ರಜ್ವಲ್ ರೇವಣ್ಣ ಮತ್ತು ಇನ್ನೊಬ್ಬ ಕೈದಿ ಬಳಿ ಮೊಬೈಲ್ ಫೋನ್ ಹಾಗೂ ಪೆನ್ ಡ್ರೈವ್ ಪತ್ತೆಯಾಗಿತ್ತು.

### ಪ್ರದೂಷ್ ಮಾಫಿ ಸಾಕ್ಷಿ ಅರ್ಜಿ: 28ಕ್ಕೆ ಆದೇಶ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಪ್ರದೋಷ್ ಮಾಫಿ ಸಾಕ್ಷಿ ಅರ್ಜಿ ಆದೇಶವನ್ನು 59ನೇ ಸೆಷನ್ಸ್ ಕೋರ್ಟ್ ಆ. 24ಕ್ಕೆ ಕೋರ್ಟ್ ಮುಂದೂ ಡಿದೆ.



ಪ್ರದೂಷ್ ಪುಟ 2ಕ್ಕೆ

### ನೀರು ಹಂಚಿಕೆ: ಸೌಹಾರ್ದತೆ ಅಗತ್ಯ

#### ತ.ನಾಡು ಸಿಎಂ ವಿಜಯ್ ಮುಂದೆ ಡಿಕೆಶಿ ಪ್ರತಿಪಾದನೆ

**ಬೆಂಗಳೂರು:** ರಾಜ್ಯಗಳ ನಡುವೆ ಆಗಾಗ ಸಂಘರ್ಷಕ್ಕೆ ದಾರಿ ಮಾಡಿಕೊಡುವ ನದಿ ನೀರಿನ ಹಂಚಿಕೆ ಸಮಸ್ಯೆಗೆ ಸೌಹಾರ್ದ ಮಾತುಕತೆ ಹಾಗೂ ಸಹಕಾರ ತತ್ವವೇ ಮೂಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟರು.

ತಮಿಳುನಾಡಿನ ಚೆನ್ನೈನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಷಾ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ದಕ್ಷಿಣ ವಲಯ ಮಂಡಳಿಯ 31ನೇ ಸಭೆಯಲ್ಲಿ ಮಾತನಾಡಿದರು. ಈ ಸಂದರ್ಭ ತಮಿಳುನಾಡು ಸಿಎಂ ವಿಜಯ್ ಅವರು ಡಿಕೆಶಿ ಪಕ್ಕದಲ್ಲಿಯೇ ಕುಳಿತಿದ್ದರು.

ಪ್ರತಿ ರಾಜ್ಯಕ್ಕೂ ನೀರಿಗಿಂತ ಮಹತ್ವದ ಸಂಪನ್ಮೂಲ ಮತ್ತೊಂದಿಲ್ಲ. ನಮ್ಮ ನದಿಗಳು ರಾಜಕೀಯ ಗಡಿಗಳನ್ನು ಗುರುತಿಸುವುದಿಲ್ಲ. ನೀರು ನಮ್ಮನ್ನು ಒಗ್ಗೂಡಿಸಬೇಕು, ವಿಭಜಿಸಬಾರದು. ನೀರಿನ ಹಂಚಿಕೆಯಿಂದ ನೀರಿನ ಸಹಕಾರದತ್ತ ಸಾಗುವ ಸಮಯ ಈಗ ಬಂದಿದೆ. ಸಂಪನ್ಮೂಲಗಳಲ್ಲಿ ನ್ಯಾಯಯುತ ಪಾಲು



ಪಡೆಯುವುದು ಅಗತ್ಯ. ನಮ್ಮ ಧ್ವನಿಯಲ್ಲಿ ನ್ಯಾಯ ಒಂದು ಭಾಗವಾದರೆ, ನಮ್ಮ ಸಂಪನ್ಮೂಲಗಳಲ್ಲಿ ನ್ಯಾಯಯುತ ಪಾಲು ಇನ್ನೊಂದು ಭಾಗವಾಗಿದೆ ಎಂದು ಪ್ರತಿಪಾದಿಸಿದರು.

ನಮ್ಮ ನಿಲುವು ಸಮಾನತೆ. ಪಾರದರ್ಶಕತೆ. ಸಹಕಾರ ಎನ್ನುವ ಮೂರು ತತ್ವಗಳ ಮೇಲೆ ಆಧಾರದ ಮೇಲಿವೆ. ಆದರೆ ಸಹಕಾರ ಎರಡೂ ದಿಕ್ಕಿನಲ್ಲೂ ಇರಬೇಕು. ಕರ್ನಾಟಕ ಸದಾ ಪುಟ 2ಕ್ಕೆ

### ಕಬಿನಿಯಿಂದ ನೀರು ಬಿಡುಗಡೆ

#### ಕಾವೇರಿ ಕಣಿವೆಯಿಂದ 14392 ಕ್ಯೂಸೆಕ್ ನೀರು ಹರಿವು

**ಬೆಂಗಳೂರು:** ಕಾವೇರಿ ಕಣಿವೆಯ ಜಲಾಶಯಗಳಿಂದ ನೀರಿನ ಹೊರಹರಿವಿನ ಪ್ರಮಾಣವನ್ನು ಏರಿಕೆ ಮಾಡಲಾಗಿದೆ. ಕಬಿನಿ ಜಲಾಶಯದಿಂದ 14392 ಕ್ಯೂಸೆಕ್ ನೀರು ಹರಿಸಲಾಗುತ್ತಿದೆ. ನಿನ್ನೆ 13600 ಕ್ಯೂಸೆಕ್ ನೀರು ಹೊರ ಬಿಡಲಾಗುತ್ತಿತ್ತು.

ಕಾವೇರಿ ಕಣಿವೆಯ ನಾಲ್ಕು ಜಲಾಶಯಗಳಿಗೆ 13700 ಕ್ಯುಸೆಕ್ ನೀರು ಒಳಹರಿವು ಇದೆ. ಆದರೆ, ಹೊರಹರಿವಿನ ಪ್ರಮಾಣ 23700 ಕ್ಯುಸೆಕ್ ಗೂ ಅಧಿಕವಿದೆ. ಒಳಹರಿವಿಗಿಂತ ಸುಮಾರು 10 ಸಾವಿರ ಕ್ಯುಸೆಕ್ ನೀರು ಹೊರ ಬಿಡಲಾಗುತ್ತಿದೆ.

ನಾಲ್ಕೂ ಜಲಾಶಯಗಳಲ್ಲಿ 86.37 ಟಿಎಂಸಿ ನೀರು ಲಭ್ಯವಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 111 ಟಿಎಂಸಿ ನೀರು ಲಭ್ಯವಿತ್ತು. ಒಟ್ಟು 114 ಟಿಎಂಸಿ ನೀರು ಸಂಗ್ರಹಿಸುವ ಸಾಮರ್ಥ್ಯವಿದೆ.

ಕಬಿನಿ ಜಲಾಶಯದಿಂದ ಸತತ ನೀರು ಹರಿಸುತ್ತಿರುವ ಕಾರಣ ನೀರಿನ ಮಟ್ಟ ಕುಸಿದಿದೆ. ಕಬಿನಿ ಜಲಾಶಯಕ್ಕೆ 6957 ಕ್ಯುಸೆಕ್ ನೀರು ಒಳಹರಿವು



ಇದೆ. ಜಲಾಶಯದ ನೀರಿನ ಮಟ್ಟ 2276.75 ಅಡಿಗೆ ಇಳಿದಿದೆ. ಶೇ 78ರಷ್ಟು ನೀರು ಇಲ್ಲಿ ಸಂಗ್ರಹವಿದೆ. ಜಲಾಶಯದಲ್ಲಿ ಈಗ 15.23 ಟಿಎಂಸಿ ನೀರು ಲಭ್ಯವಿದೆ. ಕಳೆದ ವರ್ಷ 19.25 ಟಿಎಂಸಿ ನೀರಿತ್ತು.

ಕೃಷ್ಣರಾಜಸಾಗರ ಜಲಾಶಯಕ್ಕೆ 1628 ಕ್ಯುಸೆಕ್ ನೀರು ಹರಿದು ಬರುತ್ತಿದೆ. 2294 ಕ್ಯುಸೆಕ್ ಹೊರ ಬಿಡಲಾಗುತ್ತಿದೆ. ಜಲಾಶಯದಲ್ಲಿ ಈಗ ಶೇ 62ರಷ್ಟು ನೀರು ಸಂಗ್ರಹವಿದೆ. 30.87 ಪುಟ 2ಕ್ಕೆ

### ಬೆಂಗಳೂರಿನಲ್ಲಿ 911 ಅಕ್ರಮ ವಲಸಿಗರು: ಪ್ರಿಯಾಂಕ್ ಖರ್ಗೆ

**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ಅಕ್ರಮ ವಲಸಿಗರ ಸಂಖ್ಯೆ ಹೆಚ್ಚುತ್ತಿದೆ. ನಗರದಲ್ಲಿ 911 ಅಕ್ರಮ ವಿದೇಶ ನುಸುಳುಕೋರರು ಇದ್ದಾರೆ ಎಂದು ಸರ್ಕಾರವೇ ಒಪ್ಪಿಕೊಂಡಿದೆ.

ವಿಧಾನ ಪರಿಷತ್ತಿನಲ್ಲಿ ಗುರುವಾರ ಪ್ರಶ್ನೋತ್ತರ ಕಲಾಪದ ವೇಳೆ ಬಿಜೆಪಿ ಸದಸ್ಯ ಗೋಪಿನಾಥ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ಅಕ್ರಮ ವಲಸಿಗ ನುಸುಳುಕೋರರು ಅಪರಾಧ ಕೃತ್ಯದಲ್ಲಿ ಭಾಗಿಯಾಗಿರುವ ಬಗ್ಗೆ ಮಾಹಿತಿ ನೀಡಿದರು.



ಬೆಂಗಳೂರಿನಲ್ಲಿ ವೀಸಾ, ಪಾಸ್‌ಪೋರ್ಟ್ ಅವಧಿ ಇರುವ ವಿದೇಶಿಗರು 5304 ಜನ ಇದ್ದಾರೆ. ವೀಸಾ, ಪಾಸ್‌ಪೋರ್ಟ್ ಅವಧಿ ಮೀರಿದ್ದರೂ ಅಕ್ರಮವಾಗಿ 446 ವಿದೇಶಿಗರು ನೆಲೆಸಿದ್ದಾರೆ. ಕಳೆದ 3 ವರ್ಷಗಳಲ್ಲಿ ದೇಶದೊಳಗೆ ಅಕ್ರಮವಾಗಿ ನುಸುಳಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಮಾಹಿತಿ ಇಲ್ಲ. ಆದರೆ ಬೆಂಗಳೂರಿನಲ್ಲಿ ಮೂರು ವರ್ಷಗಳಲ್ಲಿ 911 ಜನ ಅಕ್ರಮ ವಲಸಿಗರನ್ನು ಗೃಹ ಇಲಾಖೆ ಗುರುತಿಸಿದೆ ಎಂದರು.

ಇವರಲ್ಲಿ ಬಾಂಗ್ಲಾದೇಶದ 868, ಪಾಕಿಸ್ತಾನ 20, ನೈಜೀರಿಯಾ 13, ಶ್ರೀಲಂಕಾ 8, ಮಯನ್ಮಾರ್ 1, ಉಗಾಂಡಾದ ಒಬ್ಬ ಇದ್ದಾನೆ. 31 ದೇಶದ 365 ವಿದೇಶಿಗರು ಅಪರಾಧ ಕೃತ್ಯದಲ್ಲಿ ಭಾಗಿಯಾಗಿರುವ ಮಾಹಿತಿ ಇದೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

### ಕೆಪಿಎಸ್‌ಸಿ ಸದಸ್ಯೆ ಶಾಂತ ಇಡಿಗೆ ಸಿಗದೆ ಪರಾರಿ

**ಬೆಂಗಳೂರು:** ಕೆಪಿಎಸ್‌ಸಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಸರ್ಚ್ ವಾರೆಂಟ್ ಹಿಡಿದು ಹೋದ ಇಡಿ ಅಧಿಕಾರಿಗಳಿಗೆ ಶಾಕ್ ಎದುರಾಗಿದೆ. ಕೆಪಿಎಸ್‌ಸಿ ಸದಸ್ಯೆ ಶಾಂತ ಹೊಸಮನಿ ಎಸ್ಕೇಪ್ ಆಗಿದ್ದಾರೆ.

ಇಡಿ ದಾಳಿ ಬೆನ್ನಲ್ಲೇ ಶಾಂತಿ ಹೊಸಮನಿ ಅವರು ಪರಾರಿಯಾಗಿದ್ದಾರೆ. ಯಾವುದೇ ಸಂಪರ್ಕಕ್ಕೆ ಸಿಗುತ್ತಿಲ್ಲ. ಗೋವಾ, ಮೈಸೂರಿಗೆ ತೆರಳಿರುವ ಬಗ್ಗೆ ಇಡಿಗೆ ಮಾಹಿತಿ ಸಿಕ್ಕಿದೆ. ಸದ್ಯ ಹುಡುಕಾಟ ನಡೆಸಲಾಗಿದೆ.

ಕೆಪಿಎಸ್‌ಸಿ ಅಕ್ರಮ ನೇಮಕಾತಿ ಪ್ರಕರಣ ಸಂಬಂಧ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಮನೆ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದರು. ಪುಟ 2ಕ್ಕೆ

### ಸಚಿವ ನಾಗೇಂದ್ರಗೆ ಹೈಕೋರ್ಟ್ ರಿಲೀಫ್

**ಬೆಂಗಳೂರು:** ನಾಗೇಂದ್ರ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸುವವರೆಗೆ ವಿಧಾನಸಭೆ ಕಲಾಪ ನಡೆಯಲು ಬಿಡುವುದಿಲ್ಲ ಎಂದು ವಿಪಕ್ಷಗಳು ಪಟ್ಟು ಹಿಡಿದಿರುವ ಬೆನ್ನಲ್ಲೇ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ.ನಾಗೇಂದ್ರ ಅವರಿಗೆ ಹೈಕೋರ್ಟ್ ಗುರುವಾರ ಬಿಗ್ ರಿಲೀಫ್ ನೀಡಿದೆ.

ಪ್ರಕರಣದಲ್ಲಿ ಈಗಾಗಲೇ ಜಾಮೀನು ಪಡೆದಿರುವ ಸಚಿವ ಬಿ.ನಾಗೇಂದ್ರ ಅವರಿಗೆ ನ್ಯಾಯಾಲಯದ ಅನುಮತಿಯಿಲ್ಲದೆ ರಾಜ್ಯ ಬಿಟ್ಟು ಪುಟ 2ಕ್ಕೆ




### ತುಮಕೂರಿಗೆ ಸಿಗದ ಏರ್‌ಪೋರ್ಟ್

#### ರಾಮನಗರ ಸಮೀಪದ 3 ಸ್ಥಳ ಶಾರ್ಟ್‌ಲಿಸ್ಟ್: ಎಂ.ಬಿ.ಪಾಟೀಲ್

**ಬೆಂಗಳೂರು:** ನಗರದಲ್ಲಿ ಎರಡನೇ ವಿಮಾನ ನಿಲ್ದಾಣ ನಿರ್ಮಿಸಲು ಮೂರು ಸ್ಥಳಗಳನ್ನು ಶಾರ್ಟ್‌ಲಿಸ್ಟ್ ಮಾಡಲಾಗಿದೆ. ತುಮಕೂರು ಜಿಲ್ಲೆಯಲ್ಲಿ ಮಾಡುವ ಪ್ರಸ್ತಾಪ ಇಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ.



ತುಮಕೂರು ಎಂಎಲ್‌ಎ ಜ್ಯೋತಿ ಗಣೇಶ್ ಕೇಳಿದ ಚುಕ್ಕೆ ಗುರುತಿಲ್ಲದ ಪ್ರಶ್ನೆಗೆ ಸಚಿವ ಎಂ.ಬಿ ಪಾಟೀಲ್ ಅಧಿವೇಶನದಲ್ಲಿ ಉತ್ತರಿಸಿದರು. ಎರಡನೇ ವಿಮಾನ ನಿಲ್ದಾಣಕ್ಕೆ ಸೋಮನಹಳ್ಳಿ-ಕನಕಪುರ ರಸ್ತೆ ರಾಮನಗರ, ಚೂಡಹಳ್ಳಿ-ಕನಕಪುರ ರಸ್ತೆ ರಾಮನಗರ, ನೆಲಮಂಗಲ ಗುಡೆ ಮಾರನಹಳ್ಳಿ ಸೇರಿದಂತೆ ಮೂರು ಸ್ಥಳಗಳು ಶಾರ್ಟ್‌ಲಿಸ್ಟ್ ಆಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು. ಜೊತೆಗೆ ಹಾರೋಹಳ್ಳಿ ಕೂಡ ಅಂತಿಮ ಪರಿಶೀಲನೆಯ ಹಂತದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪುಟ 2ಕ್ಕೆ

### ಜೈಲಲ್ಲಿ ಮೊಬೈಲ್: ಮತ್ತಿಬ್ಬರ ಅಮಾನತು

**ಬೆಂಗಳೂರು:** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಇರಿಸಲಾಗಿದ್ದ ಸೆಲ್ ಸೇರಿದಂತೆ ಜೈಲಿನೊಳಗೆ ಮೊಬೈಲ್‌ಗಳು ಪತ್ತೆಯಾದ ಪ್ರಕರಣದಲ್ಲಿ ಮತ್ತಿಬ್ಬರು ಜೈಲಾಧಿಕಾರಿಗಳನ್ನು ಅಮಾನತು ಮಾಡಲಾಗಿದೆ.



ಜೈಲರ್ ರಮೇಶ್ ಧರ್ಮಟ್ಟಿ ಹಾಗೂ ವಾರ್ಡರ್ ಮಹೇಶ್ ಸಜ್ಜನ್ ಅಮಾನತುಗೊಂಡ ಅಧಿಕಾರಿಗಳು. ವಿಚಾರಣೆ ಬಾಕಿ ಇರುವ ಹಿನ್ನೆಲೆಯಲ್ಲಿ ಕರ್ತವ್ಯಲೋಪದ ಆರೋಪದಡಿ ಇಬ್ಬರನ್ನೂ ಅಮಾನತುಗೊಳಿಸಲಾಗಿದೆ ಎಂದು ಕಾರಾಗೃಹಗಳ ಮಹಾನಿರ್ದೇಶಕ ಅಲೋಕ್ ಕುಮಾರ್ ತಿಳಿಸಿದ್ದಾರೆ.

### ನಟ ಮುಖ್ಯಮಂತ್ರಿ ಚಂದ್ರುಗೆ ಜೀವಮಾನ ರಂಗಸಾಧನೆ ಪ್ರಶಸ್ತಿ

**ಬೆಂಗಳೂರು:** ಕರ್ನಾಟಕ ನಾಟಕ ಅಕಾಡೆಮಿ ವಾರ್ಷಿಕ ಪ್ರಶಸ್ತಿಗಳನ್ನು ಪ್ರಕಟಿಸಿದೆ. ಚಿತ್ರನಟ ಮುಖ್ಯಮಂತ್ರಿ ಚಂದ್ರು ಅವರನ್ನು ಜೀವಮಾನ ರಂಗಸಾಧನೆ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.



ಅಕಾಡೆಮಿ ಅಧ್ಯಕ್ಷ ಡಾ.ಕೆ.ವಿ.ನಾಗರಾಜ ಮೂರ್ತಿ ನೇತೃತ್ವದ ಕಾರ್ಯಕಾರಿ ಸಮಿತಿ ಆಯ್ಕೆ ಪಟ್ಟಿಯನ್ನು ಗುರುವಾರ ಬಿಡುಗಡೆ ಮಾಡಿದೆ. ಜೀವಮಾನ ರಂಗ ಸಾಧನೆ ಪ್ರಶಸ್ತಿಯು 50 ಸಾವಿರ ರೂ. ನಗದು ಹಾಗೂ ನಟರಾಜ ವಿಗ್ರಹ, ಫಲಕವನ್ನು ಒಳಗೊಂಡಿದೆ.

ಧಾರವಾಡದ ವಿಶ್ವೇಶ್ವರಿ ಬಸವಲಿಂಗಯ್ಯ ಹಿರೇಮಠ, ಇಳಕಲ್‌ನ ರಮೇಶ ತಿಪ್ಪಣ್ಣ ಚಿತ್ರಗಾರ, ಶಿವಾನಂದ ತಗಡೂರು, ಆರ್.ರಾಮಕೃಷ್ಣ ಅನಸೂಯ ರೇವಣ ಸಿದ್ದಯ್ಯ ಹೊಸೂರುಮಠ ಸೇರಿದಂತೆ 23 ರಂಗ ಸಾಧಕರು ವಾರ್ಷಿಕ ರಂಗಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿ ಪುಟ 2ಕ್ಕೆ

### ಶೂಟೌಟ್ ಸಿಟ್ಟಿಗೆ ಅರಣ್ಯಕ್ಕೆ ಬೆಂಕಿ

#### ಗ್ರಾಮಸ್ಥರ ಕೃತ್ಯ ಶಂಕೆ: 10 ಎಕರೆ ಕಾಡು ನಾಶ

**ಚಾಮರಾಜನಗರ:** ಹನೂರು ವನ್ಯಜೀವಿ ವಲಯದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ನಡೆಸಿದ ಎನ್‌ಕೌಂಟರ್‌ಗೆ ಮೂವರು ಬಲಿಯಾದ ಹಿನ್ನೆಲೆಯಲ್ಲಿ ಆಕ್ರೋಶಗೊಂಡಿರುವ ಗ್ರಾಮಸ್ಥರು ಮಲೆ ಮಹದೇಶ್ವರ ವನ್ಯಜೀವಿಧಾಮದ ಅರಣ್ಯ ಪ್ರದೇಶಕ್ಕೆ ಬೆಂಕಿ ಹಚ್ಚಿದ್ದಾರೆ. ಇದರಿಂದ ಸುಮಾರು 10 ಎಕರೆ ಅರಣ್ಯ ಪ್ರದೇಶ ಬೆಂಕಿಗೆ ಆಹುತಿ ಆಗಿದೆ.

ಎನ್‌ಕೌಂಟರ್ ನಂತರ ಕಳ್ಳಬೇಟೆಗಾರರು ಅರಣ್ಯ ಇಲಾಖೆ ಬೇಟೆ ತಡೆ ಶಿಬಿರವನ್ನು ಗುರಿಯಾಗಿಸಿಕೊಂಡು ಸರಣಿ ಕೃತ್ಯಗಳನ್ನು ಎಸಗುತ್ತಿದ್ದಾರೆ. ಕಾವೇರಿ ಹಾಗೂ ಮಲೆ ಮಹದೇಶ್ವರ ವನ್ಯಜೀವಿಧಾಮಗಳಲ್ಲಿ ಅರಣ್ಯ ಸಿಬ್ಬಂದಿಯನ್ನು ದುಷ್ಕರ್ಮಿಗಳು ಟಾರ್ಗೆಟ್ ಮಾಡಿ ದಾಳಿ ನಡೆಸುತ್ತಿದ್ದಾರೆ. ಇದು ತೀವ್ರ ಆತಂಕಕ್ಕೆ ಕಾರಣವಾಗಿದೆ.

ಶಿಲುಬೆಪುರ ಅರಣ್ಯ ಪ್ರದೇಶದಲ್ಲಿ ಜಿಲೇಟಿನ್ ಕಡ್ಡಿ ಇಟ್ಟು ಕಳ್ಳಬೇಟೆ ತಡೆ ಶಿಬಿರಗಳನ್ನು ಸ್ಫೋಟಿ



ಸಿದ್ದರು. ಬಳಿಕ ಈಗ ದುಷ್ಕರ್ಮಿಗಳು ಕಾಡಿಗೆ ಬೆಂಕಿ ಹಚ್ಚಿದ್ದಾರೆ. ಸುಮಾರು 10 ಎಕರೆ ಅರಣ್ಯ ಸಂಪೂರ್ಣವಾಗಿ ಭಸ್ಮವಾಗಿದೆ ಎಂದು ಅರಣ್ಯ ಇಲಾಖೆ ಮೂಲಗಳು ತಿಳಿಸಿವೆ. ಪುಟ 2ಕ್ಕೆ

### ಯಥಾಸ್ಥಿತಿಯಲ್ಲಿಯೇ ಮಹಿಳಾ ಮೀಸಲು ಜಾರಿಗೆ ಡಿಕೆಶಿ ಆಗ್ರಹ




**ಮಹಾಬಲಿಪುರಂ:** ಲೋಕಸಭಾ ಸ್ಥಾನಗಳನ್ನು ಯಥಾಸ್ಥಿತಿ ಕಾಯ್ದುಕೊಂಡು ಮಹಿಳಾ ಮೀಸಲಾತಿ ಜಾರಿ ಮಾಡಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಆಗ್ರಹಿಸಿದರು.

ತಮಿಳುನಾಡಿನ ಮಹಾಬಲಿಪುರಂನಲ್ಲಿ ಗುರುವಾರ ನಡೆದ 31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಶಿವಕುಮಾರ್ ಮಾತನಾಡಿದರು. ಮಹಿಳೆಯರಿಗೆ ಸಿಗಬೇಕಾದ ನ್ಯಾಯ ಮತ್ತಷ್ಟು ವಿಳಂಬವಾಗಬಾರದು. ಮಹಿಳೆಯರು ತಮ್ಮ ನ್ಯಾಯಯುತ ಪ್ರಾತಿನಿಧ್ಯಕ್ಕಾಗಿ ಬಹಳ ಕಾಲದಿಂದ ಕಾಯುತ್ತಿದ್ದಾರೆ. ಮಹಿಳಾ ಮೀಸಲಾತಿಯು ಮತ್ತೊಂದು ಜನಗಣತಿಯವರೆಗೆ ಕಾಯಬೇಕಾದ ಅಗತ್ಯವಿಲ್ಲ. ಪ್ರಸ್ತುತ ಇರುವ ಲೋಕಸಭಾ ಸ್ಥಾನಗಳ ಕಾಯ್ದುಕೊಂಡು ಮಹಿಳಾ ಮೀಸಲಾತಿ ಜಾರಿ ಮಾಡಲು ನಿರ್ಣಯ ಅಂಗೀಕರಿಸಬೇಕು. ಈ ಸಾಮೂಹಿಕ ನಿಲುವಿನ ಹಿಂದೆ ನನ್ನ ಸಹ ಮುಖ್ಯಮಂತ್ರಿಗಳು ಒಗ್ಗಟ್ಟಾಗಿ ನಿಲ್ಲಬೇಕೆಂದು ಡಿಕೆಶಿ ಕೋರಿದರು.

# 2019ರ 50:50ನಿವೇಶವನ್ನು ರದ್ದುಪಡಿಸಲು ಸಾರಾ ಮಹೇಶ್ ಆಗ್ರಹ



ಮೈಸೂರು: 2019ರಿಂದ 2023ರವರಗಿನ 50:50 ಅನುಪಾತದಲ್ಲಿ ಹಂಚಿಕೆಯಾಗಿರುವ ನಿವೇಶನವನ್ನು ಕೂಡ ರದ್ದು ಪಡಿಸಬೇಕು ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಆಗ್ರಹಿಸಿದರು.

ನಗರದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 50:50 ಅನುಪಾತದಲ್ಲಿ ಹಂಚಿಕೆಯಾದ 2023ರಿಂದ ಇಲ್ಲಿಯವರೆಗೆ 1100 ನಿವೇಶವನ್ನು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯನವರು ರದ್ದು ಮಾಡಿರುವುದು ಸ್ವಾಗತಾರ್ಹವಾಗಿದೆ. ಆದರೆ 2023 ರಿಂದ 1110 ನಿವೇಶನ ಮಾತ್ರ ರದ್ದು ಮಾಡಿದ್ದೀರ.20 19 ರಿಂದ 2023 ರವರೆಗಿನ ನಿವೇಶನ ರದ್ದು ಮಾಡಿಲ್ಲ.2019ರಿಂದ 2023ರವರಗೆ 50: 50 ಅನುಪಾತದಲ್ಲಿ ಹಂಚಿಕೆಯಾಗಿರುವ ಎಲ್ಲ ನಿವೇಶನಗಳನ್ನು ರದ್ದು ಮಾಡಬೇಕು , ನಿಜವಾದ ಭೂ ಮಾಲೀಕನಿಗೆ ಒಪ್ಪಂದದಂತೆ ನಿವೇಶನ ನೀಡಬೇಕು ಎಂದು ಒತ್ತಾಯಿಸಿದರು.

ಯತೀಂದ್ರ ಸಿದ್ದರಾಮಯ್ಯ, ತಮ್ಮ ತಾಯಿಗೆ ಮಂಜೂರಾಗಿರುವ ನಿವೇಶವನ್ನು ನೀವೇ ಎಂಡಿಎ ವಶಕ್ಕೆ ನೀಡಿದ್ದಿರಾ? 19 ರಿಂದ 23 ರವರೆಗೆ ರದ್ದು ಮಾಡದೇ ಇರುವುದು 14 ನಿವೇಶನಕ್ಕ ಎನ್ನುವ ಅನುಮಾನ ಎಲ್ಲರಿಗೂ ಇದೆ. ನ್ಯಾಯಾಲಯ ನಿರ್ದೇಶನದಂತೆ ಉಳಿದ ಎಲ್ಲಾ ನಿವೇಶನಗಳನ್ನು ರದ್ದು ಮಾಡಿ ದಿಟ್ಟತನ ಪ್ರದರ್ಶನ ಮಾಡಬೇಕು ಎಂದು ಆಗ್ರಹಿಸಿದರು.

2019ರಿಂದ 2023ರವರಗೆ 50:50 ಅನುಪಾತದಲ್ಲಿ ಹಾಗೂ 2023ರ ನಂತರದವರಿಗೆ ಒಂದು ನ್ಯಾಯವೇ? 50: 50 ನಿವೇಶನಗಳನ್ನು ರದ್ದು ಮಾಡಿ, 5ಸಾವಿರ ಕೋಟಿ ರೂ., ಆಸ್ತಿಯನ್ನು ನಗರಾಭಿವೃದ್ಧಿ ಸಚಿವರು ಉಳಿಸಬೇಕು. 50:50 ಅನುಪಾತದಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಿಸಿ, ಭೂಮಿ ಕಳೆದುಕೊಂಡ ಅರ್ಹರಿಗೆ ನಿವೇಶನ ನೀಡಬೇಕು. ವಂಚನೆಯ ಪ್ರಕರಣವನ್ನು ತಡೆದು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಡಳಿತಕ್ಕೆ ಮತ್ತಷ್ಟು ಚುರುಕುಗೊಳಿಸಬೇಕು ಎಂದು ಒತ್ತಾಯಿಸಿದರು. ಕಾವೇರಿ ಭಾಗದಲ್ಲಿ ಸರಿಯಾಗಿ ಮಳೆಯಾಗದೇ, ನೀರಿಗಾಗಿ ರೈತರು, ಜನ ,ಜಾನುವಾರುಗಳು ಪರದಾಡುತ್ತಿದ್ದೇವೆ. ಇಂತಹ ಸಮಯದಲ್ಲಿ ತಮಿಳುನಾಡು ರೈತರಿಗೆ ನೀರು ಹರಿಸುವುದು ಸರಿಯೇ?, ಕೆ.ಆರ್,ನಗರ ಭಾಗದಲ್ಲಿ ಭತ್ತ, ಕಬ್ಬು ಹೆಚ್ಚಾಗಿ ಬೆಳೆಯುತ್ತಾರೆ. ಈಗ ನೀರು ನೀಡಿ, ಬೆಳೆ ಬೆಳೆಯಬೇಡ ಎಂದರೆ ಹೇಗೆ? ನೀರಾವರಿ ಸಚಿವ ರೈತರಿಗೆ ಬೆಳೆ ಪರಿಹಾರ ಕೊಡುತ್ತಾರಾ? ನಮ್ಮ ಭಾಗದಲ್ಲಿ ಭತ್ತ ಕಬ್ಬು ಹೆಚ್ಚು ಬೆಳೆಯುವುದು. ಈಗ ನೀರು ಕೊಟ್ಟಿದ್ದರ ಅದ್ರೆ ಬೆಳೆಯ ಬೇಡಿ ಅದ್ರೇ ಹೇಗೆ.!? ನೀರಾವರಿ ಸಚಿವರು ಅವರಿಗೆ ಪರಿಹಾರ ಕೊಡುತ್ತಾರಾ? ಇಂತ ಸಮಯದಲ್ಲಿ ಬೆಳಗೆ ನೀರು ಕೊಡುವುದಿಲ್ಲ , ದ್ವಿದಳ ಧಾನ್ಯ ಬೆಳೆಯಿರಿ ಅಂತ ಹೇಳುತ್ತಾರೆ. ಹಾರಂಗಿ ,ಹೇಮಾವತಿಗೆ ನೀರು ಕೊಟ್ಟಿಲ್ಲ. ತಮಿಳುನಾಡಿಗೆ ನೀರು ಕೊಡುವುದಕ್ಕೆ ಮುಂದಾಗಿದ್ದಾರೆ. ಮೊದಲು ನಮ್ಮ ರೈತರು ಕೃಷಿ ಚಟುವಟಿಕೆ ಆರಂಭಿಸಲು ನೀರು ಬಿಡಿ, ನಂತರ ತಮಿಳುನಾಡಿಗೆ ನೋಡಿ ಎಂದು ಕಿಡಿಕಾರಿದರು.

ನೈಸ್ ರೋಡ್‌ನಲ್ಲಿ ಟೋಲ್ ಕಟ್ಟಬೇಡಿ ಎಂದು ಹೇಳಿಕೆ ನೀಡಿರುವ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕುರಿತು ಪ್ರತಿಕ್ರಯಿಸಿ, ಕುಮಾರಸ್ವಾಮಿ ರಾಜ್ಯ ನಾಯಕರು ,ಯಾವ ದೃಷ್ಟಿಯಿಂದ ಮಾತನಾಡಬೇಕು, ಹೇಗೆ ಮಾತನಾಡಬೇಕು ಎಂಬುವುದು ಅವರಿಗೆ ಗೊತ್ತಿದೆ. ಅವರ ಮಾತಿಗೆ ನಾವು ಬದ್ಧ, ಸತ್ಯ ಹೇಳಿದಾಗ ಈ ರೀತಿ ಗೊಂದಲಗಳು ಅಗುತ್ತಾದೆ. ಕುಮಾರಸ್ವಾಮಿಯವರು ದೆಹಲಿಯಲ್ಲಿ ಇದ್ದಾರೆ ಇದರ ಬಗ್ಗೆ ಚರ್ಚೆ ಮಾಡುತ್ತೇವೆಎಂದು ಹೇಳಿದರು.

ಕುಮಾರಸ್ವಾಮಿ ಕುರಿತು ಶಾಸಕ ಪ್ರದೀಪ್ ಈಶ್ವರ್ ಪದೇ ಪದೇ ಮಾತನಾಡುವ ವಿಚಾರವಾಗಿ ಮಾತನಾಡಿ, ಪ್ರದೀಪ್ ಈಶ್ವರ್ ಬಗ್ಗೆ ಮಾತನಾಡುವಷ್ಟು ನಾವು ದೊಡ್ಡವರಲ್ಲ. ನರೇಂದ್ರ ಮೋದಿ ಪ್ರಧಾನಿಗಳು ಅವರ ಬಗ್ಗೆ ಮಾತನಾಡಬೇಕಾದರೆ ಒಂದು ಹಂತದ ನಾಯಕರು ಮಾತನಾಡುತ್ತಾರೆ. ಸಿದ್ದರಾಮಯ್ಯ, ಕುಮಾರಸ್ವಾಮಿ, ಡಿ.ಕೆ. ಶಿವಕುಮಾರ ಅವರ ಬಗ್ಗೆ ಮಾತನಾಡಬೇಕಾದರೇ ಒಂದು ಹಂತದ ನಾಯಕರು ಇರುತ್ತಾರೆ. ಪ್ರದೀಪ್ ಈರ್ಶ್ವ ಬಗ್ಗೆ ಮಾತನಾಡುವ ಹಂತದಲ್ಲಿ ನಾವು ಇಲ್ಲ. ರಾಜಕಾರಣಿ ಜಾತಿ ಹೆಸರಿನಲ್ಲಿ ರಾಜಕಾ ರಣ ಮಾಡಬಾರದು ರಾಜ್ಯದಲ್ಲಿ ಬಹಳಷ್ಟು ಸಮಸ್ಯೆ ಇದೆ ಅದರ ಬಗ್ಗೆ ಚರ್ಚೆ ಮಾಡಲಿ ಎಂದರು. ಸುದ್ದಿಗೋಷ್ಠಿಯಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ , ಪಕ್ಷದ ನಗರಾಧ್ಯಕ್ಷ ಎಸ್ ಬಿಎಂ ಮಂಜು, ಜಿಲ್ಲಾಧ್ಯಕ್ಷ ಅಶ್ವಿನ್ ಕುಮಾರ್, ಜಿಪಂ ಮಾಜಿ ಅಧ್ಯಕ್ಷ ದ್ವಾರಕೀಶ್ , ಅಭಿಷೇಕ್ ಪಾಳೇಗಾರ್, ಸೋಮು, ಪ್ರಶಾಂತ್, ಗೋಪಾಲ್, ರಾಮು, ಮತ್ತಿತರರು ಇದ್ದರು.

## ಮೊದಲ ಪುಟದಿಂದ

### ನಾಗೇಂದ್ರಗೆ ಹೈಕೋರ್ಟ್ ರಿಲೀಫ್

ತೆರಳದಂತೆ ಷರತ್ತು ವಿಧಿಸಲಾಗಿತ್ತು. ಇದನ್ನು ಪ್ರಶ್ನಿಸಿ ನಾಗೇಂದ್ರ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ಭಾರತದೊಳಗೆ ಪ್ರಯಾಣಿಸಲು ಅನುಮತಿ ನೀಡಿದೆ. ಈ ಹಿಂದೆ ರಾಜ್ಯ ಬಿಟ್ಟು ತೆರಳದಂತೆ ಇದ್ದ ಷರತ್ತಿಗೆ ತಡೆ ನೀಡಿದ ಹೈಕೋರ್ಟ್, ಕೋರ್ಟ್ ಅನುಮತಿ ಇಲ್ಲದೇ ರಾಜ್ಯ ಬಿಟ್ಟು ತೆರಳುವಂತಿಲ್ಲ ಎಂಬ ಷರತ್ತನ್ನು ರದ್ದು ಮಾಡಿದೆ. ಆದರೆ ಅನುಮತಿ ಇಲ್ಲದೇ ದೇಶ ಬಿಟ್ಟು ತೆರಳುವಂತಿಲ್ಲ ಎಂದು ಹೈಕೋರ್ಟ್ ಆದೇಶಿಸಿದೆ. ಅರ್ಜಿದಾರರು ದೇಶದೊಳಗೆ ಪ್ರಯಾಣಿಸಲು ಸ್ವತಂತ್ರರು. ದೇಶದೊಳಗೆ ಪ್ರಯಾಣಿಸಲು ಅನುಮತಿಸದಿದ್ದರೆ ಅವರು ಈಗ ಹೊಂದಿರುವ ಹುದ್ದೆಯನ್ನು ಮೊಟಕುಗೊಳಿಸದಂತಾಗುತ್ತದೆ ಎಂದು ನ್ಯಾ.ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ತಿಳಿಸಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಜಾಮೀನು ಪಡೆದಿರುವ ಸಚಿವ ನಾಗೇಂದ್ರ ಅವರು ಇಡಿ ತನಿಖೆ ಎದುರಿಸುತ್ತಿದ್ದಾರೆ.

### ದೇಶದ ಶೇ.20 ಜನಸಂಖ್ಯೆ: ಜಿಡಿಪಿಗೆ ಶೇ.33 ಕೊಡುಗೆ

ಹೊಂದಿದ್ದೇವೆ. 2019ರಿಂದ 2025ರ ಅವಧಿಯಲ್ಲಿ ಭಾರತದ ಒಟ್ಟು ವಿದೇಶಿ ನೇರ ಬಂಡವಾಳ (ಎಫ್‌ಡಿಐ) ಈಕ್ವಿಟಿ ಒಳಹರಿವಿನಲ್ಲಿ ಶೇ.21 ಕ್ಕಿಂತ ಹೆಚ್ಚಿನ ಪಾಲನ್ನು ಕರ್ನಾಟಕ ಆಕರ್ಷಿಸಿದೆ ಎಂದು ವಿವರಿಸಿದರು.

### ನೀರು ಹಂಚಿಕೆ: ಸೌಹಾರ್ದತೆ ಅಗತ್ಯ

ತನ್ನ ನೆರೆ ರಾಜ್ಯಗಳ ಹಕ್ಕುಗಳನ್ನು ಗೌರವಿಸಿದೆ. ಅದೇ ರೀತಿಯಲ್ಲಿ ನಮ್ಮ ಹಕ್ಕುಗಳನ್ನೂ ಗೌರವಿಸಬೇಕೆಂದು ನಾವು ಬಯಸುತ್ತೇವೆ. ನ್ಯಾಯ ಮಂಡಳಿಗಳ ತೀರ್ಪುಗಳಡಿ ನಮಗೆ ಕಾನೂನುಬದ್ಧವಾಗಿ ದೊರೆಯಬೇಕಾದ ನೀರಿನ ಪಾಲುನ್ನು ನಾವು ನಿರೀಕ್ಷಿಸುತ್ತೇವೆ ಎಂದು ಡಿಕೆಶಿ ಹೇಳಿದರು.

### ಮಾಫಿ ಸಾಕ್ಷಿ ಅರ್ಜಿ: 28ಕ್ಕೆ ಆದೇಶ

ಅಪರಾಧಿಕ ಹಿನ್ನಲೆ ಬಗ್ಗೆ ಕೋರ್ಟ್ಗೆ ಕಾಮಾಕ್ಷಿಪಾಳ್ಯ ಪೊಲೀಸರು ವರದಿ ಸಲ್ಲಿಸಿದ್ದರು. ಪ್ರದೋಷ್ ಮೇಲೆ ಈ ಕೇಸ್ ಬಿಟ್ಟು ಬೇರೆ ಯಾವ ಕೇಸ್ ಇಲ್ಲ ಎಂದು ಎಸಿಪಿ ವರದಿ ಸಲ್ಲಿಸಿದ್ದಾರೆ. ಜೈಲಿನಲ್ಲಿರುವ ವೇಳೆ ಪ್ರದೋಷ್ ನಡವಳಿಕೆ ಬಗ್ಗೆ ವರದಿ ನೀಡುವಂತೆ ಕೋರ್ಟ್ ಕೇಳಿತ್ತು. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಗ್ಯಾಂಗ್ ಆರೋಪಿ ಪ್ರದೋಷ್ ಮಾಫಿ ಸಾಕ್ಷಿಯಾಗಿ ತನ್ನನ್ನು ಪರಿಗಣಿಸುವಂತೆ ಕೋರ್ಟ್ ಅರ್ಜಿ ಸಲ್ಲಿಕೆ ಮಾಡಿದ್ದಾರೆ. ಮಾಫಿ ಸಾಕ್ಷಿ ವಿಚಾರ ತೀವ್ರ ಕುತೂಹಲ ಮೂಡಿಸಿದೆ. ಮತ್ತೊಬ್ಬ ಆರೋಪಿ ವಿನಯ್ ಕೂಡ ಮಾಫಿ ಸಾಕ್ಷಿಯಾಗಲು ಅರ್ಜಿ ಸಲ್ಲಿಕೆ ಮಾಡಿದ್ದಾನೆ.

### ತುಮಕೂರಿಗೆ ಸಿಗದ ಏರ್‌ಪೋರ್ಟ್

ಮುಂಬರುವ ಬಜೆಟ್‌ನಲ್ಲಿ ತುಮಕೂರು ವಿಮಾನ ನಿಲ್ದಾಣಕ್ಕೆ ಹಣ ಕಾಯ್ದಿರಿಸಲಾಗುತ್ತದೆಯೇ ಎಂಬ ಪ್ರಶ್ನೆಗೆ, ಅಂತಹ ಯಾವುದೇ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲದಿರುವುದರಿಂದ ಅನುದಾನ ಹಂಚಿಕೆ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ತಿಳಿಸಿದ್ದಾರೆ. ತುಮಕೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಅಗತ್ಯ ಎಂದು ಸಚಿವ ರಾದಪರಮೇಶ್ವರ್, ಸೋಮಣ್ಣ ಆಗ್ರಹಿಸಿದ್ದರು. ಕೇಂದ್ರ ಸರ್ಕಾರದ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣ ನೀತಿ ಪ್ರಕಾರ, ಹಾಲಿ ಇರುವ ವಿಮಾನ ನಿಲ್ದಾಣದಿಂದ 150 ಕಿ.ಮೀ ವ್ಯಾಪ್ತಿಯಲ್ಲಿ ಇನ್ನೊಂದು ಹೊಸ ವಿಮಾನ ನಿಲ್ದಾಣಕ್ಕೆ ಸಾಮಾನ್ಯವಾಗಿ ಅನುಮತಿ ನೀಡಲಾಗುವುದಿಲ್ಲ.

### ದಕ್ಷಿಣ ರಾಜ್ಯಗಳಿಗೂ ನ್ಯಾಯ ಕೊಡಿ

ಮಾಡಿತ್ತು. ಆದರೆ, ಈ ಎರಡೂ ಶಿಫಾರಸು ಮಾಡಿದ ಅನುದಾನಗಳು ಬಿಡುಗಡೆಯಾಗಿಲ್ಲ ಎಂದು ರಾಜ್ಯಕ್ಕೆ ಆಗಿರುವ ಅನ್ಯಾಯವನ್ನು ಕೇಂದ್ರ ಸಚಿವ ಅಮಿತ್ ಶಾ ಮುಂದೆ ಡಿಕೆಶಿ ವಿವರಿಸಿದರು. 16ನೇ ಹಣಕಾಸು ಆಯೋಗ ನಮ್ಮ ರಾಜ್ಯಕ್ಕೆ ಭಾಗಶಃ ನ್ಯಾಯ ಒದಗಿಸಿದೆ. ಕರ್ನಾಟಕದ ಪಾಲನ್ನು ಶೇ.3.64ರಿಂದ ಶೇ.4.131ಕ್ಕೆ ಹೆಚ್ಚಿಸುವ ಮೂಲಕ ಕೆಲವು ಮಟ್ಟಿಗೆ ಮರುಸ್ಥಾಪಿಸಿದೆ. ನಮ್ಮ ಪಾಲನ್ನು ಶೇ.4.7ಕ್ಕೆ ಏರಿಸಬೇಕು ಎಂದು ಆಗ್ರಹಿಸಿದರು. ಆದಾಯದ ವಿಷಯದಲ್ಲಿ ಉತ್ತಮ ಸಾಧನೆ ಮಾಡುವ ರಾಜ್ಯವನ್ನು ಪ್ರೋತ್ಸಾಹಿಸಬೇಕೇ ಹೊರತು, ದಂಡಿಸಬಾರದು ಎಂದು ಆಗ್ರಹಪೂರ್ವಕವಾಗಿ ಹೇಳಿದರು. ಬೆಂಗಳೂರು ಇಂದು ಕ್ಯಾಲಿಫೋರ್ನಿಯಾದ ಸಿಲಿಕಾನ್ ವ್ಯಾಲಿ, ನ್ಯೂಯಾರ್ಕ್, ಬೀಜಿಂಗ್ ಮತ್ತು ಲಂಡನ್‌ಗಳೊಂದಿಗೆ ವಿಶ್ವದ ಪ್ರಮುಖ ಐದು ಎ.ಐ ನಗರಗಳಲ್ಲಿ ಒಂದಾಗಿ ಗುರುತಿಸಿಕೊಂಡಿದೆ ಎಂದು ಹೇಳಿದರು.

### ಶೂಟೌಟ್ ಸಿಟ್ಟಿಗೆ ಅರಣ್ಯಕ್ಕೆ ಬೆಂಕಿ

ಕೊತ್ತನೂರು ವಲಯದಲ್ಲಿರುವ ಮಿಂಚಿನರೆಹಳ್ಳ ಅಕ್ರಮ ಬೇಟೆ ತಡೆ ಶಿಬಿರವನ್ನು ಡೈನಮೆಟ್ ಹಾಗೂ ಜಿಲೆಟಿನ್ ಕಡ್ಡಿಗಳನ್ನು ಬಳಸಿ ಸ್ಫೋಟಿಸಲಾಗಿತ್ತು. ಸ್ಫೋಟದ ತೀವ್ರತೆಗೆ ಶಿಬಿರದ ಗೋಡೆಗಳಿಗೆ ಹಾನಿ ಆಗಿದೆ. ಒಳಗೆ ಇರಿಸಲಾಗಿದ್ದ ಹಲವು ವಸ್ತುಗಳು ಬೆಂಕಿಗೆ ಆಹುತಿಯಾಗಿವೆ. ಅರಣ್ಯ ಇಲಾಖೆಯ ಸಿಬ್ಬಂದಿ ಕಳ್ಳಬೇಟೆಗಾರರ ದುಷ್ಕೃತ್ಯದ ವಿಡಿಯೋಗಳನ್ನು ಒಂದೊಂದಾಗಿ ಬಿಡುಗಡೆ ಮಾಡುತ್ತಿದ್ದಾರೆ. ಮಲೆ ಮಹದೇಶ್ವರ ವನ್ಯಧಾಮದ ಅಧಿಕಾರಿಗಳಲ್ಲಿ ತೀವ್ರ ಆತಂಕ ಮನೆಮಾಡಿದೆ.

### ಕಬಿನಿಯಿಂದ ನೀರು ಬಿಡುಗಡೆ

ಟಿಎಂಸಿ ನೀರು ಲಭ್ಯವಿದೆ. ನೀರಿನ ಮಟ್ಟವು 109.15 ಅಡಿ ನೀರಿದೆ. ಕಳೆದ ವರ್ಷ 123.50 ಅಡಿ ನೀರಿತ್ತು.

### ಜೀವಮಾನ ರಂಗಸಾಧನೆ ಪ್ರಶಸ್ತಿ

ತಲಾ 25 ಸಾವಿರ ನಗದು ಬಹುಮಾನ ಒಳಗೊಂಡಿದೆ.

ಕೆ.ಹಿರಣ್ಣಯ್ಯ ದತ್ತಿ ಪುರಸ್ಕಾರಕ್ಕೆ ಚಿತ್ರದುರ್ಗದ ಚಂದ್ರಮ್ಮ, ನಟರತ್ನ ಚಿಂದೋಡಿ ವೀರಪ್ಪನವರ ದತ್ತಿ ಪುರಸ್ಕಾರಕ್ಕೆ ಕುಣಿಗಲ್‌ನ ಗಂಗಾಧರ್ ರೆಡ್ಡಿ, ಪದ್ಮಶ್ರೀ ಚಿಂದೋಡಿ ಲೀಲಾ ದತ್ತಿ ಪುರಸ್ಕಾರ ಪ್ರಶಸ್ತಿಗೆ ತುಮಕೂರಿನ ವೈ.ಎನ್.ಶಿವಣ್ಣ, ಮಾಲತಿಶ್ರೀ ಮೈಸೂರು ದತ್ತಿನಿಧಿ ಪುರಸ್ಕಾರಕ್ಕೆ ಗದಗದ ದಯಾನಂದ ಚ ಬೀಳಗಿ ಹಾಗೂ ಕೆ. ರಾಮಚಂದ್ರಯ್ಯ ದತ್ತಿನಿಧಿ ಪುರಸ್ಕಾರಕ್ಕೆ ಮೈಸೂರಿನ ಡಾ. ಎಂ.ಚಂದ್ರಪ್ಪ ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿಗಳು ತಲಾ 15 ಸಾವಿರ ನಗದು ಬಹುಮಾನ ಹೊಂದಿವೆ.

# ಸಮೀಕ್ಷೆ ಮಾಡಿ ಹೊಸ ಕಂದಾಯ

## ನಗರಸಭೆಯಲ್ಲಿ ನಿರ್ಣಯ । ನಗರಸಭೆಯ ಎಲ್ಲ ಕಡತಗಳ ಗಣಕೀಕರಣಕ್ಕೆ ಒಪ್ಪಿಗೆ

ರಾಮನಗರ: ನಗರಸಭಾ ವ್ಯಾಪ್ತಿಯಲ್ಲಿರುವ ಆಸ್ತಿಗಳನ್ನು ಸಮೀಕ್ಷೆ ಮಾಡಿ ನಿಖರ ಮಾಹಿತಿಯನ್ನು ಸಂಗ್ರಹಿಸಿ ಹೊಸದಾಗಿ ಕಂದಾಯ ನಿಗಧಿ ಪಡಿಸಲು ನಗರಸಭೆಯ ವಿಶೇಷ ಸಾಮಾನ್ಯ ಸಭೆ ನಿರ್ಣಯಿಸಿದೆ.

ನಗರಸಭೆಯ ಪ್ರಶಸ್ತಿ ಭವನದಲ್ಲಿ ಗುರುವಾರ ವಿಶೇಷ ಸಾಮಾನ್ಯ ಸಭೆ ಆಯೋಜನೆಯಾಗಿತ್ತು. ನಗರಸಭೆಯ ಅಧ್ಯಕ್ಷ ಕೆ.ಶೇಷಾದ್ರಿ, ವಿಷಯ ಮಂಡಿಸಿದರು. ಖಾಸಗಿ ಆಸ್ತಿ ಮಾಲೀಕರು ಹೆಚ್ಚುವರಿ ಅಂತಸ್ತುಗಳನ್ನು ನಿರ್ಮಿಸಿಕೊಂಡಿರಬಹುದು, ವಸತಿ ನಿವೇಶನಗಳನ್ನು ವಾಣಿಜ್ಯ ಬಳಕೆ ಮಾಡಿಕೊಳ್ಳುತ್ತಿರುವ ಸಾಧ್ಯತೆಗಳಿವೆ. ಹೀಗಾಗಿ ನಗರಸಭೆ ವ್ಯಾಪ್ತಿಯ ಆಸ್ತಿ ಸಮೀಕ್ಷೆ ನಡೆಸುವ ಅವಶ್ಯಕತೆ ಇದೆ. ಸಮೀಕ್ಷೆಗಾಗಿ ಏಜೆನ್ಸಿಯೊಂದಕ್ಕೆ ಗುತ್ತಿಗೆ ನೀಡಲು ಸದಸ್ಯರ ಅಭಿಪ್ರಾಯ ಕೇಳಿದರು.



ಈ ವಿಚಾರದಲ್ಲಿ ಹೆಚ್ಚುವರಿ ಮಾಹಿತಿ ನೀಡಿದ ಆಯುಕ್ತ ಡಾ.ಜಯಣ್ಣ, ನಗರಸಭೆ ವ್ಯಾಪ್ತಿಯಲ್ಲಿರುವ ಖಾಸಗಿ ಆಸ್ತಿಗಳು, ಖಾಲಿ ನಿವೇಶನಗಳ ಸಮೀಕ್ಷೆ ನಡೆಸಿ ನಿಖರ ಮಾಹಿತಿ ಸಂಗ್ರಹಿಸಿದರೆ, ಕಂದಾಯ ಲೆಕ್ಕಾಚರಕ್ಕೆ ಅನುಕೂಲವಾಗುತ್ತದೆ. ನಗರಸಭೆಯ ವ್ಯಾಪ್ತಿಯಲ್ಲಿ ಒಟ್ಟು 33000 ಆಸ್ತಿಗಳಿವೆ. ಈ ಪೈಕಿ ಖಾಲಿ ನಿವೇಶನಗಳು ಇವೆ. ಕೆಲವರು ಹೆಚ್ಚುವರಿ ಫ್ಲೋರ್‌ಗಳನ್ನು ನಿರ್ಮಿಸಿಕೊಂಡಿರಬಹುದು. ಕಳೆದ 10 ವರ್ಷಗಳಲ್ಲಿ ಬಡಾವಣೆಗಳೂ ರಚನೆಯಾಗಿವೆ. ವಸತಿ ಕಟ್ಟಡಗಳನ್ನು ವಾಣಿಜ್ಯಕ್ಕೆ ಬಳಸಿಕೊಳ್ಳುತ್ತಿರಬಹುದು. ವಸತಿ ನಿವೇಶನಗಳು ವಾಣಿಜ್ಯೋದ್ಯಮ ನಿವೇಶನಗಳಾಗಿ ಪರಿವರ್ತನೆಯಾಗಿರಬಹುದು. ಹೀಗಾಗಿ ಸಮೀಕ್ಷೆ ಅಗತ್ಯವಿದೆ. ಸಧ್ಯ 6 ಕೋಟಿ 80 ಲಕ್ಷ ರೂ ಕಂದಾಯ ಸಂಗ್ರಹವಾಗುತ್ತದೆ. ಸಮೀಕ್ಷೆ ನಂತರ ಕಂದಾಯ ಸಂಗ್ರಹ 10 ಕೋಟಿ ತಲುಪುವ ಸಾಧ್ಯತೆ ಇದೆ ಎಂದರು. ಸದಸ್ಯರುಗಳಾದ ಮಂಜುನಾಥ್, ಪೈರೋಜ್ ಮತ್ತು ಇತರರು, ಮತ್ತಷ್ಟು ಮಾಹಿತಿಯನ್ನು ಆಯುಕ್ತರು ಮತ್ತು ಅಧ್ಯಕ್ಷರಿಂದ ಪಡೆದುಕೊಂಡರು. ಸಮೀಕ್ಷೆಗೆ ಸದಸ್ಯರು ಒಪ್ಪಗೆ ಸೂಚಿಸಿದರು. ನಗರಸಭೆಯ ಎಲ್ಲಾ ಕಡತಗಳನ್ನು ಗಣಕೀಕರಿಸುವ ವಿಚಾರವನ್ನು ಅಧ್ಯಕ್ಷರು ಮತ್ತು ಆಯುಕ್ತರು ವಿಷಯ ಪ್ರಸ್ತಾಪಿಸಿದರು. ಗಣಕೀಕರಣದ ಅಗತ್ಯವನ್ನು ತಿಳಿಸಿದರು. ಚರ್ಚೆಯ ನಂತರ ಸದಸ್ಯರು ತಮ್ಮ ಒಪ್ಪಗೆ ಸೂಚಿಸಿದರು. ವೇದಿಕೆಯಲ್ಲಿ ನಗರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷ ಮೊಹಮ್ಮದ್ ಆರಿಫ್ ಉಪಸ್ಥಿತರಿದ್ದರು

### ನಗರಸಭಾ ವ್ಯಾಪ್ತಿಯಲ್ಲಿರುವ ಪಿ.ಡಬ್ಲ್ಯು.ಡಿ ರಸ್ತೆಗಳು

ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಿಂದ ಕೆಂಪೇಗೌಡ ವೃತ್ತದ ಮುಖಾಂತರ ನಗರಸಭೆ ಗಡಿಯವರೆಗೆ, ಕಂಪೇಗೌಡ ವೃತ್ತದಿಂದ ಚೆನ್ನೇನಹಳ್ಳಿವರೆಗೆ, ಅರ್ಚಕರ ಹಳ್ಳಿ ಮಹದೇಶ್ವರ ಸ್ವಾಮಿ ದೇವಾಲಯದ ಬಳಿಯಿಂದ ದೊಡ್ಡಮಣ್ಣುಗುಡ್ಡೆ ಮುಖ್ಯರಸ್ತೆವರೆಗೆ ಮತ್ತು ನಗರ ವ್ಯಾಪ್ತಿಯಲ್ಲಿ ಹಾದು ಹೋಗಿರುವ ಬೆಂಗಳೂರು ಮೈಸೂರು ಹೆದ್ದಾರಿ ರಸ್ತೆಗಳು ಪಿ.ಡಬ್ಲ್ಯು.ಡಿ ಇಲಾಖೆಯ ನಿರ್ವಹಣೆಯಲ್ಲಿದೆ.

### ಪಿ.ಡಬ್ಲ್ಯು.ಡಿ ರಸ್ತೆಗಳ ಹಸ್ತಾಂತರಕ್ಕೆ ನಿರ್ಣಯ

ಪಿ.ಡಬ್ಲ್ಯು.ಡಿ ಇಲಾಖೆಯಲ್ಲಿರುವ ನಿರ್ವಹಣೆಯಲ್ಲಿರುವ ರಸ್ತೆಗಳನ್ನು ನಗರಸಭೆಗೆ ಹಸ್ತಾಂತರಿಸಕೊಳ್ಳಲು ಅಧ್ಯಕ್ಷ ಕೆ.ಶೇಷಾದ್ರಿ ವಿಷಯ ಪ್ರಸ್ತಾಪಿಸಿದರು. ಈ ವೇಳೆ ಮಾತನಾಡಿದ ಅವರು ನಗರವ್ಯಾಪ್ತಿಯಲ್ಲಿ ಕೆಲವು ರಸ್ತೆಗಳು ಪಿ.ಡಬ್ಲ್ಯು.ಡಿ ಇಲಾಖೆಯ ನಿರ್ವಹಣೆಯಲ್ಲಿದೆ. ಆದರೆ ಈ ರಸ್ತೆಗಳ ಸ್ವಚ್ಛತೆ ನಗರಸಭೆಯಿಂದ ನಿರ್ವಹಣೆಯಾಗುತ್ತಿದೆ. ಪ್ಯಾಚ್‌ಕೆಲಸಗಳನ್ನು ನಗರಸಭೆಯೇ ಮಾಡುತ್ತಿದೆ, ನಗರಸಭೆಯ ನಿರ್ವಹಣೆಗೆ ಪಡೆದುಕೊಂಡು ಅಭಿವೃದ್ಧಿ ಮಾಡುವ ಉದ್ದೇಶದಿಂದ ಹಸ್ತಾಂತರಿಸಿಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸೋಣ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಪ್ರತಿಪಕ್ಷದ ನಾಯಕ ಮಂಜುನಾಥ್, ಈ ರಸ್ತೆಗಳನ್ನು ಹಸ್ತಾಂತರಿಸಿಕೊಳ್ಳುವ ಪ್ರಕ್ರಿಯೆ ಹಿಂದೆಯೇ ಆಗಬೇಕಾಗಿತ್ತು ಎಂದರು. ತಮ್ಮ ವಾರ್ಡು ವ್ಯಾಪ್ತಿಯಲ್ಲಿನ ಪಿ.ಡಬ್ಲ್ಯು.ಡಿ ರಸ್ತೆಯ ದುರಸ್ಥಿ ನಡೆಯುತ್ತಿದೆ. ಅಲ್ಲಿರುವ 5–6 ಮ್ಯಾನ್‌ಹೋಲ್‌ಗಳನ್ನು ಮುಚ್ಚಿಹಾಕಿದ್ದಾರೆ. ಈ ವಿಚಾರದಲ್ಲಿ ಗುತ್ತಿಗೆದಾರ ಮತ್ತು ಸಂಬಂಧಿಸಿದ ಅಧಿಕಾರಿಯ ಗಮನಕ್ಕೆ ತಂದರು ಉಪಯೋಗವಾಗಲಿಲ್ಲ. ಹೀಗಾಗಿ ಕಲ್ಮಶ ನೀರು ಮನೆಗಳಿಗೆ ಹಿಂದಕ್ಕೆ ಹರಿಯುತ್ತಿದೆ. ನಾಗರೀಕರು ನಗರಸಭೆಯನ್ನೇ ಹಳಿಯುತ್ತಿದ್ದಾರೆ. ಜನರಿಗೆ ಯಾವ ರಸ್ತೆ ಯಾರ ನಿರ್ವಹಣೆಯಲ್ಲಿದೆ ಎಂಬುದು ಗೊತ್ತಿಲ್ಲ. ಹೀಗಾಗಿ ನಗರಸಭೆಯನ್ನೇ ದೋಷಿಸುತ್ತಿದ್ದಾರೆ. ಸದರಿ ರಸ್ತೆಗಳನ್ನು ನಗರಸಭಾ ವ್ಯಾಪ್ತಿಗೆ ಪಡೆದುಕೊಂಡರೆ ನಿರ್ವಹಣೆ ಸಾಧ್ಯವಾಗುತ್ತದೆ ಎಂದು ತಮ್ಮ ಒಪ್ಪಿಗೆ ಸೂಚಿಸಿದರು. ಮತ್ತೊಬ್ಬ ನಗರಸಭಾ ಸದಸ್ಯ ಸೋಮಶೇಖರ್ (ಮಣಿ) ಮಾತನಾಡಿ, ಗಾಂಧಿನಗರದ ಬಳಿಯ ಬೆಂ–ಮೈ ಹೆದ್ದಾರಿ ರಸ್ತೆಯಲ್ಲಿ ರಸ್ತೆಉಬ್ಬುಗಳು ಬೇಕಾಗಿವೆ, ಈ ವಿಚಾರವನ್ನು ಪಿ.ಡಬ್ಲ್ಯು.ಡಿ ಅಧಿಕಾರಿಗಳ ಗಮನ ಸೆಳೆದರು ಉಪಯೋಗವಾಗಿಲ್ಲ. ಎಚ್.ಡಿ.ಕುಮಾರಸ್ವಾಮಿ ಅವರ ಅಧಿಕಾರವಧಿಯಲ್ಲಿ ರೈಲು ನಿಲ್ದಾಣದ ಬಳಿಯಿಂದ ಮುಖ್ಯ ರಸ್ತೆಯನ್ನು ಕಾಂಕ್ರೀಟ್ ರಸ್ತೆಯನ್ನಾಗಿ ನಿರ್ಮಿಸಲಾಗಿದೆ. ಆದರೆ ತದನಂತರ ಈ ರಸ್ತೆಯೂ ಹಾಳಾಗಿದೆ. ನಗರಸಭೆ ವ್ಯಾಪ್ತಿಯಲ್ಲಿದ್ದರೆ ದುರಸ್ಥಿ ಮಾಡಬಹುದು ಎಂದು ಪಿ.ಡಬ್ಲ್ಯು.ಡಿ ರಸ್ತೆಗಳನ್ನು ನಗರಸಭೆಗೆ ಹಸ್ತಾಂತಿರಿಸಿಕೊಳ್ಳಲು ಸಮ್ಮತಿಸಿದರು.

## 23ಕ್ಕೆ ದಿ.ಚೆನಮ್ಮ ನುಡಿನಮನ

ಮೈಸೂರು: ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ವತಿಯಿಂದ ಚೆನ್ನಮ್ಮ ದೇವೇಗೌಡ ಅವರ ನುಡಿನಮನ ಕಾರ್ಯಕ್ರಮವನ್ನು ಮಾನಸ ಗಂಗೋತ್ರಿ ಆವರಣದ ಸೆನೆಟ್ ಭವನದಲ್ಲಿ ಭಾನುವಾರ (ಆ.23) ಸಂಜೆ 4ಕ್ಕೆ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಡಿ. ರವಿಕುಮಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಾರ್ಯಕ್ರಮದಲ್ಲಿ ಚೆನ್ನಮ್ಮ ದೇವೇಗೌಡ ಆದರ್ಶ ಗೃಹಿಣಿ ಪ್ರಶಸ್ತಿ ಹಾಗೂ ನಾಕಂಡ ಆದರ್ಶ ಗೃಹಿಣಿ ಚೆನ್ನಮ್ಮ ದೇವೇಗೌಡ ಸಂಸ್ಮರಣ ಗ್ರಂಥ ಘೋಷಣೆ ಮಾಡಲಿದ್ದೇವೆ ಎಂದರು. ಆದಿಚುಂಚನಗಿರಿ ಶಾಖಾ ಮಠದ ಸೋಮೇಶ್ವರನಾಥ ಸ್ವಾಮೀಜಿ, ಮಾಜಿ ಪ್ರಧಾನ ಮಂತ್ರಿ ಎಚ್.ಡಿ.ದೇವೇಗೌಡ, ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ, ಸಂಸದರಾದ ಡಾ.ಸಿ.ಎನ್.ಮಂಜುನಾಥ್, ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಎಂ.ಕೃಷ್ಣಪ್ಪ, ಎಚ್.ಡಿ. ರೇವಣ್ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಎಂ.ಪಿ.ಮಂಜೇಗೌಡ, ನೇಗಿಲಯೋಗಿ ಸಮಾಜಸೇವಾ ಟ್ರಸ್ಟ್ ನ ಶೋಭಾ, ಕೃಷ್ಣ, ಟಿ.ಚೆಲುವೇಗೌಡ ಇದ್ದರು.



## ಕೊಲೆ ಯತ್ನ ಅಪರಾಧಿಗೆ 10 ವರ್ಷ ಜೈಲು ಶಿಕ್ಷೆ

ಮೈಸೂರು: ಹಳೇ ದ್ವೇಷದ ಹಿನ್ನಲೆ ನಡೆದ ಗಲಾಟೆಯಲ್ಲಿ ಕಾರಿನ ಬ್ಯಾನೆಟ್ ಮೇಲೆ ವ್ಯಕ್ತಿ ಬಿದ್ದಿದ್ದರೂ ಲೆಕ್ಕಿಸದೆ ಚಾಲನೆ ಮಾಡಿ ಕೊಲೆಗೆ ಯತ್ನಿಸಿದ ಆರೋಪ ಸಾಬೀತಾದ ಹಿನ್ನಲೆ ಆರೋಪಿಗೆ ಮೈಸೂರು ನ್ಯಾಯಾಲಯ 10 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 50 ಸಾವಿರ ದಂಡ ತಪ್ಪಿದ್ದಲ್ಲಿ ಒಂದು ವರ್ಷ ಜೈಲು ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ಬಾಬು ಥಾಮಸ್ ಶಿಕ್ಷೆಗೆ ಗುರಿಯಾದ ಅಪರಾಧಿ 2022ರಂದು ಎನ್.ಆರ್.ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿತ್ತು. ಹಳೇ ದ್ವೇಷದ ಹಿನ್ನಲೆ ಚಂದ್ರಶೇಖರ್ ಎಂಬಾತನ ಮೇಲೆ ಹಲ್ಲೆ ನಡೆಸಿದ ಬಾಬುಥಾಮಸ್ ನಂತರ ಕಾರಿನಿಂದ ಗುದ್ದಿದ್ದಾನೆ. ರಭಸಕ್ಕೆ ಚಂದ್ರಶೇಖರ್ ಕಾರಿನ ಬ್ಯಾನೆಟ್ ಮೇಲೆ ಬಿದ್ದಿದ್ದಾರೆ. ಹೀಗಿದ್ದೂ ಚಂದ್ರಶೇಖರ್‌ನ ರಕ್ಷಿಸದೆ ಕೊಲೆ ಮಾಡುವ ಉದ್ದೇಶದಿಂದ ಬ್ಯಾನೆಟ್ ಮೇಲೆ ಬಿದ್ದಿದ್ದರೂ ಕಾರನ್ನ ಅಪಾಯಕಾರಿಯಾಗಿ ಚಾಲನೆ ಮಾಡಿ ಸುಮಾರು 800 ಮೀಟರ್ ದೂರಕ್ಕೆ ಎಳೆದೊಯ್ದು ಬೀಳಿಸಿದ್ದಾನೆ. ಕೊಲೆ ಮಾಡುವ ದುರುದ್ದೇಶದಿಂದ ಕೃತ್ಯವೆಸಗಿದ ಬಾಬು ಥಾಮಸ್ ಮೇಲೆ ಸಬ್ ಇನ್ಸ್ಪೆಕ್ಟರ್ ಜೈಕೀರ್ತಿ ಪ್ರಕರಣ ದಾಖಲಿಸಿಕೊಂಡು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ಜೈಕೀರ್ತಿ ನಡೆಸಿದ ತನಿಖೆಗೆ ಸಿಪಿಸಿ ಶಿವಣ್ಣ ಸಹಾಯಕರಾಗಿದ್ದರು. ಆರೋಪ ಸಾಬೀತಾದ ಹಿನ್ನಲೆ 4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯದೀಶ ಹೆಚ್.ಅನಂತ್ ಶಿಕ್ಷೆ ವಿಧಿಸಿ ತೀರ್ಪು ಪ್ರಕಟಿಸಿದ್ದಾರೆ.

## ಸೆ.4ರಂದು ಶ್ರೀ ಕೃಷ್ಣ ಜಯಂತಿ ಆಚರಣೆ

ಮೈಸೂರು: ಜಿಲ್ಲಾಡಳಿತದ ವತಿಯಿಂದ ಶ್ರೀ ಕೃಷ್ಣ ಜಯಂತಿಯನ್ನು ಅರ್ಥಪೂರ್ಣವಾಗಿ ಸೆಪ್ಟೆಂಬರ್ 04.ರಂದು ನಗರದ ಕರ್ನಾಟಕ ಕಲಾಮಂದಿರದ ಕಿರುರಂಗಮಂದಿರದಲ್ಲಿ ಆಚರಣೆ ಮಾಡಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳಾದ ಆರ್.ಐಶ್ವರ್ಯ ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಶ್ರೀ ಕೃಷ್ಣ ಜಯಂತಿ ಆಚರಣೆ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶ್ರೀ ಕೃಷ್ಣ ಜಯಂತಿಯನ್ನು ಸೆಪ್ಟೆಂಬರ್ 04.ರಂದು ಬೆಳಗ್ಗೆ 11:30 ಗಂಟೆಗೆ ಕರ್ನಾಟಕ ಕಲಾಮಂದಿರದ ಕಿರು ರಂಗಮಂದಿರದಲ್ಲಿ ಆಚರಣೆ ಮಾಡಲಾಗುವುದು.ವೇದಿಕೆ ಕಾರ್ಯಕ್ರಮಕ್ಕೂ ಮೊದಲು ವೇದಿಕೆ ಮೇಲೆ ಗೀತಾ ಗಾಯನ ಏರ್ಪಡಿಸಲಾಗುವುದು. ಸಮುದಾಯದ ಮುಖಂಡರ ಸಲಹೆಯಂತೆ ದಿವ್ಯ ಸಾನಿಧ್ಯ ಹಾಗೂ ವಿಶೇಷ ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಯನ್ನು ಆಹ್ವಾನಿಸಲಾಗುವುದು ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಡಿ.ಎಂ.ಸುದರ್ಶನ್ ಮಾತನಾಡಿದರು.



### ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದಿಂದ ಬೃಹತ್ ಮೆರವಣಿಗೆ

# ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಕ್ಕೊತ್ತಾಯ

ಚಾಮರಾಜನಗರ. ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಚಾಮರಾಜನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ಹಾಗೂ ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳ ಹಾಲು ಉತ್ಪಾದಕರು ಮತ್ತು ನೌಕರರ ವತಿಯಿಂದ ನಗರದಲ್ಲಿ ಶಾಂತಿಯುವ ಬೃಹತ್ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಹಕ್ಕೊತ್ತಾಯ ಸಲ್ಲಿಸಲಾಯಿತು.

ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಚಾಮುಲ್ ಅಧ್ಯಕ್ಷ ನಂಜುಂಡ ಸ್ವಾಮಿ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಚಾಮರಾಜನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ಹಾಗೂ ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳ ಹಾಲು ಉತ್ಪಾದಕರು ಮತ್ತು ನೌಕರರು ಜಾನುವಾರುಗಳೊಂದಿಗೆ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿ ಶ್ರೀರೂಪ ಅವರ ಮುಖಾಂತರ ಸರ್ಕಾರಕ್ಕೆ ಹಕ್ಕೊತ್ತಾಯ ಸಲ್ಲಿಸಿದರು.



ಪ್ರತಿಭಟನೆ ನೇತೃತ್ವ ವಹಿಸಿದ್ದ ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ ಮಾತನಾಡಿ ಹಾಲಿನ ಖರೀದಿ ದರವನ್ನು 10ರೂ.ಗೆ ಹೆಚ್ಚಿಸಿ ಹಾಲು ಉತ್ಪಾದಕರ ಹಾಲಿಗೆ ನ್ಯಾಯಯುತ ಬೆಲೆ ನೀಡಬೇಕು. ಹಾಲಿನ ಸರ್ಕಾರಿ ಪ್ರೋತ್ಸಾಹ ಧನವನ್ನು 5 ರೂ ನಿಂದ 10 ರೂ.ಗಳಿಗೆ ಹೆಚ್ಚಿಸಬೇಕು. ಪ್ರಸ್ತುತ ಬರಗಾಲ ಇರುವುದರಿಂದ ರಾಸುಗಳಿಗೆ ಉಚಿತ ಮೇವು ಮತ್ತು ಪಶು ಆಹಾರಕ್ಕೆ ಸರ್ಕಾರ ವತಿಯಿಂದ ರಿಯಾಯಿತಿ ನೀಡಬೇಕು ಎಂದು ಒತ್ತಾಯಿಸಿದರು. ಚಾಮುಲ್‌ಗೆ ಸರ್ಕಾರದಿಂದ ಬರಬೇಕಾದ 53 ಕೋಟಿ ರೂ. ಬಾಕಿ ಅನುದಾನವನ್ನು ಬಿಡುಗಡೆಗೊಳಿಸಿ ಕೊಡಬೇಕು. ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳ ನೌಕರರಿಗೆ ಪ್ರತಿ ಲೀಟರ್ ಹಾಲಿಗೆ ಕನಿಷ್ಠ ಪಕ್ಷ 1 ರೂ. ಪ್ರೋತ್ಸಾಹಧನವನ್ನು ಸರ್ಕಾರದ ವತಿಯಿಂದ ನೀಡಬೇಕು. ಸ್ವಂತ ಕಟ್ಟಡವಿಲ್ಲದ ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಸರ್ಕಾರದ ವತಿಯಿಂದ ಖಾಲಿ ನಿವೇಶನ ಕೊಡಸಬೇಕು. ಜಿಲ್ಲೆಯ ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ಖಾಲಿಯಿರುವ ಪಶುವೈದ್ಯರನ್ನು ನೇಮಿಸಿಕೊಡಬೇಕು ಒತ್ತಾಯಿಸಿದರು.

ಮೆರವಣಿಗೆಯಲ್ಲಿ ಚಾಮುಲ್ ನಿರ್ದೇಶಕರಾದ ಹೆಚ್.ಎಚ್.ನಂಜುಂಡಪ್ರಸಾದ್ ಸದಾಶಿವಮೂರ್ತಿ, ಸುನೀಲ್, ಶಾಹುಲ್ ಅಹಮದ್, ಶೀಲಾ ಪುಟ್ಟರಂಗಶೆಟ್ಟಿ, ಹೆಚ್.ಎಸ್.ಬಸವರಾಜು, ಉದ್ದನೂರು ಪ್ರಸಾದ್, ವೈ.ಸಿ.ನಾಗೇಂದ್ರ, ಕೆ.ಕೆ .ರೇವಣ್ಣ ಹಾಗೂ ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳ ಹಾಲು ಉತ್ಪಾದಕರು ಮತ್ತು ನೌಕರರ, ಹಾಲು ಉತ್ಪಾದಕರು ಭಾಗವಹಿಸಿದ್ದರು.

# ಪಾದಚಾರಿ ಮಾರ್ಗ ತೆರವಿಗೆ ಆದೇಶಿಸಿದ್ದು ಯಾರು: ಲಕ್ಷ್ಮಣ್ ಪ್ರಶ್ನೆ

ಮೈಸೂರು: ಪಾದಚಾರಿ ಮಾರ್ಗ ತೆರವುಗೊಳಿಸುವಂತೆ ನಗರಪಾಲಿಕೆಗೆ ಆದೇಶಿಸಿದ್ದು ಯಾರು? ಅದರಲ್ಲೂ ಬಡವರ ಬದುಕಿನ ಜತೆ ಚೆಲ್ಲಾಟ ಆಡುತ್ತಿರುವ ನಗರಪಾಲಿಕೆ ನಡೆ ಖಂಡನೀಯ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ತಿಳಿಸಿದರು.

ನಗರ ಜಲದರ್ಶಿನಿಯಲ್ಲಿ ಬೀದಿಬದಿ ವ್ಯಾಪಾರಿಗಳ ಸಭೆ ನಡೆಸಿ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಮಹಾನಗರಪಾಲಿಕೆಯವರು ರಾಜ್ಯ ಸರ್ಕಾರ, ಸುಪ್ರಿಂಕೋರ್ಟ್ ಆದೇಶವಿಲ್ಲದಿದ್ದರೂ ಪಾದ ಚಾರಿ ಮಾರ್ಗ ತೆರವು ಕಾರ್ಯ ಮಾಡುತ್ತಿದ್ದಾರೆ. ಸುಪ್ರಿಂ ಕೋರ್ಟ್ ಯಾವುದೋ ಒಂದು ಪಾದಚಾರಿ

> ಜಲದರ್ಶಿನಿಯಲ್ಲಿ ನಡೆದ ಸಭೆಯಲ್ಲಿ ನೂರಕ್ಕೂ ಹೆಚ್ಚು ಮಂದಿ ಬೀದಿ ಬದಿ ವ್ಯಾಪಾರಿಗಳು ಆಗ ಮಿಸಿ ನಗರಪಾಲಿಕೆಯಿಂದ ಸಾವಿರ ರೂ.ಗಳ ಗುರುತಿನ ಚೀಟಿ ನೀಡಿದ್ದರೂ ತೆರವುಗೊಳಿಸುವ ಕೆಲಸ ಮಾಡುತ್ತಿದ್ದಾರೆ. ಇದರಿಂದ ನಮ್ಮ ಬದುಕಿಗೆ ತೊಂದರೆ ಆಗಿದೆ. ಹೀಗಾಗಿ ನಮಗೆ ಎಂದಿನಂತೆ ವ್ಯಾಪಾರ ನಡೆಸಲು ಅವಕಾಶ ನೀಡಬೇಕೆಂದು ಹೇಳಿದರು.



> 15 ವರ್ಷಗಳಿಂದ ಬೀದಿ ವ್ಯಾಪಾರವನ್ನೇ ನಂಬಿಕೊಂಡು ಬದುಕುತ್ತಿದ್ದೇವೆ. ಏಕಾಏಕಿ ನಮ್ಮನ್ನು ತೆರವು ಮಾಡಿರುವುದು ಸರಿಯಲ್ಲ. ಅದರಲ್ಲೂ ಕಾಂಗ್ರೆಸ್ ಸರ್ಕಾರದಿಂದ ನಮಗೆ ಇಂತಹ ಅನ್ಯಾಯ ಆಗಲಿದೆ ಎಂಬುದನ್ನು ನಿರೀಕ್ಷಿಸಿರಲಿಲ್ಲ.
> –ಮುನ್ನಾ ಬೀದಿ ಬದಿ ವ್ಯಾಪಾರಿ

ಅಪಘಾತ ಪ್ರಕರಣದಲ್ಲಿ ಆದೇಶ ಮಾಡಿದೆ. ಪಾದಚಾರಿ ನಡೆದು ಹೋಗುವಾಗ ಮಾರ್ಗ ಸಾರ್ವಜನಿಕರ ಸ್ವತ್ತು ಎಂದು ಆದೇಶಿಸಿದೆ. ಇದನ್ನೇ ಆದೇಶವಾಗಿರಿಸಿಕೊಂಡು ಪಾದಚಾರಿ ಒತ್ತುವರಿ ತೆರವು ಮಾಡಲಾಗುತ್ತಿದೆ. ಇದಕ್ಕೆ ನಮ್ಮ ವಿರೋಧವಿಲ್ಲ. ಆದರೆ, ಬೀದಿ ಬದಿಗಳಲ್ಲಿ ಹೂ, ಹಣ್ಣು, ಸೊಪ್ಪು, ತರಕಾರಿ ಮಾರುವವರನ್ನು ಗುರಿಯಾಗಿಸಿಕೊಂಡಿರುವುದು ಸರಿಯಲ್ಲ. ಅವರದು ಬದುಕು ಅಲ್ಲವೇ, ಎಲ್ಲಾ ಪಾದಚಾರಿ ಮಾರ್ಗ ಫ್ರೀ ಫರ್ ವಾಕ್ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಪಾದಚಾರಿ ಮಾರ್ಗದಲ್ಲಿರುವ ಹಾಲಿನ ಬೂತ್, ಸಫಾಯಿ ಕರ್ಮಚಾರಿ ಅಂಗಡಿ, ಟ್ರಾನ್ಸ್ ಫಾರ್ಮ್, ಹೋಟೆಲ್ ಚೇರ್ ತೆರವುಗೊಳಿಸಿ ಅದನ್ನು ಹೊರತುಪಡಿಸಿ ಗುಬ್ಬಿಗಳ ಮೇಲೆ ಬ್ರಹ್ಮಾಸ್ತ್ರ ಎಷ್ಟು ಸರಿ?. ಫುಟ್ ಬಾತ್ ಸಾರ್ವಜನಿಕ ಆಸ್ತಿಯಾದರೆ ಅದನ್ನು ಬಾಡಿಗೆ ಕೊಟ್ಟಿದ್ದೇವೆಂದು ಸಾವಿರ ರೂ. ಬಾಡಿಗೆಗೆ ಕೊಡುವುದು ಹೇಗೆ? ಪರ್ಯಾಯವಾಗಿ ನೀವು ಜಾಗ ಕೊಟ್ಟ ಮೇಲೆ ಒತ್ತುವರಿ ತೆರವು ಖಾಲಿ ಮಾಡಿಸಬೇಕು. ಅದರಲ್ಲೂ ನಗರದಲ್ಲಿ ಸಯ್ಯಾಜಿರಾವ್ ರಸ್ತೆ, ಚಿಕ್ಕಗಡಿಯಾರ, ಒಲಂಪಿಯಾ ಟಾಕೀಸ್ ನಲ್ಲಿ ತೆಗೆಸುವುದು ಸರಿಯಲ್ಲ. ಇದೆಲ್ಲವನ್ನೂ ಬೀದಿ ಬದಿ ವ್ಯಾಪಾರಿಗಳೇ ಹೇಳುತ್ತಿದ್ದಾರೆ. 350 ಮಂದಿ ಬೀದಿ ಬದಿ ವ್ಯಾಪಾರಿಗಳಿದ್ದಾರೆ. ಬಟ್ಟೆ ಸೇರಿ ಇನ್ನಿತರೆ ವ್ಯಾಪಾರ ಮಾಡುತ್ತಿದ್ದು, ಪಾದಚಾರಿಗಳಿಗೆ ಅವರಿಂದ ತೊಂದರೆಯಿಲ್ಲ. ಏಕೆಂದರೆ ಅವರೆ ಇವರಿಗೆಲ್ಲಾ ಗ್ರಾಹಕರೆಂದರು.

ಬೀದಿ ಬದಿ ವ್ಯಾಪಾರಿಗಳ ತೆರವಿಗೆ ಸರ್ಕಾರ ಆದೇಶ ಮಾಡಿದ್ದರೆ ತೋರಿಸಲಿ. ತೆರವು ಮಾಡುವುದು ತಪ್ಪು ಎನ್ನಲ್ಲಾ ಹದಿನೈದು ಅಡಿ ಜಾಗಕ್ಕೆ ಮೂರಡಿ ಜಾಗವನ್ನು ವ್ಯಾಪಾರಕ್ಕೆ ಕೊಡುವ ನಿಟ್ಟಿನಲ್ಲಿ ಹೈಕೋರ್ಟ್ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದೆ. ಅದನ್ನು ನಗರಪಾಲಿಕೆ ಜಾರಿಗೊಳಿಸಲಿ. ನಗರದಲ್ಲಿ 1450ಕಿ.ಮೀ. ರಸ್ತೆಯಿದೆ. ಎಲ್ಲವನ್ನೂ ತೆರವು ಮಾಡುವ ಕೆಲಸ ಪಾಲಿಕೆ ಮಾಡುತ್ತದೆಯೇ? ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರ ಸರ್ಕಾರ ಬಡವರ ಪರ ಸರ್ಕಾರ ಆಗಿದೆ. ಹೀಗಾಗಿ ಬಡವರಿಗೆ ತೊಂದರೆ ಕೊಡುವ ಕೆಲಸ ಮಾಡಬಾರದು ಎಂದರು.

ನಗರಪಾಲಿಕೆ ಮಾಧ್ಯಮದ ಗಮನ ಸೆಳೆಯುವುದ ಕ್ಕೋಸ್ಕರ ಮಾಡುತ್ತಿದ್ದಾರೋ ಏನೋ ಗೊತ್ತಿಲ್ಲ. ಸದ್ಯ ಪಾಲಿಕೆಯಲ್ಲಿ ಚುನಾಯಿತ ಪ್ರತಿನಿಧಿಗಳಿಲ್ಲ. ಹೀಗಾಗಿ ಆಡಳಿತಾಧಿಕಾರಿ ಹಾಗೂ ಪಾಲಿಕೆ ಆಯುಕ್ತರೆ ತೆರವುಗೊಳಿಸುವ ತೀರ್ಮಾನ ಕೈಗೊಳ್ಳಬಹುದೇ?, ಮೊದಲು ಬಡವರಿಗೆ ಶಾಶ್ವತ ನೆಲೆ ಕಲ್ಪಿಸಿ ಅನಂತರ ತೆರವುಗೊಳಿಸಿ, ರಾಜಕಾರಣಿಗಳು ಸೇರಿ ಅನೇಕರು ಕಾರಿನ ಶೆಡ್ ಮಾಡಿಕೊಂಡಿದ್ದಾರೆ. ಬೆಟ್ಟದ ಸುತ್ತಲೂ ಮಠ, ಮಾನ್ಯಗಳ ಒತ್ತುವರಿ ತೆರವುಗೊಳಿಸಿ ಎಂದು ಹೇಳಿದರು.

ನಾಳೆ 11 ಗಂಟೆಗೆ ನಗರಪಾಲಿಕೆ ಆಡಳಿತಾಧಿಕಾರಿಗಳ ಕಚೇರಿಗೆ ತೆರಳಿ ತೆರವಿಗೆ ಆದೇಶಿಸಿದವರು ಯಾರೆಂದು ಪ್ರಶ್ನಿಸಲಾಗುವುದು ಅಲ್ಲದೆ, ಅವರಿಗೆ ಗಡುವು ನೀಡಿ ತೆರವು ಸ್ಥಗಿತಕ್ಕೆ ಆಗ್ರಹಿಸಲಾಗುವುದು ಎಂದು ಎಂದು ಹೇಳಿದರು. ರಾಜ್ಯ ಕಾಂಗ್ರೆಸ್ ನ ರಸ್ತೆ ಬದಿ ವ್ಯಾಪಾರಿಗಳ ವಿಭಾಗದ ರಾಜ್ಯ ಕಾರ್ಯದರ್ಶಿ ಬಸವರಾಜು, ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ವಕ್ತಾರ ಕೆ. ಮಹೇಶ್, ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ರಸ್ತೆ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಅಜ್ಮಲ್ ಪಾಷ, ನಗರ ಕಾರ್ಯದರ್ಶಿ ಜುನಾಯಿದ್, ನಗರ ಉಪಾಧ್ಯಕ್ಷ ಹಲೀಂ ಇನ್ನಿತರರು ಇದ್ದರು.

## ದೇವರಾಜ ಅರಸು ಅವರ ಕೊಡುಗೆ ಸದಾ ಸ್ಮರಣೀಯ: ಎಂ.ಕೆ. ಸವಿತಾ

ಮೈಸೂರು: ಹಿಂದುಳಿದ ವರ್ಗಗಳ ಏಳಿಗೆ, ಸಾಮಾಜಿಕ ನ್ಯಾಯ ಹಾಗೂ ಭೂಸುಧಾರಣೆಯ ಹರಿಕಾರ ಡಿ. ದೇವರಾಜ ಅರಸು ಅವರ ಕೊಡುಗೆ ಅಪಾರವಾಗಿದ್ದು, ಅವರ ತತ್ವ-ಸಿದ್ಧಾಂತಗಳು ಎಂದೆಂದಿಗೂ ಸ್ಮರಣೀಯ ಎಂದು ಮಹಾನಗರ ಪಾಲಿಕೆ ಆಯುಕ್ತೆ ಎಂ.ಕೆ. ಸವಿತಾ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಂಟಿ ಆಶ್ರಯದಲ್ಲಿ ನಗರದ ಕಲಾಮಂದಿರದಲ್ಲಿ ಡಿ. ದೇವರಾಜ ಅರಸು ಅವರ 111ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಧಿಕಾರ ಮತ್ತು ಹಕ್ಕುಗಳು ತಲುಪಬೇಕು ಎಂಬ ಧ್ಯೇಯಾದೊಂದಿಗೆ ಅರಸು ಅವರು ಶ್ರಮಿಸಿದರು.ಭೂಸುಧಾರಣಾ ಕಾಯ್ದೆ ಹಾಗೂ ಉಳುವವನೇ ಭೂಮಿಯ ಒಡೆಯ ಯೋಜನೆಯ ಮೂಲಕ ಶೋಷಿತ ವರ್ಗಗಳಿಗೆ ಆರ್ಥಿಕ ಮತ್ತು ಸಾಮಾಜಿಕ ಭದ್ರತೆ ಒದಗಿಸಿದರು ಎಂದು ಹೇಳಿದರು.

ಮೈಸೂರು ಪೇಯಿಂಟ್ಸ್ ಮತ್ತು ವಾರ್ನಿಷ್ ಲಿಮಿಟೆಡ್ ಅಧ್ಯಕ್ಷ ಹೆಚ್.ಡಿ. ಗಣೇಶ್ ಮಾತನಾಡಿ, ಎಂಟು ವರ್ಷಗಳ ಕಾಲ ದಕ್ಷ ಹಾಗೂ ಪ್ರಾಮಾಣಿಕ ಆಡಳಿತ ನೀಡಿದ ಡಿ ದೇವರಾಜ ಅರಸು ಅವರ ಆದರ್ಶ ಮತ್ತು ವಿಚಾರಧಾರೆಗಳು ಯುವಜನತೆಗೆ ಸದಾ ಮಾರ್ಗದರ್ಶಕರಾಗಿದ್ದಾರೆ. ಕೆಲವರು ಇತಿಹಾಸ ಓದುತ್ತಾರೆ, ಆದರೆ ಕೆಲವರು ಇತಿಹಾಸ ಸೃಷ್ಟಿಸುತ್ತಾರೆ. ಈ ಮಾತು ದೇವರಾಜ ಅರಸು ಅವರಿಗೆ ನೂರಕ್ಕೆ ನೂರರಷ್ಟು ಸಲ್ಲುತ್ತದೆ ಎಂದು ಹೇಳಿದರು. ಅಧಿಕಾರಕ್ಕಾಗಿ ಅಲ್ಲದೆ, ನಿಜವಾದ ಅರ್ಥದಲ್ಲಿ ಜನಪರ ನಾಯಕರಾಗಿ, ನೊಂದವರ ಜೀವನಕ್ಕೆ ಆಸರೆಯಾಗಿ ಹಾಗೂ ಹಿಂದುಳಿದ ಸಮುದಾಯಗಳಿಗೆ ನ್ಯಾಯ ಒದಗಿಸಿದ ಮಹಾನ್ ವ್ಯಕ್ತಿ ಡಿ. ದೇವರಾಜ ಅರಸು ಅವರು ಎಂದು ಬಣ್ಣಿಸಿದರು.ಸರಗೂರು ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕ ಹಾಲಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಜಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಸ್ ಯುಕೇಶ್ ಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಘವೇಂದ್ರ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ರೇಖಾ ಮತ್ತಿತರು ಉಪಸ್ಥಿತರಿದ್ದರು.



# ಅರಸರು ಅದ್ವಿತೀಯ ಆಡಳಿತಗಾರರು

## ಕ್ರಾಂತಿಕಾರಿ ಕಾನೂನುಗಳನ್ನು ಜಾರಿಗೆ ತಂದ ಡಿ.ದೇವರಾಜು | ಕೆ.ಶೇಷಾದ್ರಿ ಅಭಿಮತ

ರಾಮನಗರ: ಉಳುವವನೆ ಭೂಮಿ ಒಡೆಯ, ಬಡವರ ಮನೆಗಳಿಗೆ ವಿದ್ಯುತ್ ಸಂಪರ್ಕ, ಜೀತ ಪದ್ಧತಿ ನಿರ್ಮೂಲನೆ, ಮಲ ಹೊರುವ ಪದ್ಧತಿ ನಿರ್ಮೂಲನೆ ಮುಂತಾದ ಕ್ರಾಂತಿಕಾರಿ ಕಾನೂನನ್ನು ಜಾರಿಗೆ ತಂದು ದಾಖಲೆ ಬರೆದ ಡಿ.ದೇವರಾಜು ಅರಸು ಅವರು ಅದ್ವಿತೀಯ ಆಡಳಿತಗಾರ ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಹೇಳಿದರು.

ನಗರಸಭೆ ಸಭಾಂಗಣದಲ್ಲಿ ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅರಸುರವರ ಭಾವ ಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಶೋಷಿತ ಸಮಾಜ, ಹಿಂದುಳಿದ ಸಮುದಾಯಗಳಿಗೆ ನ್ಯಾಯ ಒದಗಿಸಬೇಕೆಂಬ ಮಹತ್ತರವಾದ ಆಶಯದೊಂದಿಗೆ ದಿ.ದೇವರಾಜ ಅರಸುರವರು ಆಡಳಿತದಲ್ಲಿ ಅನೇಕ ಸುಧಾರಣಾ ಕ್ರಮಗಳನ್ನು ಜಾರಿಗೆ ತಂದರು ಎಂದರು.

ಪ್ರಧಾನಿ ಇಂದಿರಾ ಗಾಂಧಿರವರ ಕಾಲಘಟ್ಟದಲ್ಲಿ ಬಡವರಿಗಾಗಿ 20 ಅಂಶಗಳ ಕಾರ್ಯಕ್ರಮ ರೂಪಿಸಿದ್ದರು. ಅದನ್ನು ರಾಜ್ಯದಲ್ಲಿ ಜಾರಿಗೆ ತರಲು ಒತ್ತು ನೀಡಿದರು ಎಂದರು. ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಆರೀಫ್, ಸದಸ್ಯರಾದ ಮಂಜುನಾಥ್, ಫಷರೋಜ್, ಅಜ್ಮತ್ ಉಲ್ಲಾ ಖಾನ್, ಮುನಜಿಲ್ ಆಗಾ, ಫಯಾಜ್, ಗ್ಯಾಬ್ರಿಯಲ್, ಸೋಮಶೇಖರ್, ಮೋಯಿನ್ ಖುರೇಷಿ, ಮಂಜುಳಾ, ಮಹಾಲಕ್ಷ್ಮಿ, ಪವಿತ್ರ, ಆಯಿಷಾ ಬಾನು, ವಿಜಯಕುಮಾರಿ, ಜಯಲಕ್ಷ್ಮಮ್ಮ, ಮಜಹತ್ ಜಹಾ, ತೇಜಸ್ವಿನಿ ಉಪಸ್ಥಿತರಿದ್ದರು.

### ಉಳುವವನೆ ಭೂಮಿ ಒಡೆಯ

ಆಗಿನ ಕಾಲದಲ್ಲಿ ಬಡವರ ಧ್ವನಿ ಕೇಳುವವರೇ ಇರಲಿಲ್ಲ. ಹಾಗಾಗಿ ಅದನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಗೇಣಿದಾರರ ಪರವಾಗಿ ಪ್ರತಿ ತಾಲೂಕಿನಲ್ಲಿ ವಕೀಲರನ್ನು ಗುರುತಿಸಿ ಕಾನೂನು ನೆರವು ಕಲ್ಪಿಸಿದರು. ವೀರಪ್ಪಮೊಯ್ಲಿ, ಧರಂಸಿಂಗ್, ಮಲ್ಲಿಕಾರ್ಜುನ ಖರ್ಗೆ, ಜನಾರ್ಧನ ಪೂಜಾರಿ, ಎಚ್. ವಿಶ್ವನಾಥ್, ಡಿ. ಟಿ. ರಾಮು ಸೇರಿ ಅನೇಕ ನಾಯಕರನ್ನು ಗುರುತಿಸಿ ಗೇಣಿದಾರರ ಪರವಾಗಿ ನಿಲ್ಲುವಂತೆ ಮಾಡಿದರು. ಇದರ ಪರಿಣಾಮ ಕೂಲಿ ಕೆಲಸ ಮತ್ತು ಗುತ್ತಿಗೆ ಮೇಲೆ ಭೂಮಿ ಉಳುತ್ತಿದ್ದವರು ಮಾಲೀಕರಾದರು. ಇದು ಮಧ್ಯಮ ವರ್ಗದವರ ಪ್ರಭಾವ ಹೆಚ್ಚಾಗಲು ಕಾರಣ ಎಂದು ತಿಳಿಸಿದರು.



### ದೇವರಾಜು ಅರಸು ಅವರ ಸುಧಾರಣೆಗಳ ಫಲಾನುಭವಿಗಳಾಗಿದ್ದೇವೆ – ಡಾ.ಜಯಣ್ಣ

ಆಯುಕ್ತ ಡಾ.ಜಯಣ್ಣ ಮಾತನಾಡಿ, ದೇವರಾಜ ಅರಸುರವರು ಕರ್ನಾಟಕಕ್ಕೆ ಮಾದರಿ. ಸಿದ್ದರಾಮಯ್ಯ ಅವರಿಗಿಂತ ಮೊದಲು ಧೀರ್ಘ ಕಾಲ ಮುಖ್ಯಮಂತ್ರಿಗಳಾಗಿ ಆಡಳಿತ ಮಾಡಿದ ದಾಖಲೆ ಅವರ ಹೆಸರಲ್ಲಿತ್ತು. ಇಂದಿರಾಗಾಂಧಿರವರು ಪ್ರಧಾನಿಯಾಗಿದ್ದಾಗ ತೆಗೆದುಕೊಂಡ ಸಾಮಾಜಿಕ ಸುಧಾರಣೆಯ ಕಾರ್ಯಕ್ರಮಗಳನ್ನು ದೇವರಾಜ ಅರಸುರವರು ಅನುಷ್ಠಾನಕ್ಕೆ ತಂದರು. ಇಂದು ಚುನಾಯಿತ ಸದಸ್ಯರ ಆದಿಯಾಗಿ ಪ್ರತಿಯೊಬ್ಬರು ಅವರು ತಂದ ಸುಧಾರಣೆಗಳ ಫಲಾನುಭವಿಗಳಾಗಿದ್ದೇವೆ ಎಂದರು. ಶಿಕ್ಷಣದಲ್ಲಿ ವಿದ್ಯಾರ್ಥಿಗಳಿಗೆ ವಸತಿ ನಿಲಯ, ಎಸ್ಸಿ ಎಸ್ಟಿಗಿದ್ದ ಮೀಸಲಾತಿಯನ್ನು ಸಾಮಾಜಿಕ, ರಾಜಕೀಯ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ಎಲ್ಲ ಹಿಂದುಳಿದ ವರ್ಗಗಳಿಗೆ ಮೀಸಲಾತಿ ವಿಸ್ತರಣೆ ಮಾಡಿದರು. ಸಂವಿಧಾನ ಶೇಕಡ 50ರಷ್ಟು ಮೀರಬಾರದೆಂದು ಹೇಳುತ್ತದೆ. ಆದರೆ, ಅರಸುರವರು ಮೀಸಲಾತಿ ಪ್ರಮಾಣ ಶೇ. 58ಕ್ಕೆ ಕಾಯ್ದಿರಿಸಿದರು. ಈ ಬಗ್ಗೆ ಸಾಂವಿಧಾನಿಕ ಚರ್ಚೆ ನಡೆದು ಅಂತಿಮವಾಗಿ ಸುಪ್ರೀಂ ಕೋರ್ಟ್ ಕೂಡ ಶೇ.58ರಷ್ಟು ಮೀಸಲಾತಿಯನ್ನು ಎತ್ತಿ ಹಿಡಿಯಿತು ಎಂದು ಹೇಳಿದರು. ಜೀತ ಪದ್ಧತಿಯಿಂದ 63 ಸಾವಿರ ಜನರನ್ನು ಮುಕ್ತಿಗೊಳಿಸಿ ಸ್ವತಂತ್ರವಾಗಿ ಬದುಕು ಕಟ್ಟಿಕೊಳ್ಳಲು ಸಾಲಸೌಲಭ್ಯ ಕಲ್ಪಿಸುತ್ತಾರೆ. ಮಲ ಹೊರವುದು ಶಿಕ್ಷಾರ್ಹ ಅಪರಾಧವೆಂದು ಹೇಳಿ ಮಲ ಹೊರುವ ಪದ್ಧತಿ ರದ್ದು ಮಾಡಿದರು. ಅರಸುರವರು ಮಾಡಿದ ಎಲ್ಲಾ ಕೆಲಸಗಳು ಸಾಮಾಜಿಕ ಕಾಯ್ದೆಗಳಾಗಿ ರೂಪುಗೊಂಡಿವೆ ಎಂದು ತಿಳಿಸಿದರು.

### ಉದ್ಯಮಿಗಳಿಗೆ ರಾಜಕೀಯ ಅಧಿಕಾರ ಬೇಡ ಎಂದಿದ್ದರು

ಅಲ್ಪಸಂಖ್ಯಾತರು, ಬೆಸ್ತರು, ದೇವಾಡಿಗರು, ರಾಜಪೂತರು ಸೇರಿದಂತೆ ಶೋಷಿತ ಮತ್ತು ಹಿಂದುಳಿದ ವರ್ಗಗಳಿಗೆ ರಾಜಕೀಯ ಅಧಿಕಾರ ನೀಡಿ ಮುಂಚೂಣಿಗೆ ತಂದರು. ಆ ಮೂಲಕ ಶೋಷಿತ ವರ್ಗಗಳಿಗೆ ಧ್ವನಿಯಾಗಿ ಅರಸು ಇದ್ದರು. ಆದರೀಗ ಈಗ ಅಕ್ರಮವಾಗಿ ಹಣ ಸಂಪಾದನೆ ಮಾಡಿದವರು ಜನರಿಗೆ ಗಿಫ್ಟ್ ಕೊಟ್ಟು ಗೆದ್ದು ಶಾಸನ ಸಭೆಯಲ್ಲಿ ಕುಳಿತಿದ್ದಾರೆ. ಆದರೆ, ದೇವರಾಜ ಅರಸುರವರು ಉದ್ಯಮಿಗಳಿಗೆ ರಾಜಕೀಯ ಅಧಿಕಾರ ಕೊಡಲು ನಿರಾಕರಿಸಿದವರು. ಉದ್ಯಮಿಗಳ ಬದಲಿಗೆ ಬಡವರ ನೋವು ಅರ್ಥ ಮಾಡಿಕೊಂಡವನ್ನು ರಾಜಕೀಯ ಅಧಿಕಾರ ನೀಡಿದವರು ಎಂದು ಹೇಳಿದರು. ಈಗ ಶೋಷಿತರ ಧ್ವನಿ ಖರೀದಿಸುವ ಸಂಪ್ರದಾಯ ಬಂದಿದೆ. ಆದ್ದರಿಂದ ಅರಸು ಮಾಡಿದ ಆಲೋಚನೆಯಂತೆ ಶೋಷಿತರ ಧ್ವನಿಯಾಗುವ ವ್ಯಕ್ತಿಗಳನ್ನು ಶಾಸನ ಸಭೆಗಳಿಗೆ ಕಳುಹಿಸಬೇಕು ಎಂದು ಕೆ.ಶೇಷಾದ್ರಿ ತಿಳಿಸಿದರು.

# ಎನ್ಕೌಂಟರ್: ತ.ನಾಡು ರಾಜಕಾರಣಿಗಳ ಧೋರಣೆಗೆ ಖಂಡನೆ



ಚಾಮರಾಜನಗರ. ಹನೂರು ಎನ್ಕೌಂಟರ್ ಪ್ರಕರಣವನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿರುವ ತಮಿಳುನಾಡು ರಾಜಕಾರಣಿಗಳ ಧೋರಣೆಯನ್ನು ಕರ್ನಾಟಕ ರಕ್ಷಣಾ ವೇದಿಕೆ ಟಿ.ಎ.ನಾರಾಯಣಗೌಡರ ಬಣದ ಜಿಲ್ಲಾ ಘಟಕ ತೀವ್ರವಾಗಿ ಖಂಡಿಸುತ್ತದೆ ಎಂದು ವೇದಿಕೆ ಜಿಲ್ಲಾಧ್ಯಕ್ಷ ಹೆಚ್.ಎನ್.ಮಂಜೇಶ್ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಹನೂರು ಎನ್ಕೌಂಟರ್ ಪ್ರಕರಣವನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿರುವ ತಮಿಳುನಾಡು ರಾಜಕಾರಣಿಗಳ ಧೋರಣೆ, ಕನ್ನಡಿಗರು- ತಮಿಳರ ನಡುವೆ ಸೌಹಾರ್ದತೆ ಕದಡುವ ಪ್ರಯತ್ನ ವಾಗಿದೆ ಎಂದು ಆರೋಪಿಸಿದರು. ಅರಣ್ಯ ಇಲಾಖೆ ಶೂಟ್‌ಔಟ್ ಪ್ರಕರಣವನ್ನು ಕೆಲವರು ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಬಳಸಿಕೊಳ್ಳುತ್ತಿರುವುದು ಹಾಗೂ ಕನ್ನಡಿಗರು ಮತ್ತು ತಮಿಳರ ನಡುವೆ ಬೆಂಕಿ ಹಚ್ಚುವ ಯತ್ನ ನಡೆಸುತ್ತಿರುವುದು ಅತ್ಯಂತ ಖಂಡನೀಯ. ಈ ಘಟನೆಗೆ ಭಾಷಾ ಆಯಾಮ ನೀಡಿ, ಕರ್ನಾಟಕದಲ್ಲಿ ತಮಿಳರ ಮೇಲೆ ದೌರ್ಜನ್ಯ ನಡೆಯುತ್ತಿದೆ ಎಂದು ಬಿಂಬಿಸಲು ತಮಿಳುನಾಡಿನ ರಾಜಕಾರಣಿಗಳು ನಡೆಸುತ್ತಿರುವ ಹತಾಶ ಯತ್ನವನ್ನು ಕರ್ನಾಟಕ ರಕ್ಷಣಾ ವೇದಿಕೆ ತೀವ್ರವಾಗಿ ವಿರೋಧಿಸುತ್ತದೆ. ಈ ಘಟನೆ ಕಳ್ಳಬೇಟೆಯ ಹಿನ್ನೆಲೆಯಲ್ಲಿ ನಡೆದಿದೆ ವಿನಾ ಮೃತಪಟ್ಟವರು ತಮಿಳರು ಎಂಬ ಕಾರಣಕ್ಕಲ್ಲ. ತಪ್ಪು ನಡೆದಿದ್ದರೆ ಕಾನೂನಡಿಯಲ್ಲಿ ತಪ್ಪಿತಸ್ಥ ರಿಗೆ ಕಠಿಣ ಶಿಕ್ಷೆಯಾಗಬೇಕು.

ಈ ಪ್ರಕರಣದ ಸತ್ಯಾಸತ್ಯತೆ ತನಿಖೆಯ ಹಂತದಲ್ಲಿದೆ. ರಾಜ್ಯ ಸರ್ಕಾರ ಈಗಾಗಲೇ ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶಿಸಿದ್ದು, ತನಿಖೆಯಿಂದ ಹೊರಬರುವ ಸತ್ಯಗಳು ಸಾರ್ವಜನಿಕವಾಗಿ ಹೊರಬರಲಿವೆ. ತನಿಖೆ ಪೂರ್ಣಗೊಳ್ಳುವ ಮೊದಲೇ ನೆರೆಯ ರಾಜ್ಯದ ರಾಜಕಾರಣಿಗಳು ರಾಜಕೀಯ ಲಾಭಕ್ಕಾಗಿ ಆರೋಪ ಮಾಡುವುದು ಮತ್ತು ತನಿಖೆಯ ದಿಕ್ಕು ತಪ್ಪಿಸುವುದು ಸರಿಯಲ್ಲ. ತಮಿಳುನಾಡು ಸರ್ಕಾರವು ಪರಿಹಾರ ಘೋಷಿಸಿರುವುದು ಮತ್ತು ಅಲ್ಲಿನ ನಾಯಕರು ಕರ್ನಾಟಕದ ಆಂತರಿಕ ವಿಷಯದಲ್ಲಿ ಮೂಗು ತೂರಿಸುತ್ತಿರುವುದು ಸರಿಯಲ್ಲ. ಕರ್ನಾಟಕದಲ್ಲಿ ಲಕ್ಷಾಂತರ ತಮಿಳರು ದಶಕಗಳಿಂದ ಕನ್ನಡಿಗರೊಂದಿಗೆ ಸೌಹಾರ್ದಯುತವಾಗಿ ಬದುಕು ಕಟ್ಟಿಕೊಂಡಿದ್ದಾರೆ. ರಾಜ್ಯ ಸರ್ಕಾರ ಅವರಿಗೆ ಎಲ್ಲ ರೀತಿಯ ಸರ್ಕಾರಿ ಸವಲತ್ತುಗಳನ್ನು ನೀಡುತ್ತಿದೆ. ಕಾವೇರಿ ವಿವಾದದ ಸಂದರ್ಭದಲ್ಲಿ ಇಲ್ಲದ ಕಾಳಜಿ ಈಗ ರಾಜಕೀಯ ಲಾಭಕ್ಕಾಗಿ ಮುನ್ನೆಲೆಗೆ ಬರುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದರು. ಕನ್ನಡಿಗರು ಮತ್ತು ತಮಿಳರ ನಡುವಿನ ಸಾಮರಸ್ಯವನ್ನು ಹಾಳುಮಾಡಲು ಯತ್ನಿಸುವವರಿಗೆ ತಕ್ಕ ಉತ್ತರ ನೀಡಲಾಗುವುದು. ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರುವ ಇಂತಹ ದ್ವಂದ್ವ ನೀತಿಯನ್ನು ಮತ್ತು ರಾಜಕೀಯ ಗಿಮಿಕ್‌ಗಳನ್ನು ಕೂಡಲೇ ನಿಲ್ಲಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಚಾಮರಾಜನಗರ ಜಿಲ್ಲಾಧ್ಯಕ್ಷ ಮಂಜೇಶ್ ಆಗ್ರಹಿಸಿದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ರೂಪೇಶ್, ಜಿಲ್ಲಾ ಸಹ ಕಾರ್ಯದರ್ಶಿ ಅರ್ಜುನ ಸುರಾಗ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹೇಮಂತ್, ಜಿಲ್ಲಾ ಕಾರ್ಯದರ್ಶಿ ಕುಮಾರ ಸಂದೀಪ್, ತಾಲೂಕು ಅಧ್ಯಕ್ಷ ಸಂತೋಷ್ ಹಂಡರಕಳ್ಳಿ, ಗೌರವಾಧ್ಯಕ್ಷ ಲಿಂಗರಾಜು ಹಾಜರಿದ್ದರು.

# ಕಾಮಗಾರಿ ಪರಿಶೀಲನೆ



ಗುಂಡ್ಲುಪೇಟೆ:ತಾಲೂಕಿನ ತೆರಕಣಾಂಬಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೆರಕಣಾಂಬಿ ಗ್ರಾಮದ ಉಪಾಧ್ಯಾಯರ ಕಟ್ಟೆ ಅಭಿವೃದ್ಧಿ ಕಾಮಗಾರಿ ಸ್ಥಳಕ್ಕೆ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಷಣ್ಮುಗಂ ಎಚ್.ಎ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಇಒ ಷಣ್ಮುಗಂ ಎಚ್.ಎ, ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಅಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಉದ್ಯೋಗ ಚೀಟಿ ಹೊಂದಿರುವ ಗ್ರಾಮೀಣ ಕೂಲಿ ಕಾರ್ಮಿಕರಿಗೆ ವರ್ಷದಲ್ಲಿ 125 ದಿನಗಳ ಕಾಲ ಉದ್ಯೋಗ ಕಲ್ಪಿಸಲಾಗುತ್ತಿದೆ. ದಿನಕ್ಕೆ 382 ರೂ. ಕೂಲಿ ನಿಗದಿಪಡಿಸಲಾಗಿದ್ದು, ಪುರುಷರು ಮತ್ತು ಮಹಿಳೆಯರಿಗೆ ಸಮಾನ ಕೆಲಸಕ್ಕೆ ಸಮಾನ ಕೂಲಿ ನೀಡಲಾಗುತ್ತಿದೆ. ಗ್ರಾಮೀಣ ಭಾಗದ ಜನರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಸೆಪ್ಟೆಂಬರ್ 15ರವರೆಗೆ ಜಾಬ್ ಕಾರ್ಡ್ ಮೇಳ ಆಯೋಜಿಸಲಾಗಿದ್ದು, ಉದ್ಯೋಗ ಚೀಟಿ ಹೊಂದಿರದ ಅರ್ಹ ಕುಟುಂಬಗಳನ್ನು ಗುರುತಿಸಿ ಯೋಜನೆಯಡಿ ನೋಂದಾಯಿಸಿ ಉದ್ಯೋಗ ಚೀಟಿ ವಿತರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮ ಪಂಚಾಯಿತಿಗೆ ವಾರ್ಷಿಕವಾಗಿ ನಿಗದಿಪಡಿಸಿರುವ ಗುರಿಗೆ ಅನುಗುಣವಾಗಿ ಯೋಜನೆಯಡಿ ಪ್ರಗತಿ ಸಾಧಿಸುವಂತೆ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಹದೇವಸ್ವಾಮಿ ಉಪಸ್ಥಿತರಿದ್ದರು.

**ಜಾನಪದ ವಿದ್ವಾಂಸ ಡಾ. ಯು.ಎಂ. ರವಿ ಅಭಿಮತ | ಸಾಮಾಜಿಕ ಕ್ರಾಂತಿಯ ಹರಿಕಾರ ಮಾಜಿ ಮುಖ್ಯಮಂತ್ರಿಗಳಾದ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ**

# ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶ ನೀಡಿದ ಡಿ.ದೇವರಾಜು ಅರಸ್

ರಾಮನಗರ: ಸಮಾಜದ ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶ ದೊರೆಯಬೇಕು ಎಂಬ ದೃಷ್ಟಿಯಿಂದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡರು. ಹಿಂದುಳಿದ ವರ್ಗಗಳ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಸಂಬಂಧಿಸಿದ ವ್ಯವಸ್ಥೆಗಳನ್ನು ಬಲಪಡಿಸುವ ಮೂಲಕ ಸಾಮಾಜಿಕ ನ್ಯಾಯಕ್ಕೆ ಹೊಸ ದಿಕ್ಕು ನೀಡಿದ್ದು ಡಿ. ದೇವರಾಜ ಅರಸರು ಎಂದು ಜಾನಪದ ವಿದ್ವಾಂಸ ಡಾ. ಯು.ಎಂ. ರವಿ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಮನಗರ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಸಾಮಾಜಿಕ ಕ್ರಾಂತಿಯ ಹರಿಕಾರ ಮಾಜಿ ಮುಖ್ಯಮಂತ್ರಿಗಳಾದ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಕಾರ್ಯಕ್ರದಲ್ಲಿ ಉಪನ್ಯಾಸ ನೀಡಿದರು. ಶ್ರಮಜೀವಿಗಳು ಮತ್ತು ಕಾಯಕ ತತ್ವಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಿದ ಅವರು,



ದುಡಿಯುವ ವರ್ಗದವರಿಗೆ ಸರ್ಕಾರದ ಅವಕಾಶಗಳು ತಲುಪುವಂತೆ ಮಾಡಿದರು. ರೈತರು ತಮ್ಮ ಜಮೀನಿನಲ್ಲಿ ಬೆಳೆ ಬೆಳೆಸುತ್ತಿದ್ದರೂ ಕೆಲ ಸಂದರ್ಭಗಳಲ್ಲಿ ಅಧಿಕಾರಿಗಳ ತಪ್ಪು ಕ್ರಮಗಳಿಂದ ಸಮಸ್ಯೆ ಎದುರಿಸುತ್ತಿದ್ದರು. ಇದನ್ನು ತಪ್ಪಿಸಲು ರೈತರು ಹಾಗೂ ಕಾರ್ಮಿಕರು ಸಂಘಟಿತರಾಗಿ ತಮ್ಮ ಹಕ್ಕುಗಳನ್ನು ರಕ್ಷಿಸಿಕೊಳ್ಳಬೇಕು ಎಂಬ ಚಿಂತನೆಗೆ ಅರಸು ಅವರು ಪ್ರೋತ್ಸಾಹ ನೀಡಿದರು. ಸಂಘಟನೆಯ ಮೂಲಕ ಜನರಲ್ಲಿ ಶಕ್ತಿ ಮತ್ತು ಒಗ್ಗಟ್ಟು ಮೂಡಿಸಲು ಅವರು ಪ್ರಯತ್ನಿಸಿದರು ಎಂದರು.

ಕನ್ನಡ ಭಾಷೆಯ ಅಭಿವೃದ್ಧಿಗೂ ದೇವರಾಜ ಅರಸು ಅವರು ಮಹತ್ವದ ಕೊಡುಗೆ ನೀಡಿದ್ದಾರೆ. ಕರ್ನಾಟಕದ ಕಚೇರಿಗಳಲ್ಲಿ ಕನ್ನಡವೇ ಆಡಳಿತ ಭಾಷೆಯಾಗಬೇಕು ಎಂಬ ನಿಲುವಿನೊಂದಿಗೆ ಕನ್ನಡದ ಬಳಕೆ ಮತ್ತು ಅಭಿವೃದ್ಧಿಗೆ ಒತ್ತು ನೀಡಿದರು. ಕವಿಗಳು ಹಾಗೂ ಸಾಹಿತಿಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಕನ್ನಡ ಸಾಹಿತ್ಯ ಕ್ಷೇತ್ರದ ಬೆಳವಣಿಗೆಗೂ ಸಹಕಾರ ನೀಡಿದ್ದರು ಎಂದು ತಿಳಿಸಿದರು.

### ಶೈಕ್ಷಣಿಕ ಕ್ಷೇತ್ರದಲ್ಲೂ ಅರಸರ ಆಶಯ

ಜಿಲ್ಲಾ ಹಿಂದುಳಿದ ಜಾತಿಗಳ ಮಹಾ ಒಕ್ಕೂಟ (ರಿ)ದ ಜಿಲ್ಲಾಧ್ಯಕ್ಷರಾದ ಜಿ. ನಾಗರಾಜು ಅವರು ಮಾತನಾಡಿ, ದೇವರಾಜ ಅರಸು ಅವರು ರಾಜ್ಯದ ಹಿಂದುಳಿದ ವರ್ಗಗಳ ಆಶಾಕಿರಣ, ಸಮಾಜದಲ್ಲಿ ಮೇಲುಕೀಳು ಎಂಬ ಭೇದಭಾವವಿಲ್ಲದೆ ಪ್ರತಿಯೊಬ್ಬರಿಗೂ ಸಮಾನ ಅವಕಾಶ ದೊರೆಯಬೇಕು ಎಂಬುದು ಅವರ ಕನಸಾಗಿತ್ತು. ಹಿಂದುಳಿದ ವರ್ಗಗಳ ಮಕ್ಕಳ ಶೈಕ್ಷಣಿಕ ಹಾಗೂ ಸಾಮಾಜಿಕ ಪ್ರಗತಿಗೆ ದೇವರಾಜ ಅರಸು ಅವರು ಮಹತ್ವದ ಕೊಡುಗೆ ನೀಡಿದ್ದಾರೆ. ಅವರು ಸ್ಥಾಪಿಸಿದ ಹಿಂದುಳಿದ ವರ್ಗಗಳ ಇಲಾಖೆಯ ಮೂಲಕ ಅನೇಕ ಮಕ್ಕಳಿಗೆ ಶಿಕ್ಷಣ ಮತ್ತು ಉತ್ತಮ ಭವಿಷ್ಯಕ್ಕೆ ದಾರಿದೀಪವಾಗಿದ್ದಾರೆ ಎಂದು ಹೇಳಿದರು.

ಹಾಸ್ಟೆಲ್‌ಗಳು ಸೇರಿದಂತೆ ವಿವಿಧ ಇಲಾಖೆಗಳ ಸೌಲಭ್ಯಗಳನ್ನು ಪಡೆದು ಶಿಕ್ಷಣ ಪಡೆಯುತ್ತಿರುವ ಮಕ್ಕಳು ದೇವರಾಜ ಅರಸು ಅವರ ಆಶಯಗಳನ್ನು ಮುಂದುವರಿಸುತ್ತಿದ್ದಾರೆ. ಯಾವುದೇ ಭೇದಭಾವವಿಲ್ಲದೆ ಎಲ್ಲ ಮಕ್ಕಳಿಗೂ ಸಮಾನ ಅವಕಾಶ ಕಲ್ಪಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಅವರು ಶ್ರಮಿಸಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪಿ.ಯು.ಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಮುಖಂಡರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ರಾಮನಗರ ಜಿಲ್ಲಾ ಹಿಂದುಳಿದ ಜಾತಿಗಳ ಮಹಾ ಒಕ್ಕೂಟ (ರಿ)ದ ಕಾರ್ಯದರ್ಶಿಗಳಾದ ನಾರಾಯಣ್ ಟಿ.ವಿ., ಮುಖಂಡರುಗಳಾದ ಡಿ. ಉಮೇಶ್, ರಾಜು, ದೇವರಾಜು, ಲೋಕೇಶ್, ಮಂಟೇದಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸತೀಶ್ ಸೇರಿದಂತೆ ಸಮುದಾಯದ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

# ನಾಗೇಂದ್ರ ರಾಜೀನಾಮೆ ನೀಡುವವರೆಗೂ ಹೋರಾಟ



ಚಾಮರಾಜನಗರ: ವಾಲ್ಮೀಕಿ ನಿಗಮ ಹಗರಣದ ಆರೋಪಿ ಬಿ.ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ಸಿಕ್ಕಿರುವುದಕ್ಕೆ ಬಿಜೆಪಿಗರು 3ನೇ ದಿನವೂ ಧರಣಿ ಮುಂದುವರೆಸಿದರು.

ಜಿಲ್ಲಾಡಳಿತ ಭವನದ ಮುಂಭಾಗದ ಜಮಾಯಿಸಿದ ಪ್ರತಿಭಟನಾ ಕಾರರು ಸಚಿವ ನಾಗೇಂದ್ರ ರಾಜೀ ನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗುತ್ತಾ ಧರಣಿ ನಡೆಸಿದರು.

ಇದೇ ಸಂದರ್ಭದಲ್ಲಿ ಮಾಜಿ ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ನಿಧನಕ್ಕೆ ಒಂದು ನಿಮಿಷಗಳ ಕಾಲ ಮೌನಾಚರಣೆ ಮಾಡಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಮಾತನಾಡಿ, ರಾಜ್ಯಾದ್ಯಂತ ಬಿಜೆಪಿ ಹಚಿವ ಬಿ.ನಾಗೇಂದ್ರ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಸುಮಾರು 187 ಕೋಟಿ ಹಗರಣವನ್ನು ಖಂಡಿಸಿ ಕಳೆದ ಮೂರು ದಿನಗಳಿಂದಲ್ಲೂ ಪ್ರತಿಭಟನೆ ಮಾಡಲಾಗುತ್ತಿದೆ. ಸಚಿವ ನಾಗೇಂದ್ರ ಅವರು, ಈ ಹಗರಣದಲ್ಲಿ ಸಿಲುಕಿ ಜೈಲಿನಿಂದ ಬಂದು ಮತೆ ಸಚಿವ ಸ್ಥಾನವನ್ನು... ಅಲಂಕರಿಸಿದ್ದಾರೆ. ಇದು ಎಸ್‌ಸಿ, ಎಸ್‌ಟಿ ಸಮಾಜಕ್ಕೆ ಕಾಂಗ್ರೆಸ್ ಸರ್ಕಾರ ಮಾಡಿ ಘೋರ ಅನ್ಯಾಯವಾಗಿದೆ ಎಂದು ಆರೋಪಿಸಿದರು. ಅಂದು ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರೇ ಅಧಿವೇಶನದಲ್ಲಿ 187 ಕೋಟಿ ಹಗರಣ ಆಗಿಲ್ಲ. ಬರಿ 80 ಕೋಟಿ ಮಾತ್ರ ಹಗರಣವಾಗಿದೆ ಎಂದು ಒಪ್ಪಿಕೊಂಡಿದ್ದಾರೆ. ಅಧಿವೇಶನದಲ್ಲಿ ದಾಖಲೆ ಆಗಿದೆ. ಇಂತಹ ಹಗರಣ ಹೊತ್ತಿರುವ ನಾಗೇಂದ್ರ ಅವರನ್ನು ಸಚಿವರನ್ನಾಗಿ ಮಾಡಿರುವುದು ಎಷ್ಟು ಸಮಂಜಸವಾದದ್ದು. ಕಾಂಗ್ರೆಸ್ ಸರ್ಕಾರದಲ್ಲಿ ಜನರಿಗೆ ಭ್ರಷ್ಟಚಾರ ರಹಿತ ಆಡಳಿತ ಕೊಡುತ್ತೇನೆ. ಬಡವರಿಗೆ ನ್ಯಾಯ ದೊರಕಿಸಿಕೊಡುತ್ತೇವೆ. ಎಂದರು.

ಚೂಡಾ ಮಾಜಿ ಅಧ್ಯಕ್ಷ ಶಾಂತಮೂರ್ತಿ ಕುಲಗಾಣ ಮಾತನಾಡಿ, ಮಾಜಿ ಸಚಿವರು, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನ ಕಾರ್ಯಕರ್ತರಾಗಿ, ನಿಷ್ಠವಂತ ಸಚಿವರಾಗಿ ಕಾರ್ಯನಿರ್ವಹಿಸಿದ ಬಿ.ಸಿ.ನಾಗೇಶ್ ಅವರು ನಿಧನರಾದ ಹಿನ್ನಲೆಯಲ್ಲಿ ಪಕ್ಷದ ಕಾರ್ಯಕರ್ತರು, ಮುಖಂಡರು ಒಂದು ನಿಮಿಷ ಮೌನಾಚರಣೆ ಶ್ರದ್ಧಾಂಜಲಿ ಸಲ್ಲಿಸಲಾಗಿದೆ ಎಂದರು.

ಧರಣಿಯಲ್ಲಿ ಬಿಜೆಪಿ ವಿಭಾಗ ಪ್ರಭಾರಿ ಸ್ವಾಮಿ ಮರಳಪುರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಿ.ವೃಷಬೇಂದ್ರಪ್ಪ, ಮೂಡ್ನಾಕೂಡು ಪ್ರಕಾಶ್, ಚೂಡಾ ಮಾಜಿ ಅಧ್ಯಕ್ಷ ಬಾಲಸುಬ್ರಹ್ಮಣ್ಯಂ, ಜಿಲ್ಲಾ ಉಪಾಧ್ಯಕ್ಷ ರಾದಗುಂಡ್ಲುಪೇಟೆ ಮುಖಂಡ ಎನ್. ಮಲ್ಲೇಶ್, ಅರಕಲವಾಡಿ ನಾಗೇಂದ್ರ, ಶಿವು ವಿರಾಟ್, ಕಾರ್ಯದರ್ಶಿಗಳಾದ ನಟರಾಜು, ಮೂಡಹಳ್ಳಿಮೂರ್ತಿ, ಎಸ್ ಟಿ ಮೋರ್ಚಾದ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಜಿಲ್ಲಾ ಉಪಾಧ್ಯಕ್ಷ ಸೀಗಮಾರನಾಯಕ, ಯುವ ಮೋರ್ಚಾದ ಜಿಲ್ಲಾಧ್ಯಕ್ಷ ಸೂರ್ಯಕುಮಾರ್, ನಗರ ಮಂಡಲ ಅಧ್ಯಕ್ಷ ಶಿವರಾಜ್, ಕೊಳ್ಳೇಗಾಲ ನಗರ ಮಂಡಲ ಅಧ್ಯಕ್ಷ ಬೂದಿತಿಟ್ಟು ಶಿವಕುಮಾರ್,ನಗರಸಭಾ ಮಾಜಿ ಸದಸ್ಯ ಶಿವಣ್ಣ ಎಸ್ ಸಿ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಸಮುದ್ರ ಶಿವಣ್ಣ, ಎಸ್ ಟಿ ಮೋರ್ಚಾದ ತಾಲೂಕು ಅಧ್ಯಕ್ಷರಾದ ಚಂದ್ರೇಶ್ ಗುಂಡಗಾಲ, ಚಿಕ್ಕತುಪ್ಪೂರು ಮಂಜುನಾಥ್, ಚಿಕ್ಕಾಟಿ ಶಿವಣ್ಣ, ಜಿಲ್ಲಾ ಕೋಶ ಅಧ್ಯಕ್ಷ ರಘು, ಕಾರ್ಯಕಾರಿಣಿ ಸದಸ್ಯ ನಾಗೇಶ್, ಕಿಲಗೆರೆ ಬಂಗಾರನಾಯಕ, ರಾಜೇಶ್, ಚಂದ್ರು, ಮಹೇಶ್, ಚೇತು,ಮನು, , ಆಲೂರು ಶಿವಾನಂದ, ಸಾಹಿತಿ ಕೋಡಿಉಗನೆ ಮಂಜು, ಕೂಸಣ್ಣ, ಭಾಸ್ಕರ್, ಆನಂದ್ ಭಗೀರಥ್ ಭಾನುಪ್ರಕಾಶ್ ಕೇಬಲ್ ರಂಗಸ್ವಾಮಿ, ಮಾರ್ಕೆಟ್ ಕುಮಾರ್, ಚಿಕ್ಕಾಟಿ ಶಿವಣ್ಣನಾಯಕ, ತಾ.ಪಂ.ಮಾಜಿ ಸದಸ್ಯ ಕಬ್ಬಹಳ್ಳಿ ರೇವಣ್ಣ, ಕಿಲಗೆರೆ ಶಶಿ, ಪೋಟೋಕೃಷ್ಣ, ಬಂಗಾರನಾಯಕ, ಮಣಿ, ಹೇಮಂತ, ಗೋಪಾಲಕೃಷ್ಣ, ಶೇಷಪ್ಪಪಾಸ್ವಾನ್, ಇತರರು ಭಾಗವಹಿಸಿದ್ದರು.

# ಉದ್ಯೋಗ ನೋಂದಣಿ ಕಾರ್ಯಕ್ರಮ




ಚಾಮರಾಜನಗರ: ತಾಲೂಕಿನ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವೃತ್ತಿ ಮಾರ್ಗದರ್ಶನ ಮತ್ತು ಉದ್ಯೋಗ ಕೋಶ, ಪ್ರೇರಣಾ ಕೋಶ ಹಾಗೂ ಆಂತರಿಕ ಗುಣಮಟ್ಟ ಭರವಸಾ ಕೋಶ ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಇವರ ಸಹಯೋಗದೊಂದಿಗೆ ವೃತ್ತಿ ಮಾರ್ಗದರ್ಶನ ಮತ್ತು ಉದ್ಯೋಗ ನೋಂದಣಿ ಕಾರ್ಯಕ್ರಮವನ್ನು ನಡೆಯಿತು.

ಚಾಮರಾಜನಗರ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ವೈಯಕ್ತಿಕ ಸಮಾಲೋಚಕರು ಹಾಗೂ ತರಬೇತುದಾರರಾದ ಕೆ.ಜಿ. ಮಹದೇವಸ್ವಾಮಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ವಿದ್ಯಾರ್ಥಿಗಳು ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಹಾಗೂ ಸರ್ಕಾರದ ಉದ್ಯೋಗ ನೋಂದಣಿ ಪ್ರಕ್ರಿಯೆ ಮತ್ತು ಲಭ್ಯವಿರುವ ವಿವಿಧ ಉದ್ಯೋಗಾವಕಾಶಗಳ ಸದುಪಯೋಗ ಪಡೆದುಕೊಳ್ಳಬೇಕು. ಎಂದು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಪಿ. ದೇವರಾಜು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಉದ್ಯೋಗಕ್ಕಾಗಿ ಕಾಯುವುದಕ್ಕಿಂತ, ಉದ್ಯೋಗಕ್ಕೆ ತಕ್ಕಂತೆ ನಮ್ಮನ್ನು ನಾವು ಸಿದ್ಧಪಡಿಸಿಕೊಳ್ಳುವುದು ಮುಖ್ಯ. ಪದವಿ ಹಂತದಲ್ಲೇ ವಿದ್ಯಾರ್ಥಿಗಳು ವೃತ್ತಿಜೀವನದ ಸ್ಪಷ್ಟ ಗುರಿ ರೂಪಿಸಿಕೊಳ್ಳುವಂತೆ ಪ್ರೇರೇಪಿಸಿದರು.

ಕಾಲೇಜಿನ ಪ್ಲೇಸ್‌ಮೆಂಟ್ ಅಧಿಕಾರಿ ಗಿರೀಶ್ ಟಿ. ಆರ್ ವಿದ್ಯಾರ್ಥಿ ಜೀವನದಲ್ಲಿ ಪದವಿ ಪಡೆಯುವುದು ಎಷ್ಟು ಮುಖ್ಯವೋ, ಅದಕ್ಕೆ ತಕ್ಕಂತೆ ಉದ್ಯೋಗಾವಕಾಶಗಳನ್ನು ಗುರುತಿಸುವುದು, ಅಗತ್ಯ ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಮತ್ತು ಸ್ಪರ್ಧಾತ್ಮಕ ಜಗತ್ತಿಗೆ ಸಿದ್ಧರಾಗುವುದು ಕೂಡ ಅಷ್ಟೇ ಮುಖ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ, ಉದ್ಯೋಗಾವಕಾಶಗಳ ಕುರಿತು ಸಂಪೂರ್ಣ ಮಾಹಿತಿ ನೀಡಲಾಯಿತು ಹಾಗೂ ಸ್ಥಳದಲ್ಲೇ ಉದ್ಯೋಗ ನೋಂದಣಿ ಮಾಡಲಾಯಿತು. ಕಾರ್ಯಕ್ರಮದಲ್ಲಿ ಐಕ್ಯೂಎಸಿ ( ಐಕ್ಯೂ ಎಸಿ) ಸಂಯೋಜಕ ರಂಗಸ್ವಾಮಿ ಆರ್, ಪ್ರಾಧ್ಯಾಪಕರಾದ ನಂಜುಂಡಯ್ಯ, ಡಾ. ರಮೇಶ್ ಬಾಬು, ಶಿವಕುಮಾರ್ ಹಾಗೂ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳು ಹಾಜರಿದ್ದರು.

# ಹನೂರು ಶೂಟೌಟ್ ಸ್ಥಳಕ್ಕೆ ಮಾನವ ಹಕ್ಕುಗಳ ಆಯೋಗ ಭೇಟಿ

ಚಾಮರಾಜನಗರ: ಜಿಲ್ಲೆಯ ಕೊಳ್ಳೇಗಾಲ ತಾಲೂಕು ವ್ಯಾಪ್ತಿಯ ಮಲೆ ಮಹದೇಶ್ವರ ವನ್ಯಜೀವಿ ಧಾಮದ ಬಫರ್ ವಲಯದ ಶಿಲುಬೆಪುರ ಅರಣ್ಯ ವ್ಯಾಪ್ತಿಯಲ್ಲಿ ಅರಣ್ಯದ 3-4 ಕಡೆ ಬೆಂಕಿ ಹಚ್ಚಿರುವುದು ವರದಿಯಾಗಿದೆ. ಸ್ಥಳೀಯರು ಮತ್ತು ಅರಣ್ಯ ಸಿಬ್ಬಂದಿ ಹರಸಹಾಸಪಟ್ಟು ಬೆಂಕಿ ನಂದಿಸಿದರೂ ಸುಮಾರು 10 ಎಕರೆ ಅರಣ್ಯ ಪ್ರದೇಶ ಹಾನಿಯಾಗಿರುವುದಾಗಿ ಮೂಲಗಳಿಂದ ತಿಳಿದುಬಂದಿದೆ.

ಈ ಕುರಿತು ಮಲೆಮಹದೇಶ್ವರ ವನ್ಯಜೀವಿಧಾಮದ ಎಸಿಎಫ್ ವಿರಾಜ್ ಅವರು ಮಾಹಿತಿ ನೀಡಿ, "ಬೆಂಕಿ ಬಿದ್ದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ. ಬೆಂಕಿ ಹಚ್ಚಿದ ಆರೋಪಿಗಳ ಪತ್ತೆ ಕಾರ್ಯ ಆರಂಭಿಸಲಾಗಿದೆ" ಎಂದು ತಿಳಿಸಿದ್ದಾರೆ.

ಕಾವೇರಿ ವನ್ಯಜೀವಿಧಾಮದ ಹೂಗ್ಯ ಶಾಖೆಯ ಹೊಳೆಮುರಿದಟ್ಟಿ ಅರಣ್ಯದಲ್ಲಿ ಇತ್ತೀಚಿಗೆ ನಡೆದ ಶೂಟೌಟ್ ಘಟನೆ ಹಿನ್ನೆಲೆಯಲ್ಲಿ, ಆಕ್ರೋಶಗೊಂಡು ಜಿಲೆಟಿನ್ ಬಳಸಿ ಕಳ್ಳಬೇಟೆ ತಡೆ ಶಿಬಿರಗಳನ್ನು ಸ್ಫೋಟಿಸಿದ ಘಟನೆ ನಡೆದಿತ್ತು. ಬಳಿಕ, ಬುಧವಾರ ಕೆಲವೆಡೆ ಕಾಡಿಗೆ ಬೆಂಕಿ ಹಚ್ಚಿದ ಘಟನೆ ನಡೆದಿದೆ. ಹೊಳೆಮುರಿದಟ್ಟಿ ಶೂಟೌಟ್ ಪ್ರಕರಣದ ಬಳಿಕ ಉದ್ವಿಗ್ನತೆ ಮುಂದುವರೆದಿದ್ದು, ಅರಣ್ಯ ಕಚೇರಿಗಳಿಗೆ ಪೊಲೀಸ್ ಭದ್ರತೆ ಒದಗಿಸಲಾಗಿದೆ.

ಸ್ಥಳಕ್ಕೆ ಭೇಟಿ ನೀಡಿದ ರಾಜ್ಯ ಮಾನವ ಹಕ್ಕು ಆಯೋಗ: ಶೂಟೌಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಬುಧವಾರ ರಾಜ್ಯ ಮಾನವ ಹಕ್ಕು ಆಯೋಗವು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಆಯೋಗದ ಅಧ್ಯಕ್ಷರ ಸೂಚನೆಯಂತೆ ಡಿವೈಎಸ್?ಪಿ ಅಶ್ವತ್ಥನಾರಾಯಣ ಮತ್ತು ತಂಡ ಭೇಟಿ ಕೊಟ್ಟು ಸಮಗ್ರ ಮಾಹಿತಿ ಕಲೆ ಹಾಕಿದ್ದಾರೆ. ಗುಂಡು ಹಾರಿಸಿದ್ದು ಹೇಗೆ?, ಎಷ್ಟು ದೂರದಲ್ಲಿದ್ದರು?, ಎಲ್ಲಿ ಮಾಂಸವನ್ನು ಇಟ್ಟಿದ್ದರು ಎಂಬುದೂ ಸೇರಿದಂತೆ ಪ್ರಕರಣದ ಸಂಪೂರ್ಣ ವಿವರ ಪಡೆದಿದ್ದಾರೆ. ಘಟನೆ ಸಂಬಂಧ ಕಾವೇರಿ ವನ್ಯಜೀವಿಧಾಮದ ಎಸಿಎಫ್ ಮರಿಸ್ವಾಮಿ ಆಯೋಗಕ್ಕೆ ಮಾಹಿತಿ ನೀಡಿದ್ದಾರೆ.

ಮೃತರ ಮನೆಗಳಿಗೆ ಬಿಜೆಪಿ ನಿಯೋಗ ಭೇಟಿ: ಶೂಟೌಟ್??ನಲ್ಲಿ ಮೃತಪಟ್ಟವರ ಮನೆಗಳಿಗೆ ಬಿಜೆಪಿ ಸತ್ಯಶೋಧನಾ ಸಮಿತಿಯು ಬುಧವಾರ ಭೇಟಿ ನೀಡಿತು. ಸಮಿತಿಯವರು ಮೃತ ಕುಮಾರ್, ಆಂತೋಣಿಸ್ವಾಮಿ ಹಾಗೂ ಪೀಟರ್ ಮನೆಗಳಿಗೆ ತೆರಳಿ ಕುಟುಂಬದ ಹಿನ್ನೆಲೆ, ಆರ್ಥಿಕ ಸ್ಥಿತಿಗತಿ, ಮಕ್ಕಳ ಶಿಕ್ಷಣ ಸೇರಿದಂತೆ ಹಲವು ಮಾಹಿತಿ ಸಂಗ್ರಹಿಸಿದರು. ಆಂತೋಣಿಸ್ವಾಮಿ ಪತ್ನಿ ಲೂರ್ದಾಮೇರಿ ಬಿಜೆಪಿ ನಿಯೋಗದ ಜೊತೆ ಮಾತನಾಡಿ, "ನನ್ನ ಪತಿ ರೈತ. ಎರಡು ಹಸುಗಳು ಸಂಜೆಯಾದರೂ ಬಾರದಿದ್ದರಿಂದ ಹುಡುಕಲು ಕುಮಾರ್, ಪೀಟರ್, ಮಹಿಮದಾಸ್ ಜೊತೆ ತೆರಳಿದ್ದರು. ಆದರೆ, ಅರಣ್ಯ ಇಲಾಖೆ ಅಮಾನುಷವಾಗಿ ಕೊಂದಿದ್ದಾರೆ. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಆಗ್ರಹಿಸಿದರು.

ಮೃತ ಕುಮಾರ್ ಪತ್ನಿ ಡೊಮಿನೊ ಲಿಯಾ ಮಾತನಾಡಿ, ಪತಿಯನ್ನು ಕೊಂದವರಿಗೆ ಕಠಿಣ ಶಿಕ್ಷೆ ಕೊಡಬೇಕು. ಕೊಂದವನ ಮುಖವನ್ನು ನನ್ನ ಮಕ್ಕಳಿಗೆ ತೋರಿಸಬೇಕು. ಹೊಸ ಮನೆ ಕಟ್ಟಿಸುತ್ತಿದ್ದು ಗೃಹ ಪ್ರವೇಶಕ್ಕೆಂದು ಬಂದವನನ್ನು ಕೊಂದಿದ್ದಾರೆ" ಎಂದು ಕಣ್ಣೀರಿಟ್ಟರು. ಬಿಜೆಪಿ ನಿಯೋಗದಲ್ಲಿ ಮಾಜಿ ಸಚಿವ ಎನ್.ಮಹೇಶ್, ಮಾಜಿ ಶಾಸಕ ನಿರಂಜನಕುಮಾರ್, ಮುಖಂಡರಾದ ವೆಂಕಟೇಶ್, ಡಾ.ಅನಿಲ್ ಥಾಮಸ್ ಹಾಗು ಲಕ್ಷ್ಮೀ ಅಶ್ವಿನ್ ಗೌಡ ಇದ್ದರು.



# ಶೋಷಿತರಿಗೆ ಬದುಕು ಕೊಟ್ಟ ಅರಸು

## ತಾಪಂ ಕಾರ್ಯನಿರ್ವಹಣಾಧಿಕಾರಿ ರವಿಚಂದ್ರ ಹೇಳಿಕೆ | ದೇವರಾಜ ಅರಸು ಜಯಂತಿ

ಎಚ್.ಡಿ. ಕೋಟೆ: ಶೋಷಿತ ವರ್ಗದ ಜನರಿಗೆ ಸ್ವಾಭಿಮಾನದ ಬದುಕು ಕಟ್ಟಿಕೊಟ್ಟವರು, ಸಮಾಜದ ಎಲ್ಲ ವರ್ಗಗಳ ಅಭಿವೃದ್ಧಿಗೆ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದ ದೂರದೃಷ್ಟಿಯ ನಾಯಕ ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅವರು ಎಂದು ತಾ.ಪಂ ಕಾರ್ಯನಿರ್ವಹಣಾಧಿಕಾರಿ ರವಿಚಂದ್ರ ತಿಳಿಸಿದರು.

ತಾಲೂಕು ಆಡಳಿತ, ತಾ.ಪಂ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಿದ್ದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಉಳುವವನೇ ಭೂಮಿಯ ಒಡೆಯ ಯೋಜನೆಯನ್ನು ಜಾರಿಗೆ ತರುವ ಮೂಲಕ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು ಸುಮಾರು 4 ಲಕ್ಷ ಎಕರೆ ಜಮೀನನ್ನು ಭೂಮಿಯನ್ನು ಉಳುತ್ತಿದ್ದ ರೈತರಿಗೆ ಹಂಚಿಕೆ ಮಾಡಿ, ಜಮೀನಿಲ್ಲದವರನ್ನು ಜಮೀನುದಾರರನ್ನಾಗಿ ಮಾಡಿದ ಧೀಮಂತ ನಾಯಕರು ಎಂದರು.

ದೇವರಾಜ ಅರಸು ಅವರು ಯಾವುದೇ ಅಡೆತಡೆಗಳಿಗೆ ಜಗ್ಗದೆ ಉಳುವವನೇ ಭೂಮಿಯ ಒಡೆಯ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದರು. ಇದರಿಂದ ದಶಕಗಳಿಂದ ಭೂಮಿಯನ್ನು ಉಳುತ್ತಿದ್ದ ರೈತರಿಗೆ ಭೂಮಿಯ ಮೇಲೆ ಹಕ್ಕು ದೊರೆಯುವಂತಾಯಿತು. ಜತೆಗೆ ಜೀತ ಪದ್ಧತಿಯನ್ನು ನಿರ್ಮೂಲನೆ ಮಾಡಲು ಜೀತ ವಿಮುಕ್ತಿ ಯೋಜನೆಯನ್ನು ಜಾರಿಗೆ ತಂದರು ಎಂದರು.

ಸಾಹಿತಿ ಕಿರಣ್ ಸಿಡ್ಲೇಹಳ್ಳಿ ಮಾತನಾಡಿ, ಡಿ. ದೇವರಾಜ ಅರಸು ಅವರು ಮುಖ್ಯಮಂತ್ರಿಯಾಗಿದ್ದ ಏಳು ವರ್ಷಗಳ ಅವಧಿ ರಾಜ್ಯದ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹದ್ದು ಎಂದರು. ಬಡವರು, ಹಿಂದುಳಿದವರು, ಶೋಷಿತರು ಹಾಗೂ ಭೂಹೀನರ ಬದುಕಿನಲ್ಲಿ ಬದಲಾವಣೆ ತರಲು ಹಲವು ಮಹತ್ವದ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಿದರು ಎಂದು ತಿಳಿಸಿದರು.




ಋಣಮುಕ್ತ ಯೋಜನೆ, ಕಾಳಿ ಯೋಜನೆ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದರು. ಹಾವನೂರು ಆಯೋಗದ ವರದಿಯನ್ನು ಜಾರಿಗೆ ತರುವ ಮೂಲಕ ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಶೈಕ್ಷಣಿಕ ಪ್ರಗತಿಗೆ ಭದ್ರ ಬುನಾದಿ ಹಾಕಿದರು. 1977ರಲ್ಲಿ ಹಿಂದುಳಿದ ವರ್ಗಗಳ ಇಲಾಖೆಯನ್ನು ಸ್ಥಾಪಿಸುವ ಮೂಲಕ ಹಿಂದುಳಿದ ವರ್ಗಗಳ ಆಶಾಕಿರಣವಾಗಿ ಗುರುತಿಸಿಕೊಂಡರು ಎಂದರು.

ಮೈಸೂರು ರಾಜ್ಯವನ್ನು ಕರ್ನಾಟಕ ರಾಜ್ಯವನ್ನಾಗಿ ಪರಿವರ್ತಿಸುವ ಮಹತ್ವದ ಕಾರ್ಯದಲ್ಲೂ ದೇವರಾಜ ಅರಸು ಅವರ ಪಾತ್ರ ಪ್ರಮುಖವಾಗಿತ್ತು. ಅಂದಿನ ರಾಜಕಾರಣಿಗಳು ಜನರಿಗೆ ಏನು ಮಾಡಬೇಕು' ಎಂಬುದನ್ನು ಯೋಚಿಸುತ್ತಿದ್ದರು. ಆದರೆ, ಇಂದಿನ ರಾಜಕಾರಣಿಗಳು ತಮಗೇನು ಬೇಕು ಎಂಬುದರ ಬಗ್ಗೆ ಹೆಚ್ಚು ಯೋಚಿಸುವಂತಾಗಿದೆ. ಆದ್ದರಿಂದ ಅರಸು ಅವರ ಜನಪರ ಆಡಳಿತ ಮತ್ತು ಸಾಮಾಜಿಕ ಬದ್ಧತೆಯನ್ನು ಇಂದಿನ ಪೀಳಿಗೆ ಅರಿತುಕೊಳ್ಳಬೇಕು ಎಂದು ಹೇಳಿದರು.

### ಗೈರಾದ ಆಹ್ವಾನಿತರು

**ಮುಜುಗರಕ್ಕೀಡಾದ ಅಧಿಕಾರಿಗಳು**

ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಆಹ್ವಾನ ಪತ್ರಿಕೆಯಲ್ಲಿ ಉಲ್ಲೇಖಿಸಿದ್ದ ಸುಮಾರು 22 ಮಂದಿ ಆಹ್ವಾನಿತರು ಕಾರ್ಯಕ್ರಮಕ್ಕೆ ಹಾಜರಾಗದಿರುವುದು ಕಂಡುಬಂತು. ಅಲ್ಲದೆ, ಪ್ರಧಾನ ಭಾಷಣಕಾರರಾಗಿ ಆಹ್ವಾನಿಸಿದ್ದವರೂ ಕಾರ್ಯಕ್ರಮಕ್ಕೆ ಆಗಮಿಸದ ಹಿನ್ನೆಲೆಯಲ್ಲಿ ಅಧಿಕಾರಿಗಳು ಮುಜುಗರಕ್ಕೀಡಾದರು. ಅರಸು ಅವರಂತಹ ಮಹತ್ವದ ಜನಪರ ನಾಯಕನ ಜಯಂತಿ ಕಾರ್ಯಕ್ರಮಕ್ಕೆ ಪ್ರಮುಖ ಆಹ್ವಾನಿತರು ಗೈರಾಗಿರುವ ಬಗ್ಗೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಟೀಕೆಗಳು ಕೇಳಿಬಂದವು.

ಇದೇ ಸಂದರ್ಭದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು. ತಹಸೀಲ್ದಾರ್ ಶ್ರೀನಿವಾಸ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಸ್. ಶಶಿಕಲಾ, ತಾಲ್ಲೂಕು ಆರೋಗ್ಯಾಧಿಕಾರಿ ರವಿಕುಮಾರ್, ತೋಟಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕಿ ನೇತ್ರಾವತಿ, ನಾಗರಾಜು, ನಂಜರಾಜು, ಸುರೇಶ್, ಚಂದ್ರಶೇಖರ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆಂಡಗಣ್ಣಸ್ವಾಮಿ, ಅಭಿಜಿತ್, ಶೈಲಾ ಸುಧಾ, ಅನುಷಾ, ನಾಗರಾಜು, ಮಹಾಲಿಂಗಯ್ಯ, ಪುಟ್ಟಮಾದು, ಮಹದೇವಯ್ಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಹಂಗಳ ಗ್ರಾಮಕ್ಕೆ ಕೃಷಿ ವಿಜ್ಞಾನಿಗಳ ತಂಡ ಭೇಟಿ, ಪರಿಶೀಲನೆ

ಗುಂಡ್ಲುಪೇಟೆ.:ತಾಲೂಕಿನ ಹಂಗಳ ಗ್ರಾಮದಲ್ಲಿ ಐಸಿಎಆರ್-ಕೆವಿಕೆ, ಚಾಮರಾಜನಗರ ವಿಜ್ಞಾನಿಗಳ ತಂಡ ಆಲೂಗಡ್ಡೆ ಬೆಳೆಯ ಸಮಗ್ರ ಬೆಳೆ ನಿರ್ವಹಣೆ ಕುರಿತು ಕ್ಷೇತ್ರ ಭೇಟಿ ನಡೆಸಿ, ಬೆಳೆ ಪರಿಸ್ಥಿತಿ ಹಾಗೂ ರೋಗಬಾಧೆಯನ್ನು ಪರಿಶೀಲಿಸಿದರು.

ಎಫ್‌ಎಲ್‌ಡಿ (ಮುಂಚೂಣಿ ಪ್ರಾತ್ಯಕ್ಷಿಕೆ) ಪ್ಲಾಟ್‌ಗಳಿಗೆ ಭೇಟಿ ನೀಡಿದ ವಿಜ್ಞಾನಿಗಳು, ಆಲೂಗಡ್ಡೆ ಬೆಳೆಯಲ್ಲಿ ಕಂಡುಬಂದ ಕ್ಷೇತ್ರ ಸಮಸ್ಯೆಗಳನ್ನು ಗುರುತಿಸಿ, ರೋಗನಿರ್ಣಯ ನಡೆಸಿದರು. ಬಳಿಕ ರೈತರಿಗೆ ರೋಗ ನಿರ್ವಹಣೆ ಹಾಗೂ ಬೆಳೆ ಸಂರಕ್ಷಣೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಲಹೆ ಮತ್ತು ಮಾಹಿತಿ ನೀಡಿದರು. ಕೃಷಿ ವಿಜ್ಞಾನಿ ಪಂಪನಗೌಡ ಹಾಗೂ ತೋಟಗಾರಿಕೆ ವಿಜ್ಞಾನಿ ಮೋಹನ್ ಕುಮಾರ್ ಅವರು ರೈತ ಮುಖಂಡ ಹಂಗಳ ಮಾಧು ಅವರ ಜಮೀನಿನಲ್ಲಿ ಆಲೂಗಡ್ಡೆ ಬೆಳೆಯ ವೀಕ್ಷಣೆ ನಡೆಸಿ, ಬೆಳೆ ನಿರ್ವಹಣೆ, ರೋಗ ನಿಯಂತ್ರಣ ಹಾಗೂ ಉತ್ತಮ ಕೃಷಿ ಪದ್ಧತಿಗಳ ಕುರಿತು ರೈತರಿಗೆ ಮಾರ್ಗದರ್ಶನ ನೀಡಿದರು.



# ಹೊಟ್ಟೆಗೆ ಹಿಟ್ಟು ಸಾಕ್ಷ್ಯಚಿತ್ರ ಪ್ರದರ್ಶನ

**ಚಾಮರಾಜನಗರ:** ಪುನರ್ಚಿತ್ ಮತ್ತು ರೋಟರಿ ಸಂಸ್ಥೆ ಸಹಯೋಗದಲ್ಲಿ ಹೊಟ್ಟೆಗೆ ಹಿಟ್ಟು ಸಾಕ್ಷ್ಯಚಿತ್ರ ಪ್ರದರ್ಶನ ನಗರದ ಟೌನ್ ಕ್ಲಬ್ ಅಸೋಸಿಯೇಷನ್ ನಲ್ಲಿ ನಡೆಯಿತು. ಈ ವೇಳೆ ಪುನರ್ಚಿತ್ ವೀರಭದ್ರನಾಯಕ ಮತನಾಡಿ, ರೋಟರಿ ಸಂಸ್ಥೆಯ ಸಹಯೋಗದಲ್ಲಿ ಪುನರ್ಚಿತ್ ಸಂಸ್ಥೆಯು ಹೊಟ್ಟೆಗೆ ಹಿಟ್ಟು ಸಾಕ್ಷ್ಯಚಿತ್ರ ಪ್ರದರ್ಶನ ಮಾಡಿದ್ದೇವೆ. ಬಹಳ ಮುಖ್ಯವಾಗಿ ಸಣ್ಣ ರೈತರು ಎದುರಿಸುವ ಸವಾಲುಗಳೇನಿದೆ. ಹವಾಮಾನ ವೈಪರ್ಯತೆಗಳೇನು ಇದೆ. ಎಲ್ಲವನ್ನು ಒಳಗೊಂಡ ಸಾಕ್ಷ್ಯ ಚಿತ್ರ. ಹಿಂದೆ ಅವರ ತೋಟಗಳಿಗೆ ಗೊಬ್ಬರ ಸಿಗುತ್ತಿತ್ತು. ಸಾಕಷ್ಟು ಜನರು ಕೃಷಿಯಲ್ಲಿ ತೊಡಗಿಸಿಕೊಳ್ಳುತಿದ್ದರು. ಆಗಾಗಿ ಸಾಮೂಹಿಕ ಕೃಷಿ ವ್ಯವಸ್ಥೆ ಇತ್ತು. ಸಾಕಷ್ಟು ಕಾಲಕಾಲಕ್ಕೆ ಮಳೆಯಿತು. ರೈತರು ಬೆಳೆಗಳನ್ನು ಚೆನ್ನಾಗಿ ಬೆಳೆಯುತ್ತಿದ್ದರು ಆದರೆ ಇಂದಿನ ಪರಿಸ್ಥಿತಿ ಒಳಗಡೆ ರೈತರು ರಾಗಿ ಬೆಳೆಯನ್ನು ಜೀವನೋಪಾಯದ ಭಾಗವಾಗಿ ಬೆಳೆಯುತ್ತಿ ದ್ದರು. ಪ್ರಸ್ತುತ ದಿನಗಳಲ್ಲಿ ಯುವಜನರು ಕೃಷಿಯಲ್ಲಿ



ಕಾಣಿಸಿಕೊಳ್ಳುತ್ತಿಲ್ಲ. ಸಣ್ಣ ರೈತರಿಗೆ ಬೆಂಬಲವಾಗಿ ನಿಂತು ಪ್ರೋತ್ಸಾಹಿಸಿದರೆ ಒಳ್ಳೆಯ ಸಾವಯವ ಆಹಾರ ಪದಾರ್ಥಗಳನ್ನು ಬೆಳೆದುಕೊಳ್ಳಬಹದು ರಾಗಿ ಬೆಳೆ, ಅದರ ಆರೋಗ್ಯ ಉಪಯೋಗಗಳ ಕುರಿತು ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ರೋಟರಿ ಸಂಸ್ಥೆಯ ಅಧ್ಯಕ್ಷ ಅಬ್ದುಲ್ ಅಜೀಜ್ ದೀನಾ ಮಾತನಾಡಿ, ಹೊಟ್ಟೆಗೆ ಹಿಟ್ಟು ಸಾಕ್ಷ್ಯಚಿತ್ರ ಪ್ರದರ್ಶನ ಕಾರ್ಯಕ್ರಮ ತುಂಬಾ ಅದ್ಭುತವಾದ ಕಾರ್ಯಕ್ರಮವಾಗಿದೆ, ಯುವ ಜನಾಂಗಕ್ಕೆ ರಾಗಿ ಬೆಳೆ ಬಗ್ಗೆ ಗೊತ್ತಿಲ್ಲ. ಇಂತಹ ಕಾರ್ಯಕ್ರಮ ಎಲ್ಲ ಕಡೆಗಳಲ್ಲೂ ಮಾಡಿ ರಾಗಿ ಬೆಳೆ ಅದರ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲಾಗುತ್ತದೆ ಎಂದರು.

ಮಾಜಿ ಜಿಲ್ಲಾ ಗೌರ್ನರ್ ಡಾ. ನಾಗಾರ್ಜುನ ಮಾತನಾಡಿ, ದೇಶದಲ್ಲಿ ಪ್ರತಿ 5 ಜನರಲ್ಲಿ ಒಬ್ಬರಿಗೆ ಮಧುಮೇಹ ರೋಗ ಇರುತ್ತದೆ. ರಾಗಿಯಲ್ಲಿ ಬಹಳಷ್ಟು ಪೌಷ್ಠಿಕಾಂಶ ಇದೆ. ಮುಖ್ಯವಾಗಿ ಕ್ಯಾಸಿಯಂ, ಪೊಟಾಸಿಯಂ ರಾಗಿ ಬಹಳ ಪ್ರಾಮುಖ್ಯತೆ ಪಡೆದುಕೊಳ್ಳುತ್ತದೆ. ರಾಗಿ ಸೇವನೆಯಿಂದ ಸಕ್ಕರೆ ಅಂಶ ಬಹಳ ಕಡಿಮೆ ಆಗುತ್ತದೆ ಎಂದರು. ಮುಖಂಡ ಸಿ. ಎಂ.ಕೃಷ್ಣಮೂರ್ತಿ ಮಾತ ನಾಡಿ, ಹಿಂದೆ ರಾಗಿ ಬೆಳೆಯನ್ನು ಹೆಚ್ಚಿನ ರೈತರು ಬೆಳೆಯುತ್ತಿದದರು. ರಾಗಿ ನವಣೆ, ಸಜ್ಜೆ ಬಡವರ ಆಹಾರವೇ. ಆಗಾಗಿ ರಾಗಿ ಬೆಳೆ ಬೆಳೆಯಲು ಸರ್ಕಾರ ಕಣ್ಣು ತೆರೆಸುವ ಕೆಲಸ ಆಗಬೇಕಿದೆ ನಾವು ಕೂಡ ಸರ್ಕಾರಕ್ಕೆ ರಾಗಿ ಬೆಳೆಯಲು ಪ್ರೋತ್ಸಾಹ ನೀಡಬೇಕು ಮುಂದಿನ ದಿನಗಳಲ್ಲಿ. ಮನವಿ ಸಲ್ಲಿಸಲಾಗುತ್ತದೆ ಎಂದರು. ರೋಟರಿ ಮಾಜಿ ಅಧ್ಯಕ್ಷರಾದ ಕಾಳನಹುಂಡಿ ಗುರುಸ್ವಾಮಿ, ಕಾಗಲವಾಡಿ ಚಂದ್ರು, ಸದಸ್ಯ ಉಲ್ಲಾಸ್ ಇತರರು ಅಭಿಪ್ರಾಯ ವ್ಯಕ್ತ ಪಡಿಸಿದರು.

**ಪ್ರತಿಭಟನೆ ಮಾಡಿದ ಸಂಘದ ನಿರ್ದೇಶಕರು. ಸದಸ್ಯರು**

# ಸಂಘದ ಬೈಲಾ ತಿದ್ದುಪಡಿಗೆ ವಿರೋಧ

ಚಾಮರಾಜನಗರ, ಚಾಮರಾಜನಗರ ತಾಲೂಕು ಕುರುಬರ ಸಂಘದ ಬೈಲಾವನ್ನು ತಿದ್ದುಪಡಿ ಮಾಡುವ ಮೂಲಕ ಅಧ್ಯಕ್ಷ ಉಮೇಶ್ ಸರ್ವಾಧಿಕಾರಿ ಧೋರಣೆ ಅನುಸರಿಸುತ್ತಿದ್ದು, ಸಂಘದ ಆದಾಯದ ಮೇಲೆ ಕಣ ?ಣಟ್ಟು ಬೈಲಾ ತಿದ್ದುಪಡಿ ಮಾಡುತ್ತಿದ್ದಾರೆ ಎಂದು ಆರೋಪಿಸಿ ಸಂಘದ ಮಾಜಿ ಅಧ್ಯಕ್ಷರು, ನಿರ್ದೇಶಕರು ಹಾಗು ಕೆಲ ಸದಸ್ಯರು ಪ್ರತಿಭಟನೆ ಮಾಡಿದರು.



ಸಭೆಯಿಂದ ಹೊರ ಬಂದ ಸಂಘದ ಮಾಜಿ ಅಧ್ಯಕ್ಷ ಬಸಪ್ಪನಪಾಳ್ಯ ರಾಜಶೇಖರ್, ಸೋಮಣ್ಣೇಗೌಡ, ಉಪಾಧ್ಯಕ್ಷ ಮಹೇಶ್, ನಿರ್ದೇಶಕರು ಮತ್ತು ಸದಸ್ಯರು ಸಂಘದ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿ, ಅಧ್ಯಕ್ಷ ಉಮೇಶ್ ವಿರುದ್ಧ ಘೋಷಣೆ ಕೂಗಿದರು. ಈ ಸಂದರ್ಭದಲ್ಲಿ ಮಾತನಾಡಿದ ಸೋಮಣ್ಣೇಗೌಡ ಅಧ್ಯಕ್ಷ ಉಮೇಶ್ ಸರ್ವ ಸದಸ್ಯರಿಗೆ ಬೆಲೆ ನೀಡುತ್ತಿಲ್ಲ. ತಮ್ಮದೇ ರೀತಿಯಲ್ಲಿ ಸರ್ವಧಿಕಾರಿಯಂತೆ ವರ್ತನೆ ಮಾಡುತ್ತಿದ್ದಾರೆ. ಸಂಘ ಸಂಕಷ್ಟದಲ್ಲಿದ್ದಾಗ ಕಟ್ಟಿ ಬೆಳೆಸಿದವರು ನಾವುಗಳು. ಬಹಳಷ್ಟು ಮಂದಿ ಹಿರಿಯರು ಕುರುಬರ ಸಂಘಕ್ಕಾಗಿ ತಮ್ಮ ಜೀವ ಮಾನವನ್ನೇ ಸವೆಸಿದ್ದಾರೆ. ಇಂಥ ಸಂಘದಲ್ಲಿ ಅಧ್ಯಕ್ಷರಾಗಿರುವ ಉಮೇಶ್ ಸ್ವಾರ್ಥಕ್ಕಾಗಿ ಬೈಲಾ ತಿದ್ದುಪಡಿ ಮಾಡುತ್ತಿದ್ದಾರೆ. ಅಲ್ಲದೇ ನೂರು ರೂ. ಕಟ್ಟಿರುವ ಬಡ ಸದಸ್ಯರನ್ನು ಸಂಘದಿಂದ ಹೊರಗಿಡುವ ಪ್ರಯತ್ನ ಮಾಡುತ್ತಿದ್ದಾರೆ. ಸಂಘವು ಶ್ರೀಮಂತರ ಕೈಗೆ ಹೋಗುವಂತೆ ಮಾಡುತ್ತಿದ್ದಾರೆ. ಈ ಸಭೆಯನ್ನು ನಾವು ವಿರೋಧ ಮಾಡಿದ್ದು, ತಿದ್ದುಪಡಿಗೆ ಅವಕಾಶ ನೀಡುವುದಿಲ್ಲ. ಕಾನೂನು ಹೋರಾಟ ಮಾಡುವುದಾಗಿ ತಿಳಿಸಿದರು. ಪ್ರತಿಭಟನೆಯಲ್ಲಿ ಸಂಘದ ಉಪಾಧ್ಯಕ್ಷ ಮಹೇಶ, ನಿರ್ದೇಶಕರಾದ ಗೋವಿಂದ, ಹಳೇಪುರ ಮಂಜುನಾಥ, ಮರಿಸ್ವಾಮಿ, ರಾಜೇಶ, ಬಂಗಾರು, ರೇವಣ್ಣ, ಬಸವಣ್ಣ, ಕುದೇರು ಪ್ರಭು, ಶಿವಕುಮಾರ್, ಮಾಜಿ ಸಹ ಕಾರ್ಯದರ್ಶಿ ಮಣ ಕಂಠ, ಮುಖಂಡರಾದ ವಿಷಕಂಠೇಗೌಡ, ಗುರು, ಮಾದಾಪುರ ರವಿಕುಮಾರ್, ಆನಂದ ಪುಟ್ಟಸ್ವಾಮಿ, ಸಾಗರ್, ನಾಗಣ್ಣೇಗೌಡ , ಸಿದ್ದೇಶ, ಚಿಕ್ಕಮಾದೇಗೌಡ, ವೆಂಕಟೇಶ್, ಕೆಲ್ಲಂಬಳ್ಳಿ ರಾಜು, ಮಾದಪ್ಪ, ಮಲ್ಲೇಶ ಮೊದಲಾದವರು ಇದ್ದರು.

# ಕಬ್ಬಹಳ್ಳಿಯಲ್ಲಿ ವಿಶ್ವ ಛಾಯಾಗ್ರಹಣ ದಿನಾಚರಣೆ

**ಗುಂಡ್ಲುಪೇಟೆ:** ತಾಲೂಕಿನ ಕಬ್ಬಹಳ್ಳಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಶಾಲೆಯ ಇಕೋ ಕ್ಲಬ್ ಆಶ್ರಯದಲ್ಲಿ ವಿಶ್ವ ಛಾಯಾಗ್ರಹಣ ದಿನವನ್ನು ಆಚರಿಸಲಾಯಿತು.




ಪಟ್ಟಣದ ವನ್ಯಜೀವಿ ಛಾಯಾಗ್ರಾಹಕ ಆರ್.ಕೆ. ಮಧು ಕಾರ್ಯಕ್ರಮ ಉದ್ಘಾಟಿಸಿ, ಛಾಯಾಗ್ರಹಣದ ಇತಿಹಾಸ ಹಾಗೂ ಅದರ ಬೆಳವಣಿಗೆಯ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಫಿಲ್ಮ್ ಕ್ಯಾಮೆರಾದಿಂದ ಡಿಜಿಟಲ್ ಕ್ಯಾಮೆರಾವರೆಗೆ, ಕಪ್ಪು-ಬಿಳುಪು ಚಿತ್ರಗಳಿಂದ ಕಲರ್ ಛಾಯಾಚಿತ್ರಗಳವರೆಗೆ ಛಾಯಾ ಗ್ರಹಣ ಕ್ಷೇತ್ರದಲ್ಲಿ ನಡೆದಿರುವ ರೋಚಕ ಬದಲಾವಣೆಗಳನ್ನು ವಿವರಿಸಿದರು.

1826ರಲ್ಲಿ ಜೋಸೆಫ್ ನೈಸೆಫೋರ್ ನಿಪ್ಸ್ ತೆಗೆದ ಪ್ರಾರಂಭಿಕ ಛಾಯಾಚಿತ್ರದಿಂದ 1975ರಲ್ಲಿ ತಯಾರಾದ ಡಿಜಿಟಲ್ ಕ್ಯಾಮೆರಾವರೆಗಿನ ಛಾಯಾಗ್ರಹಣದ ಪಯಣವನ್ನು ಪರಿಚಯಿಸಿದ ಅವರು, ಉತ್ತಮ ಛಾಯಾಚಿತ್ರ ಮೂಡಿಸಲು ಛಾಯಾಗ್ರಾಹಕನಲ್ಲಿ ತಾಳ್ಮೆ, ಸಮಯಪ್ರಜ್ಞೆ ಹಾಗೂ ಚಾಕಚಕ್ಯತೆ ಅಗತ್ಯ ಎಂದು ತಿಳಿಸಿದರು. ತಾವು ಬಳಸಿದ ವಿವಿಧ ಕ್ಯಾಮೆರಾಗಳು ಹಾಗೂ ತೆಗೆದಿರುವ ವನ್ಯಜೀವಿ ಛಾಯಾಚಿತ್ರಗಳನ್ನು ವಿದ್ಯಾರ್ಥಿಗಳಿಗೆ ಪ್ರದರ್ಶಿಸಿ, ಛಾಯಾಗ್ರಹಣದ ವಿವಿಧ ಮಜಲುಗಳನ್ನು ವಿವರಿಸಿದರು. ಬಳಿಕ ವಿದ್ಯಾರ್ಥಿಗಳಿಗೆ ಕ್ಯಾಮೆರಾ ನೀಡಿ ಛಾಯಾಚಿತ್ರ ತೆಗೆಯುವ ಪ್ರಾತ್ಯಕ್ಷಿಕೆ ನಡೆಸಿದರು.

ಶಾಲೆಯ ಮುಖ್ಯಶಿಕ್ಷಕ ನಾಗರಾಜ ಶರ್ಮಾ ಮಾತನಾಡಿ, "ಛಾಯಾಗ್ರಹಣ ಕೇವಲ ಕಲೆಯಲ್ಲ; ಅದು ಓದೂ ಹೌದು. ಫೋಟೋ ಜರ್ನಲಿಸಂ ಕ್ಷೇತ್ರದಲ್ಲಿ ಸಾಕಷ್ಟು ಅವಕಾಶಗಳಿದ್ದು, ವಿದ್ಯಾರ್ಥಿಗಳು ಈ ಕ್ಷೇತ್ರವನ್ನು ಆಯ್ಕೆಯಾಗಿ ಪರಿಗಣಿಸಬೇಕು" ಎಂದರು. ಇಕೋ ಕ್ಲಬ್ ಸಂಚಾಲಕ ಯೋಗೀಶ್ ರವರು ವಿದ್ಯಾರ್ಥಿಗಳಿಗೆ ಮೊಬೈಲ್ ಛಾಯಾಗ್ರಹಣದ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾಮಾಜಿಕ ನ್ಯಾಯದ ಹಾದಿಯಲ್ಲಿ ಅರಸು ಆಡಳಿತದ ಹೆಜ್ಜೆಗುರುತು: ಲಕ್ಷ್ಮೀಕಾಂತ್

**ಪಿರಿಯಾಪಟ್ಟಣ:** ಮಾಜಿ ಮುಖ್ಯಮಂತ್ರಿ ದಿ. ಡಿ. ದೇವರಾಜ ಅರಸು ಅವರು ಹಿಂದುಳಿದ, ಶೋಷಿತ ಹಾಗೂ ದುರ್ಬಲ ವರ್ಗಗಳ ಅಭಿವೃದ್ಧಿಗೆ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ಸಾಕಾರಗೊಳಿಸಿದ ಧೀಮಂತ ನಾಯಕರು ಎಂದು ರಾವಂದೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಇಂಗ್ಲಿಷ್ ಉಪನ್ಯಾಸಕ ಲಕ್ಷ್ಮೀಕಾಂತ್ ಹೇಳಿದರು.

ಪಟ್ಟಣದ ಡಿ. ದೇವರಾಜ ಅರಸು ಕಲಾಭವನದಲ್ಲಿ ತಾಲೂಕು ಆಡಳಿತ, ಪುರಸಭೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 111ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭೂ ಸುಧಾರಣಾ ಕಾಯ್ದೆ ಜಾರಿಗೊಳಿಸುವ ಮೂಲಕ ಭೂಹೀನ ರೈತರಿಗೆ ಭೂಮಿಯ ಹಕ್ಕು ದೊರಕುವಂತೆ ಮಾಡಿದ ಅರಸು ಅವರು ದೂರದೃಷ್ಟಿಯ ಆಡಳಿತಗಾರರಾಗಿದ್ದರು. ಇನಾಮ್ದಾರಿ ಪದ್ಧತಿ ನಿರ್ಮೂಲನೆ, ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಹಾವನೂರು ಆಯೋಗದ ಶಿಫಾರಸುಗಳ ಜಾರಿ ಹಾಗೂ ಮೀಸಲಾತಿ ವ್ಯವಸ್ಥೆಗೆ ಬಲ ನೀಡುವ ಮೂಲಕ ಸಾಮಾಜಿಕ ನ್ಯಾಯಕ್ಕೆ ಹೊಸ ಆಯಾಮ ಕಲ್ಪಿಸಿದರು.ಮೈಸೂರು ರಾಜ್ಯವನ್ನು 1973ರಲ್ಲಿ ಕರ್ನಾಟಕ ಎಂದು ಮರುನಾಮಕರಣ ಮಾಡುವ ಐತಿಹಾಸಿಕ ನಿರ್ಧಾರ ಕೈಗೊಂಡ ಅರಸು ಅವರು ರಾಜ್ಯದ ಸಾಂಸ್ಕೃತಿಕ ಮತ್ತು ಸಾಮಾಜಿಕ ಏಕತೆಗೆ ಮಹತ್ವದ ಕೊಡುಗೆ ನೀಡಿದರು. ಬಡವರು, ದಲಿತರು, ಅಲ್ಪಸಂಖ್ಯಾತರು ಹಾಗೂ ಶೋಷಿತ ವರ್ಗಗಳ ಪರವಾಗಿ ಧ್ವನಿ ಎತ್ತಿದ ಅವರು, ರಾಜಕಾರಣವನ್ನು ಜನಸೇವೆಯ ಮಾರ್ಗವನ್ನಾಗಿ ರೂಪಿಸಿದ ಅಪರೂಪದ ನಾಯಕ ಅರಸು.ಕರ್ನಾಟಕದ ಸಾಮಾಜಿಕ ಪರಿವರ್ತನೆಯ ಹರಿಕಾರರಾಗಿದ್ದ ಅರಸು ರವರು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ, ಸಮಾನತೆ ಹಾಗೂ ಅವಕಾಶ ದೊರಕಬೇಕು ಎಂಬ ಆಶಯದೊಂದಿಗೆ ಆಡಳಿತ ನಡೆಸಿದರು. ಹಿಂದುಳಿದ ವರ್ಗಗಳು ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಸಬಲಗೊಳ್ಳಲು ಹಲವು ಮಹತ್ವದ ಕ್ರಮಗಳನ್ನು ಕೈಗೊಂಡರು. ಸಮಾನತೆಯ ಸಮಾಜ ನಿರ್ಮಾಣಕ್ಕೆ ಅವರು ಹಾಕಿದ ಅಡಿಪಾಯ ಇಂದಿಗೂ ಪ್ರಸ್ತುತವಾಗಿದ್ದು, ಅವರ ಜನಪರ ನೀತಿಗಳು ಇಂದಿನ ಪೀಳಿಗೆಗೂ ಮಾರ್ಗದರ್ಶಕವಾಗಿವೆ ಎಂದರು.



ಶಿಕ್ಷಣ, ಸಾಮಾಜಿಕ ಸಮಾನತೆ ಹಾಗೂ ಜನಕಲ್ಯಾಣಕ್ಕೆ ಆದ್ಯತೆ ನೀಡಿದ ಅರಸು ಅವರು ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದರು. ವೃದ್ಧರು, ಅಂಗವಿಕಲರು ಹಾಗೂ ನಿರ್ಗತಿಕರ ಕಲ್ಯಾಣಕ್ಕೂ ವಿಶೇಷ ಒತ್ತು ನೀಡುವ ಮೂಲಕ ಜನಸಾಮಾನ್ಯರ ಬದುಕಿನ ಮಟ್ಟ ಸುಧಾರಿಸಲು ಶ್ರಮಿಸಿದ ಅವರು 1972ರಿಂದ 1980ರವರೆಗಿನ ಆಡಳಿತ ಅವಧಿ ಕರ್ನಾಟಕದ ಸಾಮಾಜಿಕ ಪರಿವರ್ತನೆಯ ಸುವರ್ಣ ಯುಗವಾಗಿತ್ತೆಂದು ಬಣ್ಣಿಸಲಾಗಿದೆ ಎಂದು ಅಭಿಪ್ರಾಯಪಟ್ಟರು.

ತಾಲೂಕು ಆಶ್ರಯ ಸಮಿತಿ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ಮಾತನಾಡಿ, ದೇವರಾಜ ಅರಸು ಅವರ ಅಚ್ಚಳಿಯದ ಹೆಜ್ಜೆ ಗುರುತುಗಳು ಸಮಾಜದ ಸುಧಾರಣೆಯ ದಾರಿಯನ್ನು ಇಂದಿಗೂ ತೋರಿಸುತ್ತಿವೆ. ಅವರ ಜಯಂತಿ ಕೇವಲ ಅರಸು ಮನೆತನಕ್ಕೆ ಸೀಮಿತವಾದ ಕಾರ್ಯಕ್ರಮವಲ್ಲ. ಅವರ ಜನಪರ ಆಡಳಿತ ಹಾಗೂ ಅಭಿವೃದ್ಧಿ ಯೋಜನೆಗಳ ಫಲವನ್ನು ರಾಜ್ಯದ ಜನತೆ ಇಂದಿಗೂ ಅನುಭವಿಸುತ್ತಿದ್ದಾರೆ. ಬಡತನ ನಿರ್ಮೂಲನೆಗೆ ಆದ್ಯತೆ ನೀಡಿ ಸಾಮಾಜಿಕ ಪರಿವರ್ತನೆಗೆ ಅವರು ಕಾರಣಕರ್ತರಾಗಿದ್ದರು ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಹೊಸಳ್ಳಿ ಕೃಷ್ಣೇಗೌಡ, ಅರಸು ವಂಶಸ್ಥ ಹಾಗೂ ವಕೀಲ ದೇವರಾಜ ಅರಸು, ಸಣ್ಣಸ್ವಾಮಿ ಮಾತನಾಡಿದರು.

ಕಳೆದ ಸಾಲಿನ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ, ವಿವಿಧ ಆಟೋಟ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಉತ್ತಮ ಸೇವೆ ಸಲ್ಲಿಸಿದ ಅಡುಗೆ ಸಿಬ್ಬಂದಿ ಹಾಗೂ ಸಹಾಯಕರನ್ನು ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು. ವಿವಿಧ ನಿಲಯಗಳ ವಿದ್ಯಾರ್ಥಿ, ವಿದ್ಯಾರ್ಥಿನಿಯರು ನೃತ್ಯ ಹಾಗೂ ಗಾಯನ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

ಎಂ.ಡಿ.ಸಿ.ಸಿ. ನಿರ್ದೇಶಕ ಈ.ಪಿ. ಲೋಕೇಶ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಾಜಣ್ಣ, ಉಪ ತಹಸೀಲ್ದಾರ್ ಶ್ರೀನಿವಾಸ್, ಮಾಜಿ ಪುರಸಭೆ ಅಧ್ಯಕ್ಷ ವಿಷಕಂಠಯ್ಯ, ಕಾಂಗ್ರೆಸ್ ಮುಖಂಡ ಪಿ. ಮಹದೇವ್, ಕೆಡಿಪಿ ಸದಸ್ಯ ಲಕ್ಷ್ಮೀನಾರಾಯಣ, ಮಾಜಿ ಪುರಸಭೆ ಸದಸ್ಯ ರವಿ, ರೈತ ಸಂಘದ ಮುಖಂಡ ವಿಜಯರಾಜ್ ಅರಸ್ ಸೇರಿದಂತೆ ಬಿಸಿಎಂ ನಿಲಯಗಳ ವಿದ್ಯಾರ್ಥಿಗಳು, ಮೇಲ್ವಿಚಾರಕರು, ಅಡುಗೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಮಂಡ್ಯ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

**ಆ.28, 29ರಂದು ಜಿಲ್ಲಾಧಿಕಾರಿ ಹಾಗೂ ತಾಲೂಕು ಕಚೇರಿ ಎದುರು ಸಿಪಿಐಎಂ ಪ್ರತಿಭಟನೆ**

**ಮಂಡ್ಯ:** ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸಿ, ರೈತರು–ಕೂಲಿಕಾರರಿಗೆ ಪರಿಹಾರಕ್ಕೆ ಒತ್ತಾಯಿಸಿ ಆ.28 ಮತ್ತು 29ರಂದು ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಎಲ್ಲ ತಾಲೂಕು ಕಚೇರಿಗಳ ಎದುರು ಪ್ರತಿಭಟನೆ ಮಾಡಲಾಗುವುದು ಎಂದು ಭಾರತ ಕಮ್ಯುನಿಸ್ಟ್ ಪಕ್ಷ(ಮಾರ್ಕ್ಸ್‌ವಾದಿ) (ಸಿಪಿಐಎಂ) ಜಿಲ್ಲಾ ಕಾರ್ಯದರ್ಶಿ ಟಿ.ಎಲ್.ಕೃಷ್ಣೇಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾನತಾಡಿದ ಅವರು, ಕಾವೇರಿ ಜಲಾನಯನ ಹಾಗೂ ಅಚ್ಚುಕಟ್ಟು ಪ್ರದೇಶದಲ್ಲಿ ಮಳೆಯ ತೀವ್ರ ಕೊರತೆ ಉಂಟಾಗಿದೆ. ಮಂಡ್ಯ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ರೈತರ ಬೆಳೆಗೆ ಪರಿಹಾರ ಮತ್ತು ಕೂಲಿಕಾರರಿಗೆ ಉದ್ಯೋಗ ಒದಗಿಸಬೇಕೆಂದು ಒತ್ತಾಯಿಸಲಾಗುವುದು ಎಂದರು.

ಆಗಸ್ಟ್ 28 ಮತ್ತು 29 ರಂದು ಜಿಲ್ಲೆಯ ತಾಲೂಕು ಕಚೇರಿಗಳು ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗ ಪ್ರತಿಭಟನೆ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ರೈತರು, ಕೂಲಿಕಾರರು ಸೇರಿದಂತೆ ಸಾರ್ವಜನಿಕರು ಭಾಗವಹಿಸಬೇಕೆಂದು ಸಿಪಿಐಎಂ ಮನವಿ ಮಾಡಿದೆ.

ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ತೀವ್ರ ಮಳೆ ಅಭಾವ ಎದುರಾಗಿದೆ. ರಾಜ್ಯ ಸರಕಾರದ ನೀರಾವರಿ ಸಲಹಾ ಸಮಿತಿಯು ಬೆಳೆಗಳಿಗೆ ಕೇವಲ 4 ಕಟ್ಟು ನೀರನ್ನು ಮಾತ್ರ ನೀಡುವುದಾಗಿ ಘೋಷಿಸಿರುವುದು ರೈತರಲ್ಲಿ ಆತಂಕ ಮೂಡಿಸಿದೆ. ಜಲಾನಯನ ಪ್ರದೇಶದಲ್ಲಿ ಮಳೆ ಇಲ್ಲದೆ ಕೆಆರ್‌ಎಸ್ ಅಣೆಕಟ್ಟೆಗೆ ನೀರು ಹರಿದುಬರುತ್ತಿಲ್ಲ. ಇನ್ನೊಂದೆಡೆ ತಮಿಳುನಾಡಿಗೆ ನೀರು ಹರಿಸಲಾಗುತ್ತಿದ್ದು, ಇದರಿಂದ ರೈತರು ಮತ್ತು ಕೂಲಿಕಾರರ ಬದುಕು ಹಾಗೂ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಸಿದರು.

ಸರಕಾರ ಈ ಕೂಡಲೇ ಮಂಡ್ಯ ಜಿಲ್ಲೆಯನ್ನು ತಕ್ಷಣವೇ ಬರಪೀಡಿತ ಪ್ರದೇಶ ಎಂದು ಘೋಷಿಸಬೇಕು. ಕಾವೇರಿ ನೀರಿನ ಕೊರತೆ ಹಾಗೂ ಬರ ನಿರ್ವಹಣೆಗಾಗಿ ಜಿಲ್ಲೆಗೆ 2000 ಕೋಟಿ ರೂಪಾಯಿ ಅನುದಾನ ನೀಡಬೇಕು. ರೈತರಿಗೆ ಸೂಕ್ತ ಬೆಳೆ ನಷ್ಟ ಪರಿಹಾರ ಹಾಗೂ ಕೂಲಿಕಾರರಿಗೆ ಉದ್ಯೋಗ ನಷ್ಟ ಪರಿಹಾರ ಒದಗಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಡಿಯ ಕೆಲಸದ ದಿನಗಳನ್ನು 200 ದಿನಗಳಿಗೆ ಹೆಚ್ಚಿಸಬೇಕು. ಮಂಡ್ಯ ಜಿಲ್ಲೆಯ ಎಲ್ಲಾ ರೈತರ ಸಾಲ ಮತ್ತು ಕೂಲಿಕಾರರ ಮೈಕ್ರೋಫೈನಾನ್ಸ್ ಸಾಲಗಳನ್ನು ಸಂಪೂರ್ಣ ಮನ್ನಾ ಮಾಡಬೇಕು. ಕಾವೇರಿ ನೀರಿನ ಕೊರತೆಯ ಸನ್ನಿವೇಶ ನಿರ್ವಹಣೆಗೆ 5000 ಕೋಟಿ ರೂಪಾಯಿಗಳ 'ಶಾಶ್ವತ ಪರಿಹಾರ ನಿಧಿ' ಸ್ಥಾಪಿಸಬೇಕು. ಈ ಸಂಬಂಧ ಕೇಂದ್ರ ಸರಕಾರವೂ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಜಿಲ್ಲಾ ಕಾರ್ಯಕಾರಣಿ ಸದಸ್ಯರಾದ ಎನ್.ಎಲ್.ಭರತ್‌ರಾಜ್, ಸಿ.ಕುಮಾರಿ, ಬಿ.ಹನುಮಂತು ಇದ್ದರು.



# ದೇವರಾಜ ಅರಸು ಆದರ್ಶಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು : ಡಿಸಿ



**ಮಂಡ್ಯ:** ಮಾಜಿ ಮುಖ್ಯಮಂತ್ರಿ ಹಾಗೂ ಸಾಮಾಜಿಕ ನ್ಯಾಯದ ಹರಿಕಾರ ಡಿ. ದೇವರಾಜ ಅರಸು ಅವರು ತಮ್ಮ ವೈಯಕ್ತಿಕ ಬದುಕಿಗಾಗಿ ಬದುಕಿದವರಲ್ಲ; ಜನರಿಗಾಗಿ ಬದುಕಿದ ಮಹಾನ್ ನಾಯಕರು. ಅವರ ಆದರ್ಶ, ಚಿಂತನೆ ಹಾಗೂ ಜನಪರ ಕಾರ್ಯಗಳನ್ನು ವಿದ್ಯಾರ್ಥಿಗಳು ಸೇರಿದಂತೆ ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಹೇಳಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ದಿವಂಗತ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾಜಿಕ ನ್ಯಾಯ, ಶೈಕ್ಷಣಿಕ ಪ್ರಗತಿ ಹಾಗೂ ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ದೇವರಾಜ ಅರಸು ಅವರು ಅಪಾರ ಕೊಡುಗೆ ನೀಡಿದ್ದಾರೆ. ಗ್ರಾಮೀಣ ಪ್ರದೇಶದ ಬಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ದೂರದೃಷ್ಟಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಮೂಲಕ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಿದರು ಎಂದರು.

ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ನಿಲಯವನ್ನು ಕೇವಲ ವಸತಿ ಸೌಲಭ್ಯವೆಂದು ಪರಿಗಣಿಸದೆ, ಜ್ಞಾನ ದೇಗುಲದಂತೆ ಗೌರವಿಸಬೇಕು. ಉತ್ತಮ ಶಿಕ್ಷಣ ಪಡೆದು ಜೀವನದಲ್ಲಿ ಸಾಧನೆ ಮಾಡುವುದೇ ದೇವರಾಜ ಅರಸು ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಿಂದ ಬರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳು ಅನ್ನ, ಅಕ್ಷರ ಹಾಗೂ ಆಶ್ರಯ ಒದಗಿಸುವ ಮೂಲಕ ಅವರ ಭವಿಷ್ಯ ರೂಪಿಸುವ ಪ್ರಮುಖ ಕೇಂದ್ರಗಳಾಗಿವೆ. ವಿದ್ಯಾರ್ಥಿಗಳು ತಂದೆ–ತಾಯಿಗಳ ಕನಸು ನನಸು ಮಾಡುವುದರೊಂದಿಗೆ ಸಮಾಜಕ್ಕೆ ಉತ್ತಮ ಕೊಡುಗೆ ನೀಡುವ ಸಾಧಕರಾಗಿ ಹೊರಹೊಮ್ಮಬೇಕು ಎಂದು ಕರೆ ನೀಡಿದರು.

ದೇವರಾಜ ಅರಸು ಅವರ ಪ್ರಮುಖ ಸಾಧನೆಗಳಲ್ಲಿ ಭೂ ಸುಧಾರಣಾ ಕಾಯಿದೆಗೆ ವಿಶೇಷ ಸ್ಥಾನವಿದೆ. ಉಳುವವನೇ ಭೂಮಿಯ ಒಡೆಯ ಎಂಬ ತತ್ವವನ್ನು ಜಾರಿಗೊಳಿಸುವ ಮೂಲಕ ಭೂಮಿಯಲ್ಲಿ ದುಡಿಯುತ್ತಿದ್ದ ರೈತರನ್ನೇ ಭೂಮಾಲೀಕರನ್ನಾಗಿ ಮಾಡಿದ ಐತಿಹಾಸಿಕ ಬದಲಾವಣೆಗೆ ಅವರು ಕಾರಣರಾದರು. ಶೋಷಿತರು, ದೀನದಲಿತರು ಹಾಗೂ ಆರ್ಥಿಕವಾಗಿ ಹಿಂದುಳಿದವರು ಸಮಾಜದ ಮುಖ್ಯವಾಹಿನಿಗೆ ಬರಲು ಈ ಕಾಯಿದೆ ಮಹತ್ವದ ಬದಲಾವಣೆಗೆ ಕಾರಣವಾಯಿತು ಎಂದರು.

ರೈತರಿಗೆ ತಾತ್ಕಾಲಿಕ ನೆರವು ನೀಡುವುದಕ್ಕಿಂತ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಿ ಆರ್ಥಿಕ ಹಾಗೂ ಸಾಮಾಜಿಕವಾಗಿ ಸಬಲಗೊಳಿಸುವ ದೂರದೃಷ್ಟಿ ಭೂ ಸುಧಾರಣಾ ಕಾಯಿದೆಯಲ್ಲಿತ್ತು. ಸಾಮಾಜಿಕ ಸಮಾನತೆ ಮತ್ತು ಆರ್ಥಿಕ ಸಬಲೀಕರಣಕ್ಕೆ ಈ ಕಾಯಿದೆ ಮಹತ್ವದ ಕೊಡುಗೆ ನೀಡಿದೆ ಎಂದು ತಿಳಿಸಿದರು.

**ಸಾಮಾಜಿಕ ಕ್ರಾಂತಿಯ ಹರಿಕಾರ ಡಿ. ದೇವರಾಜ ಅರಸು:** ಮೈಸೂರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಮಾಧ್ಯಮ ಸಂವಹನ ವಿಭಾಗದ ಸಹ ಪ್ರಾಧ್ಯಾಪಕ ಡಾ. ಶೈಲೇಶ್ ರಾಜೇ ಅರಸ್ ಅವರು ಮುಖ್ಯ ಭಾಷಣಕಾರರಾಗಿ ಮಾತನಾಡಿ, ದೇವರಾಜ ಅರಸು ಅವರು 1941ರಲ್ಲಿ ಪ್ರಜಾಪ್ರತಿನಿಧಿ ಸಭೆಯ ಮೂಲಕ ರಾಜಕೀಯ ಪ್ರವೇಶಿಸಿದರು. ಸ್ವಾತಂತ್ರ್ಯನಂತರ 1951ರಲ್ಲಿ ನಡೆದ ಮೊದಲ ಸಾರ್ವತ್ರಿಕ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿ ತಮ್ಮ ರಾಜಕೀಯ ಪಯಣವನ್ನು ಮುಂದುವರಿಸಿದರು ಎಂದರು.

ದೇವರಾಜ ಅರಸು ಅವರ ಆಡಳಿತಾವಧಿಯನ್ನು ಕರ್ನಾಟಕದ ಸಾಮಾಜಿಕ ಕ್ರಾಂತಿಯ ಪ್ರಮುಖ ಘಟ್ಟವೆಂದು ಗುರುತಿಸಬಹುದು. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕಾಲದಲ್ಲಿ ಆರಂಭವಾದ ಸಾಮಾಜಿಕ ಸುಧಾರಣೆಯ ಪರಂಪರೆಯನ್ನು ಸ್ವಾತಂತ್ರ್ಯನಂತರ ಅರಸು ಅವರು ಮತ್ತಷ್ಟು ಪರಿಣಾಮಕಾರಿಯಾಗಿ ಮುಂದುವರಿಸಿದರು. ಹಿಂದುಳಿದ ವರ್ಗಗಳ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಪ್ರಗತಿಗೆ ಒತ್ತು ನೀಡುವ ಮೂಲಕ ಸಾಮಾಜಿಕ ನ್ಯಾಯದ ಆಶಯವನ್ನು ಬಲಪಡಿಸಿದರು ಎಂದು ಹೇಳಿದರು.

1973ರ ನವೆಂಬರ್ 1ರಂದು ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿರುವುದು ದೇವರಾಜ ಅರಸು ಅವರ ಮತ್ತೊಂದು ಐತಿಹಾಸಿಕ ಕೊಡುಗೆಯಾಗಿದೆ. ವಿವಿಧ ಪ್ರದೇಶ, ಭಾಷೆ ಹಾಗೂ ಸಂಸ್ಕೃತಿಯ ಜನರನ್ನು ಒಂದೇ ಅಸ್ತಿತ್ವದಡಿ ಒಗ್ಗೂಡಿಸುವ ವಿಶಾಲ ಕರ್ನಾಟಕದ ಪರಿಕಲ್ಪನೆಯನ್ನು ಅವರು ಸದನದ ಮುಂದೆ ಸಮರ್ಥವಾಗಿ ಮಂಡಿಸಿದರು. ಹೀಗಾಗಿ ಸಾಮಾಜಿಕ ನ್ಯಾಯದ ಜೊತೆಗೆ ಕರ್ನಾಟಕದ ಏಕತೆ ಹಾಗೂ ಅಸ್ಮಿತೆಗೂ ಅವರು ಮಹತ್ವದ ಕೊಡುಗೆ ನೀಡಿದ ದೂರದೃಷ್ಟಿಯ ನಾಯಕರು ಎಂದು ಹೇಳಿದರು.

**ಡಿ. ದೇವರಾಜ ಅರಸು ಅವರ ಭಾವಚಿತ್ರ ಮೆರವಣಿಗೆಗೆ ಚಾಲನೆ:** ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್. ನಂದಿನಿ ಅವರು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಅಲಂಕೃತ ಡಿ. ದೇವರಾಜ ಅರಸು ಅವರ ಭಾವಚಿತ್ರ ಮೆರವಣಿಗೆಗೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಿ.ಪಿ. ಪ್ರಕಾಶ್, ಮೈಸೂರು ಸಕ್ಕರೆ ಕಂಪನಿ ನಿಯಮಿತದ ಅಧ್ಯಕ್ಷ ಸಿ.ಡಿ. ಗಂಗಾಧರ, ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಾಗೇಂದ್ರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಎ.ಎಸ್. ದೀಪಕ್, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಎಲ್. ಸಂದೇಶ್, ಮುಖಂಡರಾದ ನಟರಾಜ್, ಅಮ್ಜದ್ ಪಾಷಾ, ಅಂಜನಪ್ಪ ಸೇರಿದಂತೆ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಕೀರ್ತಿಚಕ್ರದ ಬೆಳಕು

## ಸುಬೇದಾರ್ ದೋಲೇಶ್ವರ ಸುಬ್ಬ



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಡಾರ್ಜಿಲಿಂಗ್‌ನ ಮಂಜು ಮುಸುಕಿದ ಬೆಟ್ಟಗಳ ಮಡಿಲಿನಿಂದ ಬಂದ ಗೂರ್ಖಾ ವೀರಚೇತನ,ಸುಬೇದಾರ್ ದೋಲೇಶ್ವರ ಸುಬ್ಬ. ಭಾರತೀಯ ಸೇನೆಯ 2 ಪ್ಯಾರಾ ವಿಶೇಷ ಪಡೆಯ ತೋಳ್ಬಲದ ದ್ಯೋತಕ.ಅವರ ನರನಾಡಿಗಳಲ್ಲಿ ಹರಿಯುವುದು ದೇಶಭಕ್ತಿಯ ಕೆಚ್ಚೆದೆಯ ರಕ್ತ.

**ಸ್ಫೂರ್ತಿ ಸುಧೆ - 100**

ಕಾಲಚಕ್ರ 2025ರ ಏಪ್ರಿಲ್ 11.ಜಮ್ಮು–ಕಾಶ್ಮೀರದ ಕಿಸ್ತ್ವಾರ್ ಕಾಡಿನಲ್ಲಿ ಮೃತ್ಯು ಹೊಂಚುಹಾಕಿ ಕುಳಿತಿತ್ತು. ಇಬ್ಬರು ವಿದೇಶಿ ಉಗ್ರರು ತಪ್ಪಿಸಿಕೊಳ್ಳಲು ಹವಣಿಸುತ್ತಿದ್ದರು.ಆ ಕ್ಷಣ, ಮಿಂಚಾಗಿ ಮುನ್ನುಗ್ಗಿದರು ಸುಬ್ಬ.ತಮ್ಮ ಪ್ರಾಣವನ್ನು ಪಣಕ್ಕಿಟ್ಟು,ಸಾವಿನ ಸವಾಲನ್ನು ಎದೆಗೊಟ್ಟು ಸ್ವೀಕರಿಸಿದರು.

ಸುತ್ತ ಗುಂಡುಗಳ ವರ್ಷಧಾರೆ. ಎದೆಯೊಳಗೆ ಮಾತ್ರ ಭಾರತಾಂಬೆಯ ಧ್ಯಾನ. ಒಂದು ಕ್ಷಣವೂ ಹಿಂಜರಿಯದೆ,ಸಿಡಿಲಿನಂತೆ ಎರಗಿ ಉಗ್ರರ ಸಂಹಾರ ಮಾಡಿದರು.ಅವರ ಅಸೀಮ ಧೈರ್ಯ ಮತ್ತು ಚಾಣಾಕ್ಷ ನಾಯಕತ್ವದಿಂದ ಕಾರ್ಯಾಚರಣೆ ವಿಜಯಮಾಲೆ ಧರಿಸಿತು. ಅಸಂಖ್ಯ ಜೀವಗಳಿಗೆ ಮರುಜನ್ಮ ನೀಡಿತು.

ರಾಷ್ಟ್ರ ಈ ವೀರಪುತ್ರನ ತ್ಯಾಗಕ್ಕೆ ತಲೆಬಾಗಿದೆ. ಶಾಂತಿಕಾಲದ ಎರಡನೇ ಅತ್ಯುನ್ನತ ಶೌರ್ಯಪ್ರಶಸ್ತಿ ಕೀರ್ತಿ ಚಕ್ರ ಇಂದು ಅವರ ಶೌರ್ಯಗಾಥೆಯನ್ನು ಸಾರಿ ಹೇಳುತ್ತಿದೆ.ಸುಬ್ಬ ಅವರು ಕೇವಲ ಸೈನಿಕರಲ್ಲ; ಕೋಟ್ಯಂತರ ಯುವ ಹೃದಯಗಳಿಗೆ ಸ್ಫೂರ್ತಿಯ ಸೆಲೆ. ಇವರಂಥ ವೀರರೇ ಭಾರತದ ನಿಜವಾದ ಕಾವಲು ದೇವರುಗಳು.



# ವರಮಹಾಲಕ್ಷ್ಮಿ ಹಬ್ಬದ ಸಂಭ್ರಮ

## ಪಟ್ಟಣದ ತೇರಿನ ಬೀದಿಯಲ್ಲಿ ಹೂ,ಹಣ್ಣು ವ್ಯಾಪಾರ ಜೋರು

**ಪಿರಿಯಾಪಟ್ಟಣ:** ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಪಟ್ಟಣದ ತೇರಿನ ಬೀದಿಯಲ್ಲಿ ಹೂವು, ಹಣ್ಣು ಹಾಗೂ ಪೂಜಾ ಸಾಮಗ್ರಿಗಳ ವ್ಯಾಪಾರ ಶುಕ್ರವಾರ ಭರ್ಜರಿಯಾಗಿ ನಡೆಯಿತು.

ಹಬ್ಬದ ಹಿನ್ನೆಲೆಯಲ್ಲಿ ಬೆಳಗ್ಗೆಯಿಂದಲೇ ಸುತ್ತಮುತ್ತಲಿನ ಗ್ರಾಮಗಳಿಂದ ವ್ಯಾಪಾರಿಗಳು ವಿವಿಧ ಬಗೆಯ ಹೂವು,ಹಣ್ಣು ಹಾಗೂ ಪೂಜಾ ಸಾಮಗ್ರಿಗಳನ್ನು ತಂದು ಮಾರಾಟಕ್ಕೆ ಇಟ್ಟಿದ್ದರು. ಮಲ್ಲಿಗೆ, ಸೇವಂತಿಗೆ, ಕನಕಾಂಬರ ಸೇರಿದಂತೆ ವಿವಿಧ ಹೂವುಗಳಿಗೆ ಹೆಚ್ಚಿನ ಬೇಡಿಕೆ ಕಂಡುಬಂದಿತು. ಬಾಳೆಹಣ್ಣು, ಸೇಬು, ದ್ರಾಕ್ಷಿ, ಕಿತ್ತಳೆ ಸೇರಿದಂತೆ ವಿವಿಧ ಹಣ್ಣುಗಳನ್ನು ಖರೀದಿ ಮಾಡಿದರು....

ವರಮಹಾಲಕ್ಷ್ಮಿ ವ್ರತಾಚರಣೆಗೆ ಅಗತ್ಯವಿರುವ ಅರಿಶಿಣ, ಕುಂಕುಮ, ಬಾಳೆಕಂದು, ವೀಳ್ಯದೆಲೆ, ಅಡಿಕೆ ಸೇರಿದಂತೆ ವಿವಿಧ ಪೂಜಾ ಸಾಮಗ್ರಿಗಳನ್ನು ಮಹಿಳೆಯರು ಖರೀದಿಸಿದರು.



ಮಾರುಕಟ್ಟೆಯಲ್ಲಿ ಹಬ್ಬದ ಸಂಭ್ರಮ ಕಳೆಗಟ್ಟಿದ್ದ ಹಿನ್ನಲೆ ತೇರಿನ ಬೀದಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಜನದಟ್ಟಣೆ ಹೆಚ್ಚಾಗಿತ್ತು. ವ್ಯಾಪಾರ,ವಹಿವಾಟು ಹೆಚ್ಚಾಗಿ ಸಣ್ಣ ವ್ಯಾಪಾರಿಗಳಲ್ಲಿ ಸಂತಸ ಮೂಡಿಸಿತ್ತು.

# ಉಡುಪಿ–ಬೆಂಗಳೂರು ಬಸ್ ಅಪಘಾತ: ಇಬ್ಬರು ಸಾವು– 20 ಮಂದಿಗೆ ಗಾಯ: ಡಿಸಿ ಪರಿಶೀಲನೆ

**ಮಂಡ್ಯ :** ಉಡುಪಿಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಬಸ್ ಮಂಗಳೂರು ಬೆಂಗಳೂರು ಹೆದ್ದಾರಿಯ ನಲ್ಲಿಗೆರೆ ಕ್ರಾಸ್ ಬಳಿ ಅಪಘಾತಕ್ಕೀಡಾಗಿ ಇಬ್ಬರು ಮೃತಪಟ್ಟಿದ್ದು, 20 ಮಂದಿ ಗಾಯಗೊಂಡಿದ್ದಾರೆ.

ಅಪಘಾತದ ಮಾಹಿತಿ ತಿಳಿದ ತಕ್ಷಣ ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳ ಚಿಕಿತ್ಸೆಗೆ ಜಿಲ್ಲಾಡಳಿತದಿಂದ ಅಗತ್ಯ ನೆರವು ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ.



